ಸಂಪುಟ: 13 Volume ಸಂಚಿಕೆ: 240 Issue ಪುಟಗಳು: 08 Pages ಸೋಮವಾರ 10 ನವೆಂಬರ 2025 ₹2 PRGINO. 120927(RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

'ನಿಮ್ಮ ಮೂಢನಂಬಿಕೆಯೇ ನಿಮ್ಮ ಬಡತನ ಮತ್ತು ಗುಲಾಮಗಿರಿಗೆ ಕಾರಣವಾಗಿದೆ'
ಡಾ: ಬಿ.ಆರ್. ಅಂಬೇಡ್ಕರ್

4 ಜಾತ್ರಾ ಅಂಗವಾಗಿ ಡಿ.ವೈ.ಎಸ್.ಪಿ. ಭೇಟಿ | 2 ಶಿವಕುಮಾರ ಸ್ವಾಮೀಜಿ ಜಯಂತಿ 11 ರಿಂದ | 8 ಜೈಲಿನಲ್ಲಿ ಕೈದಿಗಳಿಗೆ ರಾಜಾತಿಥ್ಯ | 3 ದಾಸ ಪರಂಪರೆಯಲ್ಲಿ ಶ್ರೇಷ್ಠ ಕನಕದಾಸರಾಗಿದ್ದರು.

# ನಾಡ ಕೆರೆಗಳಿಗೆ ನೀರ ಭಾಗ್ಯ

## 74 ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ 870 ಕೋಟಿ ವೆಚ್ಚ: ಸಿಎಂ

### ಕಬ್ಬು ಬೆಳೆಗಾರರಿಗೆ ಜೋಶಿ ದ್ರೋಹ : ಸಿಎಂ

DS ಮತ್ತು J ಎರಡನ್ನೂ ನಿಗಧಿ ಮಾಡೋದು ಕೇಂದ್ರದ ಬಿಜೆಪಿ ಸರ್ಕಾರ. ಕಬ್ಬು ಬೆಳೆಗಾರರಿಗೆ ದ್ರೋಹ ಬಗೆದದ್ದು ಪ್ರಹ್ಲಾದ್ ಜೋಶಿ. ಆದರೆ, ವಿಜಯೇಂದ್ರ ತಮ್ಮದೇ ಕೇಂದ್ರ ಸರ್ಕಾರ ಕಬ್ಬು ಬೆಳೆಗಾರರಿಗೆ ಮಾಡಿದ ದ್ರೋಹವನ್ನು ಮರೆಮಾಚಿ ಬೆಳಗಾವಿಗೆ ಹೋಗಿ ಪ್ರತಿಭಟನೆಯ ಡ್ರಾಮಾ ಮಾಡುತ್ತಿದ್ದಾರೆ. ಕೇಂದ್ರ ಸರ್ಕಾರ ಕಬ್ಬು ಬೆಳೆಗಾರರಿಗೆ ದ್ರೋಹ ಬಗೆದರೂ ರಾಜ್ಯ ಸರ್ಕಾರ ಹೆಚ್ಚುವರಿ ಹಣ ನೀಡಿ ನಮ್ಮ ಕಬ್ಬು ಬೆಳೆಗಾರರನ್ನು ಕಾಪಾಡೊ ಕೆಲಸ ಮಾಡಿದೆ ಎಂದು ಸಿಎಂ ತಿಳಿಸಿದರು.

### ಕೈದಿಗಳಿಗೆ ಐಷಾರಾಮಿ ಸೌಲಭ್ಯ:ಇಂದು ಸಭೆ

ದಾವಣಗೆರೆ, ನವೆಂಬರ್ : ಪರಪ್ಪನ ಅಗ್ರಹಾರದಲ್ಲಿ ಕೈದಿಗಳಿಗೆ ಐಷಾರಾಮಿ ಸವಲತ್ತುಗಳು ದೊರಕುತ್ತಿರುವ ಬಗ್ಗೆ ಮಾತನಾಡಿ ಸಿಎಂ, ಸಂಬಂಧಪಟ್ಟ ಅಧಿಕಾರಿಗಳು ರಜೆಯ ಮೇಲೆ ತೆರಳಿದ್ದರು. ನಾಳೆ ಗೃಹ ಸಚಿವರು ಈ ಬಗ್ಗೆ ಸಭೆ ಕರೆದಿದ್ದಾರೆ. ತಪ್ಪು ಮಾಡಿದವರ ಮೇಲೆ ಗಂಭೀರ ಕ್ರಮ ಕೈಗೊಳ್ಳಲಾಗುವುದು ಹಾಗೂ ಇನ್ನೂ ಮುಂದೆ ಇಂಥದ್ದು ನಡೆಯದಂತೆ ಕ್ರಮ ವಹಿಸಲಾಗುವುದು ಎಂದು. ಸಿಎಂ ಸಿದ್ದರಾಮಯ್ಯ

ಕೂಡ್ಲಿಗಿ : 1,70,000 ಜನರಿಗೆ ಕುಡಿಯುವ ನೀರು ಒದಗಿಸುವ ಜೊತೆಗೆ ಕೂಡ್ಲಿಗಿಯ ಅಂತರ್ಜಲ ವೃದ್ಧಿಗೆ ಶ್ರಮಿಸಿ ಯಶಸ್ವಿಯಾದ ಶಾಸಕ ಶ್ರೀನಿವಾಸ್ ಅವರನ್ನು ಪಡೆದ ಕೂಡ್ಲಿಗಿ ಜನತೆ ಅತ್ಯಂತ ಅದೃಷ್ಟವಂತರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಪಾರವಾಗಿ ಶ್ಲಾಘಿಸಿದರು.

ಕೂಡ್ಲಿಗಿ ವಿಧಾನಸಭಾ ಕ್ಷೇತ್ರದ 74 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಉದ್ಘಾಟಿಸಿ, ಹಲವು ಅಭಿವೃದ್ಧಿ ಕಾರ್ಯಕ್ರಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಬರಡು ನೆಲ ಕೂಡ್ಲಿಗಿಯನ್ನು ಹಸಿರಿನ ನೆಲವನ್ನಾಗಿ ಮಾಡಲು ಪಣತೊಟ್ಟು ಕೆಲಸ ಮಾಡುತ್ತಿರುವ ಶಾಸಕ ಶ್ರೀನಿವಾಸ್ ಅವರು ಅತ್ಯಂತ ಕ್ರಿಯಾಶೀಲರು. ಇವರಿಂದ ಕ್ಷೇತ್ರದ ಅಭಿವೃದ್ಧಿ ಅತ್ಯಂತ ವೇಗ ಪಡೆದುಕೊಂಡಿದೆ ಎಂದರು.



ನಮ್ಮದು ಅಭಿವೃದ್ಧಿ ಪರವಾದ ನುಡಿದಂತೆ ನಡೆಯುತ್ತಿರುವ ಸರ್ಕಾರ. ಕಳೆದ ಎರಡು ವರ್ಷಗಳಲ್ಲಿ ಕೂಡ್ಲಿಗಿ ಕ್ಷೇತ್ರಕ್ಕೆ 1750 ಕೋಟಿಗೂ ಅಧಿಕ ಮೊತ್ತದ ಹಣದಲ್ಲಿ ಬೇರೆ ಬೇರೆ ಅಭಿವೃದ್ಧಿ ಕಾರ್ಯಗಳು ನಡೆದಿವೆ. ಜೊತೆಗೆ ಚುನಾವಣೆ ವೇಳೆ ಘೋಷಿಸಿದ್ದಂತೆ ಐದು ಗ್ಯಾರಂಟಿಗಳನ್ನು ಘೋಷಿಸಿ, ಐದಕ್ಕೆ ಐದನ್ನೂ ಜಾರಿ ಮಾಡಿದ್ದೇವೆ. ರಾಜ್ಯದ ಜನರ ಮನೆ ಬಾಗಿಲಿಗೆ ಪ್ರತೀ ತಿಂಗಳು ಸರ್ಕಾರದ ಗ್ಯಾರಂಟಿಗಳು ತಲುಪುತ್ತಿವೆ. 1.20 ಕೋಟಿ ಕುಟುಂಬಗಳ ಮನೆ ಯಜಮಾನಿಯರಿಗೆ ಗೃಹಲಕ್ಷ್ಮಿ ಹಣ ಮತ್ತು ಗೃಹಜ್ಯೋತಿಯ ಸವಲತ್ತು ತಲುಪುತ್ತಿದೆ ಎಂದರು.

ಎರಡು ವರ್ಷದಲ್ಲಿ ನಮ್ಮ ಸರ್ಕಾರ ಒಂದು ಲಕ್ಷ ಕೋಟಿ ರೂಪಾಯಿಗಳನ್ನು ನೇರವಾಗಿ ರಾಜ್ಯದ ಜನರ ಜೇಬಿಗೆ ಹಾಕಿದ್ದೇವೆ ಎಂದು ಲೆಕ್ಕ ಮುಂದಿಟ್ಟರು.

### ಯಾರ ಒತ್ತಡಕ್ಕೂ ಮಣಿಯಬೇಡಿ : ಡಿಕೆಶಿ

ತುಂಗಭದ್ರಾ ಅಣೆಕಟ್ಟುವಿನ ಎಲ್ಲಾ ಕ್ರೆಸ್ಟ್ ಗೇಟ್ ಗಳನ್ನ ಬದಲಾವಣೆ ಮಾಡಲಾಗುತ್ತಿದೆ. ಈಗಾಗಲೇ ಕೆಲಸವೂ ನಡೆಯುತ್ತಿದೆ. ಎರಡನೇ ಬೆಳೆ ವಿಚಾರವಾಗಿ ಕೆಲವರು ರಾಜಕಾರಣ ಮಾಡುತ್ತಿದ್ದಾರೆ. ನಾವೇನೂ ರೈತರಿಗೆ ನೀರು ಕೊಡಬಾರದು ಎನ್ನುವ ಧೋರಣೆ ಹೊಂದಿಲ್ಲ. ಆದರೆ ಅಣೆಕಟ್ಟು ಮುಖ್ಯವೋ? ಬೆಳೆ ಮುಖ್ಯವೋ ಎಂಬುದನ್ನು ರೈತರು ಆಲೋಚಿಸಬೇಕಾಗಿ ಮನವಿ ಮಾಡುತ್ತೇನೆ. ಯಾರ ಒತ್ತಡಕ್ಕೂ ರೈತರು ಮಣಿಯಬಾರದು ಎಂದು ಮನವಿ ಮಾಡುತ್ತೇವೆ. ಕೇಂದ್ರ ಸರ್ಕಾರ ರಚನೆ ಮಾಡಿರುವ ತುಂಗಭದ್ರಾ ಸಮಿತಿಯು ನೀರು ನೀಡುವ ಬಗ್ಗೆ ತೀರ್ಮಾನ ಮಾಡುತ್ತದೆ ಎಂದು ಡಿಕೆ ಶಿವಕುಮಾರ ಹೇಳಿದರು.

### ಮೋಹನ್ ಭಾಗವತ್ ಹೇಳಿಕೆಗೆ ಉತ್ತರವಿಲ್ಲ

ಬ್ರಿಟಿಷರ ಕಾಲದಲ್ಲಿಯೇ ಆರ್.ಎಸ್.ಎಸ್ ಇತ್ತು, ಆಗಲೇ ನೋಂದಣಿ ಮಾಡಿಕೊಳ್ಳಬೇಕಿತ್ತು ಎಂಬ ಬಗ್ಗೆ ಆರ್ ಎಸ್ ಎಸ್ ಮುಖಂಡ ಮೋಹನ್ ಭಾಗವತ್ ಹೇಳಿಕೆ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಆರ್.ಎಸ್.ಎಸ್.ನ್ನು ಹೊರಗಿಡುವ ಬಗ್ಗೆ ಸರ್ಕಾರದ ಆದೇಶದಲ್ಲಿ ಹೇಳಿಲ್ಲ. ಯಾವುದೇ ಸಂಘ ಸಂಸ್ಥೆಗಳು ಆಯಾ ಜಿಲ್ಲಾಧಿಕಾರಿಗಳ ಬಳಿ ಅನುಮತಿ ಪಡೆಯಬೇಕು ಎಂದು ಹೇಳಿದೆ. ಅವರು ಹಾಗೆ ಭಾವಿಸಿಕೊಂಡಿದ್ದಾರೆ ಎಂದರು. ಭಾಗವತ್ ಹೇಳಿದ್ದಕ್ಕೆಲ್ಲ ನಾವು ಉತ್ತರಿಸಲಾಗುವುದಿಲ್ಲ ಎಂದರು.

### ಜವಾಬ್ದಾರಿಯುತ ವಕೀಲರಾಗಿ ಹೊರಹೊಮ್ಮಬೇಕು



ಮಲ್ಲಮ್ಮನುಡಿ ವಾರ್ತೆ

ಕಲಬುರಗಿ: ಭಾರತೀಯ ಸಂವಿಧಾನ ಜೀವಂತ ಗ್ರಂಥವಾಗಿದ್ದು, ಪ್ರತಿಯೊಬ್ಬರಿಗೂ ಗೌರವದಿಂದ ಬದುಕುವ ಹಕ್ಕು ನೀಡಿದೆ. ಕಾನೂನು ಪದವಿ ಪಡೆದ ನಂತರ ವಿದ್ಯಾರ್ಥಿಗಳು ವೃತ್ತಿವರತೆ ಮೈಗೂಡಿಸಿಕೊಳ್ಳಬೇಕು. ಸಮಾಜ ನಿರೀಕ್ಷಿಸುವ ಜವಾಬ್ದಾರಿಯುತ ವಕೀಲರಾಗಿ ಹೊರಹೊಮ್ಮಬೇಕು ಎಂದು ಭಾರತೀಯ ಕಾನೂನು ಆಯೋಗದ ಅಧ್ಯಕ್ಷರು, ಸುಪ್ರೀಂ ಕೋರ್ಟ್‌ನ ವಿಶ್ರಾಂತ ನ್ಯಾಯಮೂರ್ತಿ ದಿನೇಶ್ ಮಹೇಶ್ವರಿ ಹೇಳಿದರು.

ನಗರದ ಲಾಹೋಟಿ ನಗರದ ಸೇಠ್ ಶಂಕರಲಾಲ್ ಕಾನೂನು ಕಾಲೇಜಿಗೆ 65 ವರ್ಷ ತುಂಬಿದ ಪ್ರಯುಕ್ತ ಕಾಲೇಜಿನ ಸುವರ್ಣ ಮಹೋತ್ಸವ ಸಭಾಂಗಣದಲ್ಲಿ ಆಯೋಜಿಸಿದ್ದ 'ಜ್ಞಾನದ ಮುತ್ತುಗಳು' ವಿಶೇಷ ಉಪನ್ಯಾಸ ಹಾಗೂ ಕಾ ನೂನು ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು. ಕಾನೂನು ವೃತ್ತಿಗೆ ಅವಶ್ಯಕವಾಗಿರುವ ಕೌಶಲ ಮೈಗೂಡಿಸಿಕೊಳ್ಳಬೇಕು

2ನೇ ಪುಟನೋಡಿ

### ದೆಹಲಿಯ ಔತಣಕೂಟದತ್ತ ಎಲ್ಲರ ಚಿತ್ತ

ಬೆಂಗಳೂರು, ನ.9 – ದೆಹಲಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತರಿಗೆ ಆಯೋಜಿಸಲಾಗಿರುವ ಔತಣಕೂಟ ಭಾರಿ ಕುತೂಹಲ ಕೆರಳಿಸಿದ್ದು, ನವೆಂಬರ್ ಕ್ರಾಂತಿಗೆ ಮತ್ತಷ್ಟು ಪುಷ್ಠಿ ನೀಡಿದಂತಾಗಿದೆ.

ಇದೇ 14 ರಂದು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ದೆಹಲಿಗೆ ತೆರಳುತ್ತಿದ್ದು, ಆ ಸಂದರ್ಭದಲ್ಲಿ ಕೊಪ್ಪಳ ಕ್ಷೆ?ತ್ರದ ಸಂಸದ ರಾಜಶೇಖರ್ ಯತ್ನಾಳ್ ಕಾಂಗ್ರೆಸ್ನ ಸಂಸದರಿಗೆ ಹಾಗೂ ಪ್ರಮುಖರಿಗೆ ಔತಣಕೂಟ ಆಯೋಜಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೂಡ ಅದರಲ್ಲಿ ಭಾಗವಹಿಸುವ ಸಾಧ್ಯತೆ ಇದೆ. ರಾಜ್ಯದ ಅಭಿವೃದ್ಧಿ ಯೋಜನೆಗಳ ಬಗ್ಗೆ ಈ ಸಂದರ್ಭದಲ್ಲಿ ಧ್ವನಿ ಎತ್ತಲು ಮತ್ತು ಕೇಂದ್ರ ಸರ್ಕಾರ ಮಟ್ಟದಲ್ಲಿ ಬಾಕಿ ಯೋಜನೆಗಳ ಅನುಮೋದನೆಗೆ ಒತ್ತಡ ಹೆಚ್ಚಿಸಲು ಸಂಸದರಿಗೆ ಮನವರಿಕೆ ಮಾಡಿಕೊಡಲು ಈ ಸಭೆ ಆಯೋಜಿಸಲಾಗಿದೆ ಎಂದು ಹೇಳಲಾಗುತ್ತಿದೆ. ಆದರೆ ಈ ಹಂತದಲ್ಲೂ ರಾಜ್ಯ ರಾಜಕಾರಣವೇ ಹೆಚ್ಚು ಸದ್ದು ಮಾಡುತ್ತಿದೆ. ನವೆಂಬರ್‌ನಲ್ಲಿ ಸಚಿವ ಸಂಪುಟ ಪುನರ್‌ರಚನೆಯಾಗಲಿದೆ, ನಾಯಕತ್ವ ಬದಲಾವಣೆಯಾಗಲಿದೆ ಎಂಬ ಕಾರಣಕ್ಕೆ ಅಲ್ಲಲ್ಲಿ ಪ್ರತ್ಯೆ?ಕ ಸಭೆಗಳು ಗಮನ ಸೆಳೆದಿದ್ದವು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಯಾವ ನವೆಂಬರ್ ಕ್ರಾಂತಿಯೂ ಇಲ್ಲ.

2ನೇ ಪುಟನೋಡಿ

### ಸೂಕ್ತ ಭದ್ರತೆ ಒದಗಿಸಲು ಸಕ್ಕರೆ ಕಾರ್ಖಾನೆಗಳ ಮನವಿ

ಮಲ್ಲಮ್ಮನುಡಿ ವಾರ್ತೆ

ಬಾಗಲಕೋಟೆ, ನ.9 – ಪ್ರಸಕ್ತ ಸಾಲಿನ ಹಂಗಾಮಿಗೆ ಸರ್ಕಾರ ಹೊರಡಿಸಿದ ಆದೇಶದನ್ವಯ ಪ್ರತಿ ಮೆಟ್ರಿಕ್ ಟನ್ ಕಬ್ಬಿಗೆ ನಿಗದಿಪಡಿಸಿದ ದರ ನೀಡಲು ಬದ್ದರಿರುವುದಾಗಿ ತಿಳಿಸಿ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳು ಭಾನುವಾರ ಜಿಲ್ಲಾಧಿಕಾರಿಗಳಿಗೆ ಒಪ್ಪಿಗೆ ಪತ್ರ ಸಲ್ಲಿಸಿದರು.

ಜಿಲ್ಲೆಯ ಎಲ್ಲ ಸಕ್ಕರೆ ಕಾರ್ಖಾನೆಗಳ ಪರವಾಗಿ ಜಿಲ್ಲಾಧಿಕಾರಿಗಳಿಗೆ ನೀಡಿದ ಪತ್ರದಲ್ಲಿ ರೈತರ ಹಿತದೃಷ್ಠಿಯಿಂದ ಸರ್ಕಾರದ ಆದೇಶಕ್ಕೆ ಮಾನ್ಯತೆ ನೀಡಿ ಕಾರ್ಖಾನೆ ಪ್ರಾರಂಭಿಸಲು ನಿರ್ಧಸಿದ್ದು, ಈ ಸಮಯದಲ್ಲಿ ಜಿಲ್ಲಾಡಳಿತ ಕ್ರಮವಹಿಸಿ, ಕಬ್ಬು ಪೂರೈಸುವ ರೈತರಿಗೆ ಹಾಗೂ ಕಬ್ಬು ಸಾಗಾಣಿಕೆದಾರರಿಗೆ ಸೂಕ್ತ ರಕ್ಷಣೆ ಒದಗಿಸಬೇಕೆಂದು ಕೋರಿದ್ದಾರೆ.



ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಸಂಗಪ್ಪ, ಪ್ರಸಕ್ತ ಹಂಗಾಮಿನಲ್ಲಿ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಪೂರೈಸಿದ ರೈತರಿಗೆ ಕಾರ್ಖಾನೆಗಳು ಪಾವತಿಸಬೇಕಾದ ಕನಿಷ್ಟ ಹೆಚ್ಚುವರಿ ಕಬ್ಬು ಬೆಲೆಯನ್ನು ಇಳುವರಿ ಆಧಾರದ ಮೇಲೆ ನಿಗದಿಪಡಿಸಿ ಸರ್ಕಾರ ಆದೇಶ ಹೊರಡಿಸಿದೆ. ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚವನ್ನು ಹೊರತುಪಡಿಸಿ ಇಳುವರಿ ಶೇ.10.25 ಇದ್ದಲ್ಲಿ 3200 ರೂ., ಇಳುವರಿ ಶೇ.11.25 ಇದ್ದಲ್ಲಿ 3300 ರೂ.ಗಳನ್ನು ನಿಗದಿಪಡಿಸಿದೆ.

2ನೇ ಪುಟನೋಡಿ

### ಕೆಎಸ್ ಆರ್ ಟಿಸಿಗೆ ಪ್ರತಿಷ್ಠಿತ ರಾಷ್ಟ್ರೀಯ ಪ್ರಶಸ್ತಿ



ಗುರುಗ್ರಾಮ್: ಕೆಎಸ್‌ಆರ್‌ಟಿಸಿಯ ಮೈಸೂರು ನಗರ ಸಾರಿಗೆಯ 200 ಬಸ್ಸುಗಳಲ್ಲಿ ಧ್ವನಿಸ್ಪಂದನ' – ಆನ್‌ಬೋರ್ಡ್ ಬಸ್ ಐಡೆಂಟಿಫಿಕೇಶನ್ ಮತ್ತು ನ್ಯಾವಿಗೇಶನ್ ಸಿಸ್ಟಮ್ ಎಂಬ ದೇಶದ ಮೊದಲ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೆ ತರಲಾಗಿದ್ದು, ದೃಷ್ಟಿವಿಕಲ ಚೇತನ ಪ್ರಯಾಣಿಕರ ಪ್ರಯಾಣ ಅವಲಂಬನೆ ಗಣನೀಯವಾಗಿ ಕಡಿಮೆಯಾಗಿದ್ದು, ಅವರ ಆತ್ಮವಿಶ್ವಾಸ, ಭದ್ರತೆ ಮತ್ತು ಸಂಚಾರದ ಸ್ವಾತಂತ್ರ್ಯದಲ್ಲಿ ದೊಡ್ಡ ಮಟ್ಟದ ಬದಲಾವಣೆಗೆ ಕಾರಣವಾಗಿದೆ.

ಈ ಪ್ರಶಸ್ತಿಯನ್ನು ಶ್ರೀ .ಮನೋಹರ್ ಲಾಲ್, ಮಾನ್ಯ ಸಚಿವರು, ವಸತಿ ಮತ್ತು ನಗರಾಭಿವೃದ್ಧಿ ಸಚಿವಾಲಯ, ಮತ್ತು ಶ್ರೀ ತೋಕನ್ ಸಾಹು, ಮಾನ್ಯ ರಾಜ್ಯ ಸಚಿವರು, ವಸತಿ ಮತ್ತು ನಗರಾಭಿವೃದ್ಧಿ ಸಚಿವಾಲಯ, ಭಾರಯ ಸರ್ಕಾರರವರುಗಳು ಶ್ರೀ. ಅಕ್ರಂ ಪಾಷ ಭಾಆಸೇ, ವ್ಯವಸ್ಥಾಪಕ ನಿರ್ದೇಶಕರು ಕೆಎಸ್ ಆರ್‌ಟಿಸಿ ರವರಿಗೆ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಧ್ವನಿ ಸ್ಪಂದನ – ಆನ್‌ಬೋರ್ಡ್ ಬಸ್ ಐಡೆಂಟಿಫಿಕೇಶನ್ ಮತ್ತು ನ್ಯಾವಿಗೇಶನ್ ಸಿಸ್ಟಮ್, ಐಐಟಿ ದೆಹಲಿಯ ರೈ ಲೈನ್ಸ್ ಫೌಂಡೇಶನ್ ಅಭಿವೃದ್ಧಿಪಡಿಸಿರುವ ತಂತ್ರಜ್ಞಾನವಾಗಿದ್ದು, ಜರ್ಮನಿಯ ಉಇ ಸಂಸ್ಥೆಯ ಸಹಕಾರದೊಂದಿಗೆ ದೃಷ್ಟಿವಿಕಲ ಚೇತನ ಬಸ್ ಬಳಕೆದಾರರಿಗೆ ಬಸ್‌ಗಳನ್ನು ಗುರುತಿಸಲು ಹಾಗೂ ಧ್ವನಿ ಆಧಾರಿತ ಸೂಚನೆಗಳ ಮೂಲಕ ಬಸ್ ಪ್ರವೇಶದ ಸ್ಥಳವನ್ನು ಸುರಕ್ಷಿತವಾಗಿ ಕಂಡುಹಿಡಿಯಲು ಸಹಾಯ ಮಾಡುತ್ತದೆ. 400 ಕ್ಕೂ ಹೆಚ್ಚು ದೃಷ್ಟಿವಿಕಲ ಚೇತನ ಬಳಕೆದಾರರಿಗೆ ಇದರ ಬಳಕೆಯ ಕುರಿತು ತರಬೇತಿ ನೀಡಲಾಗಿದೆ.

### ಟೀಕೆ ಮಾಡುತ್ತಿದ್ದವರು ಗ್ಯಾರಂಟಿ ಯೋಜನೆಗಳನ್ನು ನಕಲು ಮಾಡುತ್ತಿದ್ದಾರೆ: ಡಿಸಿಎಂ ಡಿ.ಕೆ. ಶಿವಕುಮಾರ್

ಕೂಡ್ಲಿಗಿ, ನ.9: ನಾವು ಕರ್ನಾಟಕದಲ್ಲಿ ನೀಡಿದ ಗ್ಯಾರಂಟಿ ಯೋಜನೆಗಳನ್ನು ಪ್ರಧಾನಿ ಮೋದಿಯವರು ಟೀಕೆ ಮಾಡುತ್ತಿದ್ದರು. ಈಗ ಹರಿಯಾಣ, ಮಹಾರಾಷ್ಟ್ರ, ಉತ್ತರಪ್ರದೇಶ, ಬಿಹಾರ ಸೇರಿದಂತೆ ಅನೇಕ ರಾಜ್ಯಗಳಲ್ಲಿ ಗ್ಯಾರಂಟಿ ಯೋಜನೆಗಳನ್ನೇ ನಕಲು ಮಾಡಿದ್ದಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ವಿಜಯನಗರ ಜಿಲ್ಲೆಯ ಕೂಡ್ಲಿಗಿ ಕ್ಷೇತ್ರದ 74 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರು ತುಂಬಿಸುವ ಯೋಜನೆಯ ಉದ್ಘಾಟನೆ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಮತ್ತು ಫಲಾನುಭವಿಗಳಿಗೆ ಸವಲತ್ತು ವಿತರಣಾ ಕಾರ್ಯಕ್ರಮಕ್ಕೆ ಶಿವಕುಮಾರ್ ಅವರು ಭಾನುವಾರ ಚಾಲನೆ ನೀಡಿ ಮಾತನಾಡಿದರು. ಕರ್ನಾಟಕದ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳು ಇಡೀ ದೇಶಕ್ಕೆ ಮಾದರಿಯಾಗಿದೆ. ಬೇರೆ ಪಕ್ಷದವರು ಈಗ ಜನರ ಕಲ್ಯಾಣದ ಬಗ್ಗೆ ಆಲೋಚನೆ ಮಾಡುತ್ತಿದ್ದಾರೆ.



ಕರುನಾಡಿನ ಜನರ ಸೇವೆಯನ್ನು ಉತ್ತಮ ಸರ್ಕಾರ ಮುನ್ನಡೆಸುತ್ತಿದೆ. ಭವಿಷ್ಯದಲ್ಲಿ ಇದಕ್ಕಿಂತ ಉತ್ತಮ ಆಡಳಿತ ನೀಡುತ್ತೇವೆ. 2028 ಕ್ಕೆ ಕಾಂಗ್ರೆಸ್ ಪಕ್ಷವೇ ರಾಜ್ಯದಲ್ಲಿ ಅಧಿಕಾರಕ್ಕೆ ಬಂದು ನಿಮ್ಮ ಸೇವೆ ಮಾಡಲಿದೆ ಎಂದರು. ಕೆರೆಗಳಿಗೆ ನೀರು ಹರಿಸಲು 800 ಕೋಟಿ ರೂಪಾಯಿಗೂ ಹೆಚ್ಚು ಹಣವನ್ನು ಈಗಾಗಲೇ ವೆಚ್ಚ ಮಾಡಲಾಗಿದೆ. ನಮ್ಮ ಕೆಲಸಗಳಿಗೆ ಎದುರಾಗುವ ಟೀಕೆಗಳನ್ನು ಮರೆಯಬೇಕು. ಆತ್ಮವಿಶ್ವಾಸವನ್ನು ಬೆಳೆಸಿಕೊಳ್ಳಬೇಕು. ಇದೇ ನಮ್ಮ ಸರ್ಕಾರದ ಮಂತ್ರ. ನಾವು ಇಂದು ಹಾಕಿರುವ ಅಭಿವೃದ್ಧಿ ಅಡಿಪಾಯದ ಕಲ್ಲುಗಳು ಶಾಶ್ವತವಾಗಿ ಉಳಿಯಲಿವೆ, ಟೀಕೆಗಳು ಸಾಯಲಿವೆ ಎಂದು ಹೇಳಿದರು.

### ಭಾರತದೊಂದಿಗಿನ ಯುದ್ಧ ತಪ್ಪಿಸಿದ್ದು ಟ್ರಂಪ್ : ಪಾಕ್ ಪ್ರಧಾನಿ



ಇಸ್ಲಾಮಾಬಾದ್, ನ. 9 (ಪಿಟಿಐ) ಮೇ ತಿಂಗಳಲ್ಲಿ ಭಾರತ–ಪಾಕಿಸ್ತಾನ ಸಂಘರ್ಷವನ್ನು ಪರಿಹರಿಸಿದ್ದಕ್ಕಾಗಿ ಪಾಕಿಸ್ತಾನ ಪ್ರಧಾನಿ ಶಹಬಾಜ್ ಷರೀಫ್ ಮತ್ತೊಮ್ಮೆ ಅಮೆರಿಕ ಅಧ್ಯಕ್ಷ ಡೊನಾಲ್ ಟ್ರಂಪ್ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ. ನಾಲ್ಕು ದಿನಗಳ ತೀವ್ರ ಗಡಿಯಾಚೆಗಿನ ಡ್ರೊ?ನ್ ಮತ್ತು ಕ್ಷಿಪಣಿ ದಾಳಿಯ ನಂತರ ಸಂಘರ್ಷವನ್ನು ಕೊನೆಗೊಳಿಸಲು ಭಾರತ ಮತ್ತು ಪಾಕಿಸ್ತಾನ ಮೇ 10 ರಂದು ತಿಳುವಳಿಕೆಗೆ ಬಂದಿವೆ ಮತ್ತು ಈ ಪ್ರಕ್ರಿಯೆಯಲ್ಲಿ ಯಾವುದೇ ಮೂರನೇ ವ್ಯಕ್ತಿ ಭಾಗಿಯಾಗಿಲ್ಲ ಎಂದು ನವದೆಹಲಿ ನಿರಂತರವಾಗಿ ಹೇಳುತ್ತಿರುವ ನಡುವೆಯೇ ಪಾಕಿಸ್ತಾನ ಈ ಹೇಳಿಕೆ ನೀಡಿದೆ. ಅಮೆರಿಕ ಅಧ್ಯಕ್ಷ ಟ್ರಂಪ್ ಅವರ ದಿಟ್ಟ ಮತ್ತು ನಿರ್ಣಾಯಕ ನಾಯಕತ್ವವೇ ಪಾಕಿಸ್ತಾನ ಮತ್ತು ಭಾರತದ ನಡುವೆ ಕದನ ವಿರಾಮವನ್ನು ತಂದಿತು, ದಕ್ಷಿಣ ಏಷ್ಯಾದಲ್ಲಿ ಶಾಂತಿಯನ್ನು ಪುನಃಸ್ಥಾಪಿಸಿತು, ದೊಡ್ಡ ಯುದ್ಧವನ್ನು ತಪ್ಪಿಸಿತು ಮತ್ತು ಲಕ್ಷಾಂತರ ಜನರನ್ನು ಉಳಿಸಿತು ಎಂದು ಶರೀಫ್ ಬಾಕುದಲ್ಲಿ ಅಜೆರ್ಬೈಜಾನ್ನ ವಿಜಯ ದಿನದ ಮೆರವಣಿಗೆಯನ್ನುದ್ದೇಶಿಸಿ

2ನೇ ಪುಟನೋಡಿ


### ಜನರ ಮೇಲೆ ದಾಳಿ ಮಾಡುತ್ತಿದ್ದ ಹುಲಿ ಸೆರೆ: ಖಂಡ್ರೆ

ಬೆಂಗಳೂರು ನ.9: ಸರಗೂರು ತಾಲೂಕಿನಲ್ಲಿ ಪದೇ ಪದೆ ಜನರ ಮೇಲೆ ದಾಳಿ ಮಾಡಿ ಜನ, ಜಾನುವಾರುಗಳ ಸಾವಿಗೆ ಕಾರಣವಾಗಿದ್ದ ಗಂಡು ಹುಲಿಯನ್ನು ಸೆರೆಹಿಡಿಯಲಾಗಿದೆ ಎಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ, ತಿಳಿಸಿದ್ದಾರೆ. ಕಳೆದ ಒಂದು ತಿಂಗಳ ಅವಧಿಯಲ್ಲಿ ಮೂವರ ಮೇಲೆ ದಾಳಿ ಮಾಡಿ, ಅವರ ಸಾವಿಗೆ ಕಾರಣವಾಗಿದ್ದ ಈ ಹುಲಿಯನ್ನು ಸೆರೆಹಿಡಿದಿರುವುದಾಗಿ ಅರಣ್ಯ ಅಧಿಕಾರಿಗಳು ಮಾಹಿತಿ ನೀಡಿರುವುದಾಗಿ ಸಚಿವರು ತಿಳಿಸಿದ್ದಾರೆ.



ಮೃತ ವ್ಯಕ್ತಿಗಳ ಮರಣೋತ್ತರ ಪರೀಕ್ಷೆಯ ವರದಿ ಮತ್ತು ಈ ಹುಲಿಯ ಡಿ.ಎನ್.ಎ. ಎರಡನ್ನೂ ಪರಿಶೀಲಿಸಿ, ಸೆರೆಹಿಡಿಯಲಾದ ಹುಲಿ ಹೆಡಿಯಾಲ, ಮೊಳೆಯೂರು, ನುಗು ಸುತ್ತಮುತ್ತ ಜನರ ಅಮೂಲ್ಯ ಜೀವ ಹಾನಿ ಮಾಡಿದ ಹುಲಿಯೇ ಎಂಬುದನ್ನು ಖಚಿತಪಡಿಸಿಕೊಳ್ಳುವಂತೆ ಉನ್ನತಾಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಬಂಡಿಪುರ ಮತ್ತು ನಾಗರಹೊಳೆಯ ಅರಣ್ಯದಂಚಿನಲ್ಲಿ ಹುಲಿಗಳು ಮನುಷ್ಯರ ಮೇಲೆ ಮತ್ತು ಜಾನುವಾರಗಳ ಮೇಲೆ ದಾಳಿ ಮಾಡುವ ಪ್ರಕರಣಗಳು ಹೆಚ್ಚಾಗಿದ್ದ ಹಿನ್ನೆಲೆಯಲ್ಲಿ ಬಂಡೀಪುರ ಮತ್ತು ನಾಗರಹೊಳೆಯ ಸಫಾರಿ ಸ್ಥಗಿತಗೊಳಿಸಿ, ಅಲ್ಲಿನ ಸಿಬ್ಬಂದಿಯನ್ನು ಹುಲಿ ಸರೆ ಕಾರ್ಯಾಚರಣೆಗೆ ನಿಯೋಜಿಸಲಾಗಿತ್ತು.

ವನ್ಯಜೀವಿ ವಿಭಾಗದ ಎ.ಪಿ.ಸಿ.ಸಿ.ಎಫ್ ಮತ್ತು ಹುಲಿ ಯೋಜನೆಯ ನಿರ್ದೇಶಕರಿಗೆ ವಸತಿ ಪ್ರದೇಶಗಳ ಬಳಿ ಹುಲಿಗಳ ಸಂಚಾರ ಇರುವ ಸ್ಥಳದಲ್ಲಿಯೇ ಮೊಕ್ಕಾಂ ಹೂಡಿ, ಈ ಹುಲಿಯಲ್ಲದೆ ಬೇರೆ ಯಾವುದಾದರೂ ಹುಲಿಗಳು ಜನ, ಜಾನುವಾರಗಳ ಮೇಲೆ ದಾಳಿ ಮಾಡಿದೆಯೇ ಎಂಬ ಪರಿಶೀಲನೆ ಮಾಡಿ ಕಾರ್ಯಾಚರಣೆ ನಡೆಸಲು ಸೂಚಿಸಿರುವುದಾಗಿಯೂ ಹೇಳಿದ್ದಾರೆ.



ರಾಜ್ಯಕ್ಕೆ ಭೇಟಿ ನೀಡಿರುವ ಗೌರವಾನ್ವಿತ ಉಪ ರಾಷ್ಟ್ರಪತಿಗಳಾದ ಶ್ರೀ ಸಿ.ಪಿ. ರಾಧಾಕೃಷ್ಣನ್ ಅವರನ್ನು ಕೇಂದ್ರ ಸಚಿವರಾದ ಶ್ರೀ ಊಆ ಕುಮಾರಸ್ವಾಮಿ ಅವರು ವಿಮಾನ ನಿಲ್ದಾಣದಲ್ಲಿ ಹಾಜರಿದ್ದು ಬರಮಾಡಿಕೊಂಡರು. ಆ ನಂತರ ಇಂದು ಮಾನ್ಯ ಉಪ ರಾಷ್ಟ್ರಪತಿಗಳ ಕಾರ್ಯಕ್ರಮದಲ್ಲಿ ಮಾನ್ಯ ಸಚಿವರು ಪಾಲ್ಗೊಂಡರು.

### ವಿಧಾನ ಮಂಡಲ ಸದಸ್ಯರ ಆಸ್ತಿಯ ವಿವರ ಲೋಕಾಯುಕ್ತ ಸಂಸ್ಥೆಗೆ ಸಲ್ಲಿಕೆ

ಕರ್ನಾಟಕ ಲೋಕಾಯುಕ್ತ ಕಾಯಿದೆ ಅನ್ವಯ ಪ್ರತಿ ವರ್ಷ ಕರ್ನಾಟಕ ರಾಜ್ಯ ವಿಧಾನಮಂಡಲದ ಸದಸ್ಯರು ತಮ್ಮ ಆಸ್ತಿಯ ವಿವರಗಳನ್ನು ಲೋಕಾಯುಕ್ತ ಸಂಸ್ಥೆಗೆ ಸಲ್ಲಿಕೆ ಮಾಡಬೇಕಾಗಿರುತ್ತದೆ. ತಮ್ಮ ಆಸ್ತಿ ವಿವರಗಳನ್ನು ಜೂನ್ 30ರ ಒಳಗೆ ಸಲ್ಲಿಸದ ಶಾಸಕರ ಪಟ್ಟಿಯನ್ನು ಲೋಕಾಯುಕ್ತ ಕಾಯಿದೆಯ ಪ್ರಕಾರ ಬಿಡುಗಡೆ ಮಾಡಿರುತ್ತದೆ. ಸಾರ್ವಜನಿಕ ಹಿತ ದೃಷ್ಟಿಯಿಂದ ಇದು ಅವಶ್ಯಕತೆ ಇರುತ್ತದೆ. ಅದೇ ರೀತಿ ಲೋಕಾಯುಕ್ತ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುವ ಲೋಕಾಯುಕ್ತರು/ಉಪ ಲೋಕಾಯುಕ್ತರು ತಮ್ಮ ಆಸ್ತಿ ಪಟ್ಟಿಯನ್ನು ಪ್ರಕಟಿಸುವುದು ಸಾರ್ವಜನಿಕ ಹಿತದೃಷ್ಟಿಯಿಂದ ಅವಶ್ಯಕವಾಗಿರುತ್ತದೆ.

ಜುಲೈ 12, 2021 ರಲ್ಲಿ ಕರ್ನಾಟಕ ರಾಜ್ಯ ಸರ್ಕಾರಕ್ಕೆ ನಾನು ಒಂದು ಮನವಿಯನ್ನು ಮಾಡಿ ಕರ್ನಾಟಕ ಲೋಕಾಯುಕ್ತ ಕಾಯ್ದೆಗೆ ತಿದ್ದುಪಡಿ ಮಾಡಿ ಲೋಕಾಯುಕ್ತದಲ್ಲಿ ಕಾರ್ಯನಿರ್ವಹಿಸುವ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರು ಸಾರ್ವಜನಿಕ ಹಿತ ದೃಷ್ಟಿಯಿಂದ ತಮ್ಮ ಆಸ್ತಿ ಮತ್ತು ದಾಯಿಕ ಪಟ್ಟಿಯನ್ನು ಸಾರ್ವಜನಿಕವಾಗಿ ಪ್ರಕಟಿಸಲು ಕಾಯ್ದೆ ತರಬೇಕಾಗಿ ಮನವಿ ಮಾಡಿದ್ದೆನು. ನನ್ನ ಮನವಿಗೆ ಅನುಗುಣವಾಗಿ ಸರ್ಕಾರವು 5-8-2021 ರಲ್ಲಿ ಸಿಬ್ಬಂದಿ ಮತ್ತು

2ನೇ ಪುಟನೋಡಿ

**ಏಕದಿನ ವಿಶ್ವಕಪ್ ಫೈನಲ್ ಪಂದ್ಯ ಭರ್ಜರಿ ಗೆಲುವು: ವಿರಾಟ್ ಕೊಹ್ಲಿ ಮಹಿಳಾ ತಂಡವನ್ನು ಶ್ಲಾಘಿಸಿದ್ದಾರೆ.**

# ಸಿ.ಯು.ಕೆ. 9ನೇ ಘಟಿಕೋತ್ಸವ| ಭವಿಷ್ಯದ ಏಳಿಗೆಗೆ ಡಿಜಿಟಲ್ ಭಾರತ ನಿರ್ಮಿಸೋಣ –ನ್ಯಾ. ದಿನೇಶ ಮಹೇಶ್ವರಿ





ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ.8(ಕರ್ನಾಟಕ ವಾರ್ತೆ) ಜಗತ್ತಿನ ನಾಲ್ಕನೇ ಅತಿ ದೊಡ್ಡ ಆರ್ಥಿಕ ಶಕ್ತಿಯಾಗಿ ಗುರುತಿಸಿಕೊಂಡಿರುವ ಭಾರತ ಇದೀಗ ಡಿಜಿಟಲ್ ಶಕ್ತಿ ಕೇಂದ್ರವಾಗಿಯೂ ದಾಪುಗಾಲು ಇಟ್ಟಿದೆ. ದತ್ತಾಂಶ ಮತ್ತು ಮಾನವೀಯತೆಯನ್ನು ರಕ್ಷಿಸುವುದರ ಜೊತೆಗೆ ಭವಿಷ್ಯದ ಏಳಿಗೆಗೆ ಡಿಜಿಟಲ್ ಭಾರತ ನಿರ್ಮಿಸೋಣ ಎಂದು ಭಾರತದ ಕಾನೂನು ಆಯೋಗದ ಅಧ್ಯಕ್ಷರು ಮತ್ತು ಸರ್ವೋಚ್ಛ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶರಾದ ನ್ಯಾಯಮೂರ್ತಿ ದಿನೇಶ ಮಹೇಶ್ವರಿ ಹೇಳಿದರು.

ಶನಿವಾರ ಕಡಗಂಚಿಯ ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾಲಯದ ವಿವಿಧೋದ್ದೇಶ ಭವನದಲ್ಲಿ ಜರುಗಿದ ವಿ.ವಿ.ಯ ಒಂಭತ್ತನೇ ಘಟಿಕೋತ್ಸವದಲ್ಲಿ ಮುಖ್ಯ ಭಾಷಣಕಾರರಾಗಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಯಂತ್ರಗಳ ಬುದ್ಧಿವಂತಿಕೆ ಬದಲಾಗಿ ಮಾನವ ಘನತೆಯನ್ನು ಎತ್ತಿ ಹಿಡಿಯುವತ್ತ ನಾವು ಸಾಗಬೇಕಿದೆ ಎಂದರು.

ಇಂದಿನ ತಂತ್ರಜ್ಞಾನದ ಜಗತ್ತಿನಲ್ಲಿ ಘನತೆಯ ಮಾಪನಗಳು "ನಾವು ನಿಜವಾಗಿಯೂ ಯಾರು" ಎಂಬುದರಿಂದ 'ನಾವು ಪ್ರಪಂಚದ ಮುಂದೆ ಹೇಗೆ ಕಾಣಿಸಿಕೊಳ್ಳುತ್ತೇವೆ' ಎಂಬುದಕ್ಕೆ ಬದಲಾಗಿದೆ. ಇದು ನೈಜ ಅಸ್ತಿತ್ವವನ್ನು ಬಿಟ್ಟು ಕೃತಕ ಲೋಕದ ಮೌಲ್ಯಮಾಪನಕ್ಕಾಗಿ ಹುಡುಕಾಟ ನಡೆಸಿದಂತಿದೆ. "ಘನತೆಯು" ಹೊಸ ಪೀಳಿಗೆಗೆ ಕೇವಲ ಒಂದು ತತ್ವವಾಗಿರಬಾರದು, ಬದಲಾಗಿ ಜೀವನದ ಅವಿಭಾಜ್ಯ ಅಭ್ಯಾಸ ಮತ್ತು ಸಾರವಾಗಿರಬೇಕು. ನಮ್ಮ ಸಂವಿಧಾನದಲ್ಲಿ ಪ್ರಸ್ತಾಪಿಸಿರುವಂತೆ 'ಭ್ರಾತೃತ್ವ' ಕೇವಲ ಒಂದು ತತ್ವವಾಗಿ ಅಲ್ಲ, ಮಾರ್ಗದರ್ಶಕ ಮನೋಭಾವವಾಗಿ ಅದರ ಪ್ರಾಮುಖ್ಯತೆಯನ್ನು ಒತ್ತಿ ಹೇಳುತ್ತದೆ. ಹೀಗಾಗಿ ಭ್ರಾತೃತ್ವ ಭಾವನೆಯಿಂದ ಸಾಗಿದ್ದಲ್ಲಿ ಸಾಮೂಹಿಕ ಉನ್ನತಿಗೆ ಪ್ರೇರಣೆಯಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ವಸುದೈವ ಕುಟುಂಬಕ್ಕಂ ಪರಿಕಲ್ಪನೆಯಲ್ಲಿ ಸರ್ವರನ್ನು ಒಳಗೊಂಡಂತೆ ಸಹೋದರತ್ವದಿಂದ ಮುನ್ನಡೆಯುತ್ತಿರುವ ಭಾರತ ತನ್ನ ಗತ ವೈಭವವನ್ನು ಮರಳಿ ಪಡೆಯುವ ತುದಿಗಾಲಲ್ಲಿ ನಿಂತಿದೆ. ನೀವು ಸಂಪಾದಿಸಿದ ಜ್ಞಾನ ನಿಮ್ಮ ಆಸ್ತಿ ಅಲ್ಲ. ಸರ್ವ ಜನರ ಏಳಿಗೆಗೆ ಮತ್ತು ದೇಶದ ಪ್ರಗತಿಗೆ ಸಹಾಯಕವಾಗಬೇಕು. ಆ ನಿಟ್ಟಿನಲ್ಲಿ ಹೆಜ್ಜೆ ಇಡಿ ಎಂದು ಇಂದಿಲ್ಲಿ ಪದವಿ ಪಡೆದು ಸಾಧನೆ ಮಾಡಲು ನವ ಕನಸಿನೊಂದಿಗೆ ಹೊರಟಿರುವ ವಿದ್ಯಾರ್ಥಿ ಸಮುದಾಯಕ್ಕೆ ನ್ಯಾ.ದಿನೇಶ ಮಹೇಶ್ವರಿ ಕರೆ ನೀಡಿದರು.

"ಜೀವನದಲ್ಲಿ ಒಂದು ಗುರಿಯನ್ನು ಹೊಂದಿರಿ. ನಿರಂತರವಾಗಿ ಜ್ಞಾನ ಸಂಪಾದಿಸಿ, ಕಷ್ಟಪಟ್ಟು ಕೆಲಸ ಮಾಡಿ ಶ್ರೇಷ್ಠ ಜೀವನವನ್ನು ಅರಿತುಕೊಳ್ಳಲು ಪರಿಶ್ರಮ ಹೊಂದಿರಿ" ಎಂದು ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರು ಹೇಳಿದಂತೆ ಹಳೆಯ ಸಮಸ್ಯೆಗಳನ್ನು ಹೊಸ ಕಣ್ಣುಗಳಿಂದ ನೋಡುವ ಮತ್ತು ಭರವಸೆಯ ದೀಪಗಳಾಗಿ ಹೊರಹೊಮ್ಮುವ ದಾರ್ಶನಿಕರು, ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವವರ ಅವಶ್ಯಕತೆ ಈ ಜಗತ್ತಿಗೆ ತುಂಬಾ ಇದೆ. ನಿಮ್ಮ ಮುಂದಿನ ಪ್ರಯಾಣದಲ್ಲಿ, "ನೀವು ಎಲ್ಲಿಂದ ಬಂದಿದ್ದೀರಿ?" ಎಂದು ಜಗತ್ತು ಕೇಳಿದಾಗ ನಿಮ್ಮ ನಗರವನ್ನು ಮಾತ್ರ ಉಲ್ಲೇಖಿಸಬೇಡಿ. "ನಾನು ಭಾರತದಲ್ಲಿ ಕರ್ನಾಟಕದಿಂದ ಬಂದಿದ್ದೇನೆ ಎಂದು ಹೆಮ್ಮೆಯಿಂದ ಹೇಳಿ ಎಂದು ಸ್ಫೂರ್ತಿದಾಯಕ ಮಾತುಗಳನ್ನಾಡಿದರು.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಮಾತನಾಡಿ, ಸಿ.ಯು.ಕೆಯಲ್ಲಿ ದೇಶದ ವಿವಿಧ ಮೂಲೆಯಿಂದ ಬಂದಿರುವ ಸುಮಾರು 3,000ಕ್ಕು ಹೆಚ್ಚಿನ ಅಭ್ಯರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಈ ವರ್ಷ 5 ವರ್ಷದ ಬಿ.ಎ.(ಎಲ್.ಎಲ್.ಬಿ) ಕೋರ್ಸ್ ಆರಂಭಿಸಲಾಗಿದೆ. ಹೊಸದಾಗಿ ಜಿನಿಟಿಕ್ಸ್ & ಜಿನೋಮ್ಸ್, ಲೈಬ್ರರಿ ಸೈನ್ಸ್, ಆರ್ಟಿಫಿಶಿಯಲ್ ಟೆಕ್ನಾಲಾಜಿ, ಮಶೀನ್ ಲರ್ನಿಂಗ್ ಕೋರ್ಸ್ ಪ್ರಾರಂಭಿಸಲಾಗುತ್ತಿದೆ. ಎನ್.ಇ.ಪಿ–20 ಅಳವಡಿಸಿಕೊಂಡಿರುವ ವಿ.ವಿ. ವಿದ್ಯಾರ್ಥಿಗಳಿಗೆ ಗುಣಮಟ್ಟದ ಮತ್ತು ಮೌಲ್ಯಯುತ ಶಿಕ್ಷಣ ನೀಡಲು ಶ್ರಮಿಸುತ್ತಿದೆ. ಪ್ರಾಧ್ಯಾಪಕ ವೃಂದಕ್ಕೆ ನಿರಂತರ ಸಾಮರ್ಥ್ಯ ವೃದ್ಧಿ ಕಾರ್ಯಾಗಾರ ಆಯೋಜಿಸಲಾಗುತ್ತಿದೆ. ಸಂಶೋಧನೆಯಲ್ಲಿ ಸುಮಾರು 15 ಕೋಟಿ ರೂ. ವ್ಯಯ ಮಾಡಲಾಗುತ್ತಿದೆ. ಅಣುಸಂಧಾನ್ ರಿಸರ್ಚ್ ಫೌಂಡೇಷನ್‌ದಿಂದಲೇ ಸಂಶೋಧನೆಗೆ 12.01 ಕೋಟಿ ರೂ. ವಿ.ವಿ.ಗೆ ಬಿಡುಗಡೆಯಾಗಿದೆ. ಒಟ್ಟಾರೆಯಾಗಿ ವಿ.ವಿ.ಯನ್ನು ಸಂಶೋಧನೆ, ನಾವೀನ್ಯತದ ಕೇಂದ್ರದ ಜೊತೆಗೆ ಜ್ಞಾನದ ಹಬ್ ಮಾಡುವ ಗುರಿ ಹೊಂದಲಾಗಿದೆ ಎಂದರು.

18 ಪಿ.ಎಚ್.ಡಿ. ಸೇರಿ 756 ಜನರಿಗೆ ಪದವಿ ಪ್ರದಾನ: ಘಟಿಕೋತ್ಸವದ ಭಾಗವಾಗಿ ವಿವಿಧ 27 ವಿಭಾಗದ 737 ವಿದ್ಯಾರ್ಥಿಗಳಿಗೆ ಪದವಿ ಮತ್ತು ಸ್ನಾತಕೋತ್ತರ ಪದವಿ, 18 ಅಭ್ಯರ್ಥಿಗಳಿಗೆ ಪಿ.ಎಚ್.ಡಿ, ಓರ್ವರಿಗೆ ಎಂ.ಫಿಲ್ ಪದವಿ ಸೇರಿದಂತೆ ಒಟ್ಟು 756 ಅಭ್ಯರ್ಥಿಗಳಿಗೆ ನ್ಯಾ. ದಿನೇಶ ಮಹೇಶ್ವರಿ ಅವರು ಪದವಿ ಪ್ರದಾನ ಮಾಡಿದರು.

ನಂದ್ಯಾಳ ಹುಡುಗಿಗೆ ಒಲಿದ ಪ್ರೊ.ಎ.ಎಂ.ಪಠಾನ್ ಗೋಲ್ಡ್ ಮೆಡಲ್: ಆಂಧ್ರಪ್ರದೇಶದ ನಂದ್ಯಾಳ ಮೂಲದ ವಿದ್ಯಾರ್ಥಿನಿ ಶಿವಸಾಹಿತಿ ಸೋಮಶೆಟ್ಟಿ ಬಿ.ಇ.(ಇ&ಸಿ) ಕೋರ್ಸ್‌ನಲ್ಲಿ ಪ್ರಥಮ ರ್‍ಯಾಂಕಿನ ಚಿನ್ನದ ಪದಕ ಪಡೆಯುವುದರ ಜೊತೆಗೆ ಪ್ರೊ.ಎ.ಎಂ.ಪಠಾನ್ ಗೋಲ್ಡ್ ಮೆಡಲ್ ಸಹ ಪಡೆದು ನಗೆ ಬೀರಿದರು. ಶ್ರಮ ಪಟ್ಟಿದೆ, ಚಿನ್ನದ ಪದಕ ನಿರೀಕ್ಷಿಸಿರಲಿಲ್ಲ. ಎರಡು ಗೋಲ್ಡ್ ಮೆಡಲ್ ಖುಷಿ ತಂದಿದೆ. ತಂದೆ–ತಾಯಿಯ ಸಹಕಾರದಿಂದಲೆ ಇದೆಲ್ಲ ಸಾಧ್ಯವಾಗಿದೆ. ಮದ್ರಾಸ್ ಐ.ಐ.ಟಿ.ಯಲ್ಲಿ ಸ್ನಾತಕೋತ್ತರ ಪದವಿ ಮಾಡುವ ಆಸೆ ಹೊಂದಿದೇನೆ ಎಂದು ವಿದ್ಯಾರ್ಥಿನಿ ಶಿವಸಾಹಿತಿ ಸೋಮಶೆಟ್ಟಿ ತಮ್ಮ ಅಭಿಪ್ರಾಯವನ್ನು ಪತ್ರಕರ್ತರೊಂದಿಗೆ ಹಂಚಿಕೊಂಡರು. ನನಗೆ ಓದಕ್ಕೆ ಆಗಲಿಲ್ಲ, ಮಗಳ ಓದಿನಲ್ಲೆ ಖುಷಿ ಕಂಡಿರುವೆ ಎಂದು ನಂದ್ಯಾಳದಲ್ಲಿ ಕಿರಾಣಿ ಅಂಗಡಿ ನಡೆಸುವ ವಿದ್ಯಾರ್ಥಿನಿಯ ತಂದೆ ಯತೀಂದ್ರ ಬಾಬು ಮಗಳ ಸಾಧನೆ ಕುರಿತು ಹೇಳಿದರು. ತಾಯಿ ಜಾಹ್ನವಿ ಸಹ ಸಂತಸದ ಕ್ಷಣ ಕಣ್ತುಂಬಿಕೊಂಡರು.

ಹಣ್ಣು ಮಾರುವವನ ಮಗಳಿಗೆ ಒಲಿದ ಚಿನ್ನದ ಪದಕ: ಜಿಲ್ಲೆಯ ಆಳಂದ ಬಸ್ ನಿಲ್ದಾಣ ಮುಂಭಾಗದಲ್ಲಿ ಹಣ್ಣು ಮಾರುವ ಬಂಡಿ ಇಟ್ಟು ಉಪ ಜೀವನ ನಡೆಸುತ್ತಿರುವ ಶಮ್ಮು ಭಾಗವಾನ್ ಪುತ್ರಿ ಸಾನಿಯಾ ಸಮ್ರೀನ್ ಎಂ.ಕಾಂ ನಲ್ಲಿ ಚಿನ್ನದ ಪದಕ ಪಡೆದು ಪಾಲಕರ ಖುಷಿಗೆ ಕಾರಣವಾದರು. ಪ್ರೌಢ ಶಿಕ್ಷಣ, ಪದವಿ ಆಳಂದನಲ್ಲಿಯೇ ಮಾಡಿರುವೆ. ಬಿಕಾಂ ಪದವಿಯಲ್ಲಿ ಬೆಸ್ಟ್ ಕಾಮರ್ಸ್ ವಿದ್ಯಾರ್ಥಿ ಅವಾರ್ಡ್ ಪಡೆದಿದ್ದೇ ಸಿ.ಯು.ಕೆ.ನಲ್ಲಿ ಪ್ರವೇಶ ಪಡೆಯಲು ಸ್ಫೂರ್ತಿದಾಯಕವಾಯಿತು. ಮುಂದೆ ಪ್ರೊಫೆಸರ್ ಆಗುವ ಆಸೆ ಹೊಂದಿದ್ದು, ಪಿ.ಎಚ್.ಡಿ. ಮಾಡುವೆ ಎಂದು ಸಾನಿಯಾ ಸಮ್ರೀನ್ ತಮ್ಮ ಅನಿಸಿಕೆ ಹಂಚಿಕೊಂಡರು.

ಘಟಿಕೋತ್ಸವದಲ್ಲಿ ಪರೀಕ್ಷಾ ನಿಯಂತ್ರಣಾಧಿಕಾರಿ ಡಾ. ಕೋಟಾ ಸಾಯಿ ಕೃಷ್ಣ ಸೇರಿದಂತೆ ವಿವಿಧ ಕೋರ್ಟ್, ಕಾರ್ಯಕಾರಿ ಮಂಡಳಿ, ಶೈಕ್ಷಣಿಕ ಮಂಡಳಿ ಸದಸ್ಯರು, ಡೀನ್‌ಗಳು, ಪ್ರಾಧ್ಯಾಪಕರ ವೃಂದ, ವಿದ್ಯಾರ್ಥಿಗಳು, ಪಾಲಕರು ಭಾಗವಹಿಸಿದ್ದರು. ಕುಲಸಚಿವ ಪ್ರೊ. ಆರ್.ಆರ್.ಬಿರಾದಾರ ವಂದಿಸಿದರು. ಡಾ. ರೋಹಿಣಾಕ್ಷ ಸಿರ್ಲಾರು, ಡಾ.ಅಂಕಿತ ಸತ್ಪತಿ, ಡಾ.ಸ್ವಪ್ನಿಲ್ ಚಾಪೇಕಾರ್ ಅವರು ತ್ರಿಭಾಷದಲ್ಲಿ ನಿರೂಪಿಸಿದರು.

# ದಾಸ ಪರಂಪರೆಯಲ್ಲಿ ಶ್ರೇಷ್ಟ ಕನಕದಾಸರಾಗಿದ್ದರು. ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ.08.(ಕರ್ನಾಟಕ ವಾರ್ತೆ)– ಕನಕ ದಾಸರು ದಾಸ ಪರಂಪರೆಯಲ್ಲಿ ಶ್ರೇಷ್ಟ ಕನಕದಾಸರಾಗಿದ್ದರು, ಹಿಂದುಳಿದ ವರ್ಗದ ಧ್ವನಿಯಾಗಿ ಅನ್ಯಾಯ ಅತ್ಯಾಚಾರಿಗಳ ವಿರುದ್ಧ ಹೋರಾಟ ಮಾಡಿ ಶ್ರೇಷ್ಠ ನಾಯಕರಾಗಿದ್ದರು. ಇವರ ಆದರ್ಶ ತತ್ವಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕನೂರ ಅವರು ಹೇಳಿದರು.

ಶನಿವಾರದಂದು ಡಾ. ಎಸ್. ಎಂ. ಪಂಡಿತ್ ರಂಗಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಕಲಬುರಗಿ ಇವರುಗಳ ಸಂಯುಕ್ತಾಶ್ರಯದಲ್ಲಿ ಸಂತ ಶ್ರೇಷ್ಠ ಶ್ರೀ ಭಕ್ತ ಕನಕದಾಸರ ಭಾವ ಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿದರು.

ಶ್ರೀ ಕೃಷ್ಣನ ದರ್ಶನ ಪಡೆಯಲು ಹೋದಾಗ ಗುಡಿಯ ಹಿಂದುಗಡೆ ನಿಂತು ದರ್ಶನ ಮಾಡಿದ್ದಾಗ ಶ್ರೀ ಕೃಷ್ಣ ದೇವಸ್ಥಾನವನ್ನು ಒಡೆದು ಕನಕದಾಸರಿಗೆ ಪ್ರತ್ಯೆಕ್ಷನಾದ್ದನು. ಕುರುಬ ಸಮಾಜದಲ್ಲಿ ಹುಟ್ಟಿ ಸಮಾನತೆಗಾಗಿ ಹೋರಾಡಿ ಅನೇಕ ಸಮಾಜದಲ್ಲಿ ಪರಿವರ್ತನೆ ಮಾಡಿ ದಾಸ ಸಾಹಿತ್ಯ ರಚಿಸಿದರು.

ಕಲಬುರಗಿಯಲ್ಲಿ ಮುಖ್ಯಮಂತ್ರಿಗಳಿಗೆ ಮನವಿ ಮಾಡಿ ನಾನು ನಮ್ಮ ಶಾಸಕರು ನಮ್ಮ ಸಚಿವರಾದ ಪ್ರಿಯಾಂಕ ಖರ್ಗೇಜಿಯವರು ಸೇರಿ ಅನೇಕ ಸಮಾಜದ ಕಾರ್ಯಗಳನ್ನು ಮಾಡಿದ್ದೇವೆ. ಸಂಗೊಳ್ಳಿಯ ರಾಯಣ್ಣ , ಬಸನಿಲ್ದಾಣ, ವಸತಿ ನಿಲಯ ಮಕ್ಕಳ ವಿದ್ಯಾಭ್ಯಾಸ ಡಾ. ಬಾಬ ಸಹೇಬ ಅಂಬೇಡ್ಕರ ಹೆಸರು ಕನಸು ನನಸು ಮಾಡುವ ಸಲುವಾಗಿ 3 ಎಕರೆ ಜಮೀನು ನೀಡಿದ್ದೇವೆ ಎಂದು ಹೇಳಿದರು.

ನಿರಂತರ ಪ್ರಯತ್ನದಿಂದ ಎಲ್ಲ ಶಾಸಕರು ಮಂತ್ರಿಗಳು ಸೇರಿ ಶೀಘ್ರದಲ್ಲಿಯ ಕುರುಬ ಸಮಾಜ ಕೋಲಿ ಸಮಾಜ ಪರಿಶಿಷ್ಠ ಜಾತಿ ಸೇರ್ಪಡೆ ಮಾಡಲು ಭರವಸೆ ನೀಡಿದರು. ಕೇಂದ್ರ ಕಚೇರಿಯಿಂದ ಆದೇಶ ತರುತ್ತೇವೆ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಜಾತೀಯತೆ ಮತ್ತು ಅಸ್ಪೃಶ್ಯತೆಯ ಬಗ್ಗೆ ಕುಲ ಕುಲ ಕುಲವೆಂದೆ ಹೊಡೆದಾಡದಿರಿ, ನಿಮ್ಮ ಕುಲದ ನೆಲೆಯನೇನಾದರೂ ಬಲ್ಲಿರಾ.. ಬಲ್ಲಿರಾ ? ಎಂದು ಪ್ರಶ್ನಿಸಿ ಮಾನವ ಕುಲದ ಸಮಾನತೆಯನ್ನು ಎತ್ತಿ ಹಿಡಿದವರವರು ಕನಕದಾಸರು, ಭಗವಂತ ಕೂಡ ಕನಕದಾಸರ ಭಾವನೆ ಇಂಬು ಕೊಟ್ಟಂತೆ ಅವರಿರುವ ಕಡೆಗೆ ತಿರುಗಿ ದರ್ಶನ ನೀಡಿ ತಾನು ಭೇಧ ಬಯಸುವವನಲ್ಲ ಎಂದು ಜಗತ್ತಿಗೆ ಸಂದೇಶವನ್ನು ನೀಡಿದ್ದಾನೆ ಎಂದು ಹೇಳಿದರು.

ವಿಜಯ ನಗರದಲ್ಲಿ ಕನಕರಿಗೆ ಸಿಕ್ಕಂತ ಬಂಗಾರವನ್ನು ಅನೇಕ ಬಡ ವರ್ಗದವರಿಗೆ ದಾನ ಮಾಡಿದರು. ಕೆರೆ ಕಟ್ಟಿ ಗಳನ್ನು ಕಟ್ಟಿದರು. ನಮ್ಮ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಎಲ್ಲರೂ ಸಮನತೆಯಿಂದ ಬಾಳಲು ಐದು ಗ್ಯಾರಂಟಿ ಯೋಜನೆಗಳು ತಂದಿದ್ದರೆ ಮತ್ತು ನಮ್ಮ ರಾಜ್ಯದ ಹೆಚ್ಚಿನ ಬಜೆಟ್ ಮಂಡನೆ ಮಾಡಿದ್ದಾರೆ ಎಂದು ಹೇಳಿದರು.

ಅತಿವೃಷ್ಠಿಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಭೇಟಿ ನೀಡಿ ಅನೇಕ ಸಮಸ್ಯೆಗಳು ಬಗೆಹರಿಸಿದರು ಎಂದರು. ರೈತರಿಗೆ 640 ಕೋಟಿ ಇನ್ಸುರೆನ್ಸ್ ಮಾಡಿದ್ದೇವೆ ನೆಟಿರೋಗಕ್ಕೆ ಪರಿಹಾರಿ ನೀಡಿದ್ದೇವೆ ಎಂದು ಹೇಳಿದರು.

ಕನಕದಾಸರ ಆದರ್ಶ ತತ್ವಗಳನ್ನು ನಮ್ಮ ನಿಜಜೀವನದಲ್ಲಿ ಅಳವಡಿಸಕೊಳ್ಳಬೇಕು ಎಂದು ತಿಳಿಸಿದರು.

ಸರಕಾರಿ ಪ್ರಥಮ ದರ್ಜೆ ಕಾಲೇಜು ಗಂಗಾವತಿ ಸೇಡಂ. ಕನ್ನಡ ಉಪನ್ಯಾಸಕರು, ಸಾಹಿತಿ ಹಾಗೂ ಚಿಂತಕರು ಡಾ.. ಶ್ರೀಶೈಲ್ ಎನ್. ಪೂಜಾರಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಕನಕದಾಸರು ನವನೀತ ಭಾವದ ವಿನೂತನ ಕವಿ. ಪಾಂಡಿತ್ಯ, ಪ್ರತಿಭೆಗಳಿಂದಲೂ ಪ್ರಾಂಜ್ವಲ ಮನಸ್ಸಿನ ಪ್ರಯೋಗ ಶೀಲತೆಯಿಂದ ಅವರು ಹಲವು ಕಾವ್ಯ ಕೃತಿಗಳನ್ನು ರಚಿಸಿದ್ದಾರೆ. ಸಂಗೀತ ಲೋಕಕ್ಕೆ ತನ್ನದೇ ಆದಂತಹ ಹೊಸ ಪ್ರಯೋಗಳನ್ನು ಮಾಡಿ ಕರ್ನಾಟಕ ಸಂಗೀತಕ್ಕೆ ಮಹತ್ತರವಾದ ಕೊಡುಗೆ ನೀಡಿದ್ದಾರೆ.

ಇದಕ್ಕೂ ಮುನ್ನ ನಗರೇಶ್ವರ ಪ್ರೌಢಶಾಲೆಯ ಹತ್ತಿರ ಸಂತ ಶ್ರೇಷ್ಠ ಶ್ರೀ ಭಕ್ತ ಕನಕದಾಸರ ಭಾವಚಿತ್ರಕ್ಕೆ ಕಲಬುರಗಿ ಗ್ರಾಮೀಣ ಶಾಸಕರ ಬಸವರಾಜ ಮತ್ತಿಮಡು ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಚಾಲನೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ಜಗದೀಶ್ವರಿ ನಾಶಿ ಅವರು ಸ್ವಾಗತಿಸಿದರು.

ಇದೇ ಸಂದರ್ಭದಲ್ಲಿ ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ ಮಹಾನಗರ ಪಾಲಿಕೆಯ ಆಯುಕ್ತ ಅವಿನಾಶ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಜಿಲ್ಲಾಪಂಚಾಯತ್ ಉಪಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ವೈ. ಸೋಮಶೇಖರ, ಕರ್ನಾಟಕ ಪ್ರದೇಶ ಕುರುಬಗೊಂಡ ಸಂಘ ಜಿಲ್ಲಾ ಶಾಖೆಯ ಕಲಬುರಗಿ ಜಿಲ್ಲಾಧ್ಯಕ್ಷ ಗುರುನಾಥ ಎಸ್. ಪೂಜಾರಿ. ಕನಕದಾಸ ವೇಷಧಾರಿ ಬಾಲಕ ಸೃಜನ ತಂದೆ ಸೋಮಶೇಖರ, ಸೇರಿದಂತೆ ಸಮಾಜ ಮುಖಂಡರು ಅಧಿಕಾರಿಗಳು ಭಾಗವಹಿಸಿದ್ದರು.

# ಅಸ್ಪೃಶ್ಯತೆ ನಿವಾರಣೆಗೆ ಬಾಬಾಸಾಹೇಬರ ವಿಚಾರ ಪ್ರಸಾರ ಅಗತ್ಯ : ಪೋತೆ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: "ದೇಶದಲ್ಲಿ ಇಂದಿಗೂ ಅಸ್ಪೃಶ್ಯತೆ ಸಂಪೂರ್ಣವಾಗಿ ನಿವಾರಣೆಯಾಗಿಲ್ಲ. ಕನಕದಾಸರನ್ನು ಹೊರಗೆ ಇಟ್ಟ ಮನುವಾದಿಗಳು, ವಿಶ್ವಗುರು ಬಸವಣ್ಣನವರ ಮತ್ತು ಬಾಬಾಸಾಹೇಬ್ ಅಂಬೇಡ್ಕರ್ ಅವರ ವಿಚಾರಧಾರೆಗೆ ಅಪಮಾನ ಮಾಡಿದ್ದಾರೆ. ಇಂತಹ ಮನೋಭಾವಕ್ಕೆ ವಿರೋಧವಾಗಿ ನಾವು ಧ್ವನಿ ಎತ್ತಬೇಕು" ಎಂದು ಹಿರಿಯ ಚಿಂತಕ ಎಚ್.ಟಿ. ಪೋತೆ ಹೇಳಿದರು. ನಗರದ ಕಲಾಮಂದಿರದಲ್ಲಿ ಕಲಬುರಗಿ ಸಾಂಸ್ಕೃತಿಕ ಪ್ರತಿಷ್ಠಾನ ಆಯೋಜಿಸಿದ್ದ ಶಿಕ್ಷಕಿ ಮಮತಾ ಜಾನೆ ಅವರ 'ಬಾಬಾಸಾಹೇಬರ ನುಡಿಮುತ್ತುಗಳು' ಪುಸ್ತಕ ಬಿಡುಗಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಬಾಸಾಹೇಬ್ ಅಂಬೇಡ್ಕರ್ ತಮ್ಮ ಕುಟುಂಬಕ್ಕಾಗಿ ಹಣ ಸಂಪಾದನೆ ಮಾಡದೇ, ದೇಶದ ಜನರಿಗೆ ಸಂವಿಧಾನ ನೀಡಿ ಸಮಾನತೆಯ ಸಮಾಜ ನಿರ್ಮಿಸಿದರು. ಮಕ್ಕಳಿಗೆ ಬುದ್ಧ, ಬಸವ, ಅಂಬೇಡ್ಕರ್ ವಿಚಾರ ತಿಳಿಸಿದ್ದಲ್ಲಿ ಮಾತ್ರ ಸಮಾನತೆ ಸಾಧನೆ ಸಾಧ್ಯ," ಎಂದರು.

ಪತ್ರಾಗಾರ ಇಲಾಖೆಯ ಉಪನಿರ್ದೇಶಕರಾದ ಡಾ. ವೀರಶೆಟ್ಟಿ ಗಾರಂಪಳ್ಳಿ ಅವರು ಪುಸ್ತಕದ ವಿಮರ್ಶೆ ಮಾಡುತ್ತಾ, ಅಂಬೇಡ್ಕರ್ ಅವರನ್ನು ನಾವು ಅಕ್ಷರಗಳ ಮೂಲಕವಲ್ಲ, ಅವುಗಳ ನಡುವಿನ ಅರ್ಥದ ಮೂಲಕ ನೋಡಬೇಕು. ಅಂ– ದಾಗ ಮಾತ್ರ ಅವರ ಹೋರಾಟದ ಬದುಕು ನಮ್ಮ ವರ್ತಮಾನದ ಬದುಕಿಗೆ ದಾರಿದೀಪವಾಗಲಿದೆ. ಪುಸ್ತಕ ಓದುವುದರ ಜೊತೆಗೆ ಅದರ ಅನುಭೂತಿ ಅತಿಮುಖ್ಯ. ಬಾಬಾಸಾಹೇಬರು ಬದುಕಿದ್ದಾಗಲೇ ಅವರ 13 ಕೃತಿಗಳು ಇಂಗ್ಲಿಷ್‌ನಲ್ಲಿ ಬಂದಿದ್ದವು. ಕನ್ನಡದಲ್ಲಿಯೇ ಅವರ ಭಾಷಣ ಮತ್ತು ಬರಹಗಳ ಕುರಿತು 22 ಸಂಪುಟಗಳು ಬಂದಿವೆ. ಮಾನವೀಯತೆಯ ಬಗ್ಗೆ, ಮನುಷ್ಯತ್ವದ ಬಗ್ಗೆ, ಪ್ರಜಾಪ್ರಭುತ್ವದ ಬಗ್ಗೆ ಚಿಂತಿಸುವ ಪ್ರತಿಯೊಬ್ಬರೂ ಮನೆಯಲ್ಲಿ ಇಡಲೇಬೇಕಾದ ಸಂಪುಟಗಳಿವು. ಮಮತಾ ಜಾನೆ ಅವರ ಕೃತಿಯಲ್ಲಿ ಕಾನೂನು, ಧರ್ಮ, ಸಮಾಜ, ದೇವರು, ಮಹಿಳೆ, ಅರ್ಥ, ಸಂಸ್ಕೃತಿ, ಪ್ರಜಾಪ್ರಭುತ್ವ, ರಾಜಕೀಯ, ಶಿಕ್ಷಣ, ಹೀಗೆ ಎಲ್ಲದರ ಕುರಿತಾದ ವಿಷಯಗಳ ಹೇಳಿಕೆಗಳು ಇಲ್ಲಿವೆ. ಅಂಬೇಡ್ಕರ್ ಅವರು ತಮ್ಮ ಜೀವಮಾನದಲ್ಲಿ ಮಾತಾಡಿರುವ, ಬರೆದಿರುವ ಈ ಹೇಳಿಕೆಗಳನ್ನು ಬದಿಗಿಟ್ಟು ನಮ್ಮ ಬದುಕನ್ನು ಸಮಾಜವನ್ನು ರೂಪಿಸಿಕೊಳ್ಳಲು ಸಾಧ್ಯವಿದೆಯೇ? ಎಂಬುದನ್ನು ನಾವು ಗಮನಿಸಬೇಕು. ಈ ಪುಸ್ತಕ ಬಾಬಾಸಾಹೇಬರ ಜೀವನಾದರ್ಶಗಳನ್ನು, ವಿಚಾರಗಳನ್ನು ಸುಲಭವಾಗಿ ಜನರಿಗೆ ತಲುಪಿಸುತ್ತವೆ" ಎಂದರು. ಸಾಹಿತಿ ಡಾ. ಶ್ರೀಶೈಲ ನಾಗರಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಡಿಡಿಪಿಐ ಶ್ರೀ ಸೂರ್ಯಕಾಂತ ಮದಾನೆ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯರಾದ ಶ್ರೀ ಬಿ. ಹೆಚ್. ನಿರಗುಡಿ ಅವರು ಕಾರ್ಯಕ್ರಮವನ್ನು ಸಂಘಟಿಸಿ ನಿರೂಪಿಸಿದರು. ಈ ಸಂದರ್ಭದಲ್ಲಿ ಪತ್ರಕರ್ತ ಶರಣಗೌಡ ಪಾಟೀಲ ಪಾಳಾ, ಸಾಹಿತಿ ಚಿ.ಸಿ. ನಿಂಗಣ್ಣ, ಡಾ. ಆನಂದ ಸಿದ್ದಾಮಣಿ, ಡಾ. ವಿಜಯಕುಮಾರ ಪರುತೆ, ಸಾಹಿತಿ ದುಖಾನ, ಹೇಮನೂಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ನಮ್ಮ ಕರ್ನಾಟಕ ಸೇನೆಯ ಕಚೇರಿ ಉದ್ಘಾಟನೆ



ಕಲಬುರಗಿ : ನಗರದ ಐವಾನ್–ಏ–ಶಾಹಿನಲ್ಲಿರುವ ವಿಜ್ಜು ವುಮೇನ್ಸ್ ಕಾಲೇಜು ಹತ್ತಿರ ಜಾಜಿ ಕಾಂಪ್ಲೇಕ್ಸ್‌ನಲ್ಲಿ ನೂತನವಾಗಿ ಆರಂಭಗೊಳ್ಳಲಿರುವ ನಮ್ಮ ಕರ್ನಾಟಕ ಸೇನೆಯ ಕಚೇರಿಯನ್ನು ಮಾಜಿ ಮೇಯರ್ ವಿಶಾಲ ದರ್ಗಿ ಉದ್ಘಾಟಿಸಿದರು. ಜಿಲ್ಲೆಯ ಜಿಲ್ಲಾಧ್ಯಕ್ಷ ಸುಧೀಂದ್ರ ಎಂ ಈಜೇರಿ ಮಾತನಾಡಿ ನಮ್ಮ ಹೆಮ್ಮೆಯ ರಾಜ್ಯಾಧ್ಯಕ್ಷರಾದ ಬಸವರಾಜ್ ಎಂ ಪಡಕೋಟೆ ಅವರ ಆದೇಶದಂತೆ ಅವರು ನಡೆದ ಬಂದ ಹಾದಿಯನ್ನು ಅನುಸರಿಸುತ್ತ ನಮ್ಮ ಸಂಘಟನೆಯ ಸಿದ್ಧಾಂತಗಳು ಕಾರ್ಯ ಚಟುವಟಿಕೆಗಳು ಹೋರಾಟದ ಚಾಕಚಕ್ಯತೆಯ ಸಂಪೂರ್ಣ ಮಾಹಿತಿಯನ್ನು ಹಂಚಿಕೊಂಡು ಮಾತನಾಡಿದ ಅವರು ತಾಯಿ ಕನ್ನಡಾಂಬೆಯ ನಾಡು,ನುಡಿಗಾಗಿ' ನಮ್ಮ ಉಸಿರಿರುವರೆಗೂ ಪ್ರಯತ್ನ ಬಿಡುವುದು ಬೇಡ ಎಂಬ ಗಟ್ಟಿ ನಿರ್ಧಾರದ ಮಾತನಾಡಿದರು.

ಮುಂಬರುವ ದಿನಮಾನಗಳಲ್ಲಿ ಕಲಬುರ್ಗಿ ಜಿಲ್ಲೆಯ ಸಮಸ್ತ ಅಭಿವೃದ್ಧಿಗೆ ನಾವೆಲ್ಲ ಒಗ್ಗಟ್ಟಿನ ಛಲ ತೋರಿಸೋಣ ಜೊತೆಗೆ ನಗರ ಘಟಕ ಅಧ್ಯಕ್ಷರು ಒಳಗೊಂಡು ಸಂಪೂರ್ಣ ಜಿಲ್ಲಾ ಹಾಗೂ ತಾಲೂಕು ಕುಟುಂಬದ ಸದಸ್ಯರೊಂದಿಗೆ ಬದಲಾವಣೆಯ ಭವಿಷ್ಯ ಕಂಡುಕೊಳ್ಳೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ದಕ್ಷಿಣ ಮತಕ್ಷೇತ್ರದ ಕಾಂಗ್ರೆಸ್ ಮುಖಂಡ ನೀಲಕಂಠರಾವ್ ಮೂಲಗೆ, ಬಿಜೆಪಿ ಮುಖಂಡ ರಾಜು ಆರ್ ವಾಡೇಕರ್, ಡಾ. ಫಾರೂಕ್ ಮಣೂರ, ಮಾದಿಗ ಸಮಾಜದ ಹಿರಿಯ ಮುಖಂಡ ದಶರಥ ಕಲಗುರ್ತಿ, ನಗರ ಘಟಕ ಅಧ್ಯಕ್ಷ ಸುರೇಶ್ ಜಿ ಹೊಸಮನಿ ಹಾಗೂ ನಗರ ಯುವ ಘಟಕ ಅಧ್ಯಕ್ಷ ಸಾಗರ್ ಡಿ ಅಭಿಷಾಳ ಸೇರಿದಂತೆ ಜಿಲ್ಲೆಯ ಪದಾಧಿಕಾರಿಗಳು ಮತ್ತು ಕಾರ್ಯಕರ್ತರ ಇದ್ದರು.

# ನವೆಂಬರ್ 15 ರಂದು ಅಪ್ರೆಂಟಿಶಿಫ್ ಮೇಳ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ.08. (ಕರ್ನಾಟಕ ವಾರ್ತೆ)– ನವದೆಹಲಿಯ ಭಾರತ ಸರ್ಕಾರದ ಡಿ.ಜಿ.ಟಿ. ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯ ವತಿಯಿಂದ (ಪ್ರಧಾನಮಂತ್ರಿ ರಾಷ್ಟ್ರೀಯ ಶಿಶುಕ್ಷು ಮೇಳ ಅಪ್ರೆಂಟಿಷಿಪ್ ಕಾಯ್ದೆ 1961 ಪ್ರಕಾರ) ಇದೇ ನವೆಂಬರ್ 15 ರಂದು ಬೆಳಿಗ್ಗೆ 10 ಗಂಟೆಗೆ ಕಲಬುರಗಿ (ಮಹಿಳಾ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅಪ್ರೆಂಟಿಷಿಪ್ ಮೇಳ (ಶಿಶುಕ್ಷು ಮೇಳ) ವನ್ನು ಏರ್ಪಡಿಸಲಾಗಿದ್ದು, ಈ ಅಪ್ರೆಂಟಿಸ್ ಮೇಳದಲ್ಲಿ ಪ್ರತಿಷ್ಠಿತ ಹಾಗೂ ಇನ್ನಿತರೆ 20ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿದ್ದಾರೆ ಎಂದು ಕಲಬುರಗಿ (ಮಹಿಳಾ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಕಂಪನಿಗಳ ವಿವರ ಇಂತಿದೆ: ಬಳ್ಳಾರಿಯ ಜೆ.ಎಸ್.ಡಬ್ಲ್ಯೂ, ಹೈದ್ರಾಬಾದಿನ ಎಂ.ಆರ್.ಎಫ್ ಟೈರ್, ಬೆಂಗಳೂರಿನ ಬಿಡದಿಯ ಟೊಯೋಟೊ ಕಿರ್ಲೋಸ್ಕರ್, ಜಹಿರಾಬಾದ್‌ನ ಮಹೇಂದ್ರ, ಸೇಡಂ ಅಲ್ಟ್ರಾಟೆಕ್, ಬೆಂಗಳೂರಿನ ಎಲ್ ಆಂಡ್ ಟಿ ಮತ್ತು ಸ್ಕಾಯಿಲೈನ್ ಇಂಡಿಯಾ, ಸೇಡಂ ಶ್ರೀ ಸಿಮೆಂಟ್, ತೊಶಿಬಾ ರಿಕ್ರೂಟ್‌ಮೆಂಟ್ ಸರ್ವಿಸೆಸ್, ಬೆಂಗಳೂರಿನ ಅಕಾರ್ಡ್ ಎಚ್. ಆರ್ ಸಲ್ಯೂಶನ್ ಪ್ರೈವೇಟ್ ಲಿಮಿಟೆಡ್, ಕಲಬುರಗಿಯ ಆಳಂದ ಕ್ರಾಸ್ ಲಕ್ಷ್ಮೀ ಗಾರ್ಮೆಂಟ್, ಬಳ್ಳಾರಿ ವಿಜಯನಗರ ಕ್ಯಾಡ್ ಮ್ಯಾಕ್ಸ್ ಸಲ್ಯೂಶನ್ ಹಾಗೂ ಕಲಬುರಗಿ ಹುಮನಾಬಾದ ರಸ್ತೆಯ ಲಾಹೋಟಿ ಮೋಟಾರ್ಸ್ ಪ್ರೈವೇಟ್ ಲಿಮಿಟೆಡ್.

ಫಿಟ್ಟರ್, ಟರ್ನರ್, ಮಶಿನಿಸ್ಟ್, ಮೆಕ್ಯಾನಿಕ್ ಮೋಟಾರ್ ವಹಿಕಲ್, ಅಡ್ವಾನ್ಸ್ ಸಿ.ಎನ್.ಸಿ. ಟೆಕ್ನಿಷಿಯನ್, ಎಲೆಕ್ಟ್ರಿಷಿಯನ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್, ಮೆಕ್ಯಾನಿಕ್ ಎಲೆಕ್ಟ್ರಿಕ್ ವಹಿಕಲ್ ವೃತ್ತಿಗಳಲ್ಲಿ ಐಟಿಐ ಪಾಸಾದ ಹಾಗೂ ಇತ್ತೀಚಿನ ಐಟಿಐ ಪರೀಕ್ಷೆಗೆ ಹಾಜರಾಗಿರುವ ತರಬೇತಿದಾರರು ಮೇಲ್ಕಂಡ ದಿನದಂದು ನಡೆಯುವ ಅಪ್ರೆಂಟಿಷಿಪ್ (ಶಿಶುಕ್ಷು) ಮೇಳದಲ್ಲಿ ತಮ್ಮ ಎಸ್.ಎಸ್.ಎಲ್.ಸಿ ಮತ್ತು ಐಟಿಐ ಅಂಕಪಟ್ಟಿಗಳ ತಲಾ ನಾಲ್ಕು ಝೆರಾಕ್ಸ್ ಪ್ರತಿ, ಆಧಾರ ಕಾರ್ಡ್ ಪ್ರತಿ ಮತ್ತು ಇತ್ತೀಚಿನ ಎರಡು ಭಾವಚಿತ್ರದೊಂದಿಗೆ ಮತ್ತಿತರ ದಾಖಲಾತಿಗಳೊಂದಿಗೆ ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ದೂರವಾಣಿ ಸಂಖ್ಯೆ 08472–236753 ಅಥವಾ ತರಬೇತಿ ಅಧಿಕಾರಿ ಅನಿಲ ಕುಮಾರ ರಾಠೋಡ ಇವರ ಮೊಬೈಲ್ ಸಂಖ್ಯೆ 9901361622 ಮತ್ತು ದ್ವಿ.ದ.ಸ

ರಾದ ದತ್ತಪ್ಪ ಇವರ ಮೊಬೈಲ್ ಸಂಖ್ಯೆ 9008439316ಗೆ ಸಂಪರ್ಕಿಸಬೇಕು. ಐಟಿಐ ಪಾಸಾದ ತರಬೇತಿದಾರರು ಹೆಚ್ಚಿನ ಸಂಖ್ಯೆಯಲ್ಲಿ ಶಿಶುಕ್ಷು ಮೇಳದಲ್ಲಿ ಭಾಗವಹಿಸಬೇಕೆಂದು ಅವರು ತಿಳಿಸಿದ್ದಾರೆ.

# ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯ ಭವನಗಳಿಗೆ ಶವಪೆಟ್ಟಿಗೆ (ಫ್ರೀಜರ್) ಒದಗಿಸಲು ಅರ್ಜಿ ಆಹ್ವಾನ

ಕಲಬುರಗಿ,ನ.08.(ಕರ್ನಾಟಕ ವಾರ್ತೆ)– ಕಲಬುರಗಿ ಮಹಾನಗರಪಾಲಿಕೆ ವತಿಯಿಂದ ಶೇ. 24.10 ಅನುಮೋದಿತ ಕ್ರೀಯಾ ಯೋಜನೆ 2009–10 ರಿಂದ 2015–16ನೇ ಸಾಲಿನ ಪರಿಷ್ಕೃತ ಕ್ರಿಯಾ ಯೋಜನೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಕಲ್ಯಾಣ ಕಾರ್ಯಕ್ರಮಗಳಡಿ 2025–26ನೇ ಸಾಲಿಗೆ ಮಹಾನಗರಪಾಲಿಕೆ ವ್ಯಾಪ್ತಿಯ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಸಮುದಾಯ ಭವನಗಳಿಗೆ (3 ಫ್ರೀಜರ್‌ಗಳು ಮಾತ್ರ) ಶವಪೆಟ್ಟಿಗೆ (ಫ್ರೀಜರ) ಒದಗಿಸಲಾಗುತ್ತಿದ್ದು, ಇದಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯ ಭವನವಾಗಿರಬೇಕು. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರಬೇಕು. ಸಮುದಾಯ ಭವನವು ನೊಂದಣಿಯಾಗಿರುಬೇಕು ಹಾಗೂ ಸಂಘದ ನವೀಕರಣ ಚಾಲ್ತಿಯಲ್ಲಿ ಇರಬೇಕು. ಈ ಮೊದಲು ಮಹಾನಗರ ಪಾಲಿಕೆಯಿಂದ ಅಥವಾ ಸರ್ಕಾರದ ವಿವಿಧ ಯೋಜನೆಯಡಿ ಸೌಲಭ್ಯ ಪಡೆದವರು ಪುನಃ ಸೌಲಭ್ಯಕ್ಕೆ ಅರ್ಜಿ ಸಲ್ಲಿಸುವಂತಿಲ್ಲ.

ನಿಗದಿತ ಅರ್ಜಿಗಳನ್ನು ಕಲಬುರಗಿ ಮಹಾನಗರ ಪಾಲಿಕೆಯ ಶೇ. 24.10 ಮತ್ತು ಅವಕ ಶಾಖೆಯಿಂದ ಕಚೇರಿ ಸಮಯದಲ್ಲಿ ನವೆಂಬರ್ 13 ರೊಳಗಾಗಿ ಪಡೆದು ಭರ್ತಿ ಮಾಡಿ ಅವಶ್ಯಕ ದಾಖಲೆಗಳೊಂದಿಗೆ 2025ರ ನವೆಂಬರ್ 15ರ ಸಂಜೆ 4.30 ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪಾಲಿಕೆಯ ಶೇ. 24.10ರ ಶಾಖೆಯನ್ನು ಹಾಗೂ ಮಹಾನಗರ ಪಾಲಿಕೆಯ http://www.kalaburagicity.mrc.gov ವೆಬ್‌ಸೈಟ್‌ನ್ನು ಸಂಪರ್ಕಿಸಲು ಕೋರಲಾಗಿದೆ.

# ಮರಣದ ಸ್ಥಿತಿಯಲ್ಲಿ ನವಜಾತ ಶಿಶು ಪತ್ತೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ರಾಂಪುರ(ಭೂ) ಕ್ರಾಸ್ ಬಸ್ ಸ್ಟಾಂಡ್ ಹಿಂದುಗಡೆ ಮರಣದ ಸ್ಥಿತಿಯಲ್ಲಿ ನವಜಾತ ಕೂಸು ಮೃತವಾಗಿ ಕಂಡಿದ್ದು. ಅದು ನವಜಾತ ಶಿಶುನಾ' ಅಥವಾ ವಿಕೃತ ಕಾಮಕ್ಕೆ ಬಲಿಯಾಗಿದ್ದ? ಅಥವಾ ಪ್ರಾಣಿಗಳಿಗೆ ಸಿಕ್ಕು ಮರಣ ಹೊಂದಿದೆಯೋ! ತಿಳಿದಂತಾಗಿದೆ. ಮಾವಿನಭಾವಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ. ಭೂಪುರ ಹಾಗೂ ಕಳ್ಳಿ ಲಿಂಗಸಗೂರು ಮಧ್ಯ ಬರುವ ರಾಂಪುರ ಕ್ರಾಸ್ ಬಸ್ಟಾಂಡ್ ಹಿಂದುಗಡೆ. ಸುಮಾರು ಎರಡು ವರ್ಷದ ಕೂಸು ಸತ್ತಸ್ಥಿತಿ ಕಂಡಿದ್ದು.ಆ ಮೃತ ಕುಸಿನಾ ದೇಹದ ಅಂಗ ಕುರಿ ಗಾಯಿಗಳ ನಾಯಿ ಕಂಡಿದ್ದು. ಈ ರಸ್ತೆ ನಾಗರಾಳ ಲಿಂಗಸಗೂರು ಮುಖ್ಯ ರಸ್ತೆ ಆಗಿದ್ದು ಇಂತಹ ಕೂಸು ಕಂಡ ಸ್ಥಳೀಯರಲ್ಲಿ ಆತಂಕ ಮನೆ ಮಾಡಿದೆ. ಜಿಲ್ಲೆಯಲ್ಲಿ ಆಗಾಗ ನವಜಾತ ಶಿಶುಗಳು ಪತ್ಯೆ ಆಗುತ್ತಿದ್ದು. ಇದಕ್ಕೆ ಲಿಂಗಸಗೂರು ತಾಲೂಕು ಕೂಡ ಹೊರತಲ್ಲ ಎನ್ನುವುದಕ್ಕೆ ಈ ಶಿಶು ಕಂಡಿರುವುದು ಸಾಕ್ಷಿ ಎನ್ನಬಹುದಾಗಿದೆ. ಆದರೆ ಕೂಸು ಮರಣದ ಸ್ಥಿತಿಯಲ್ಲಿ ಬಿದ್ದಿದ್ದು.' ಸ್ಥಳೀಯರು ಇದಕ್ಕೆ ಬೆಚ್ಚಿ ಬಿದ್ದಿದ್ದು. ಇದು ಪ್ರಾಣಿಗಳಿಂದ ತಂದು ಹಾಕಿರಾಬಹುದಾ? ಅಥವಾ ವಿಕೃತಕಾಮಿಗಳಿಂದ ಮಗುವನ್ನು ಇಲ್ಲಿ ಹಾಕಲಾಗಿದೆ ಎನ್ನುವುದು ದೊಡ್ಡ ಅನುಮಾನದ ಬೆಂಕಿ ಹೋಗಿ ಆಡುತ್ತಿದ್ದು.. ಇದಕ್ಕೆ ಗ್ರಾಮೀಣ ಪ್ರದೇಶದ ರೈತರು ಮಕ್ಕಳು ತೀವ್ರ ಆತಂಕಕ್ಕೆ ಒಳಗಾಗಿದ್ದು ಇದು ಏಗೆ ಇಲ್ಲಿ ಬಿದ್ದಿದೆ" ಎನ್ನುವುದು. ಸಾರ್ವಜನಿಕರಲ್ಲಿ ಗೊಂದಲ ಉಂಟಾಗಿದ್ದು.ಈ ಮಗುವಿನ ದೇಹ ಇಲ್ಲಿ ಬಿಸಾಡಿರುವ ಇದರ ಪಾಲಕರ ಪತ್ಯಗಾಗಿ ತಕ್ಷಣ ಇದ–ಕ್ಕೆ ಸಂಬಂಧಪಟ್ಟ ಅಧಿಕಾರಿಗಳು ತಾಲೂಕಿನಲ್ಲಿ ಆಗುತ್ತಿರುವ ಇಂತಹ ದುರ್ಘಟನೆಗೆ ಕಾರಣ ಏನು ಎಂಬುವುದು ಕಂಡುಹಿಡಿಯ ಬೇಕೆಂಬುದು ಜನರ ಒತ್ತಾಯ ಆಗಿದೆ,,

# ಕನಕದಾಸರು ಸರ್ವಕಾಲಿಕ ಶ್ರೇಷ್ಠ–ಶ್ರೀನಿವಾಸ್ ಏಗನೂರು



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ನ.8–ತಾಲೂಕಿನ ಚಿಕ್ಕಸೂಗೂರು ಗ್ರಾಮ ಪಂಚಾಯತಿಯಲ್ಲಿ ದಾಸ ಶ್ರೇಷ್ಠ ಕನಕದಾಸ ಜಯಂತಿ ಆಚರಣೆ ಮಾಡಲಾಯಿತು. ನಂತರ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀನಿವಾಸ್ ಏಗನೂರು ಅವರು ಕನಕದಾಸ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿ,ಭಕ್ತ ಕನಕದಾಸರು ಸರ್ವಕಾಲಿಕ ಶ್ರೇ□ಷ್ಠರಾಗಿದ್ದಾರೆ. ಅವರು ಬರೆದ ವಚನ ಸಾಹಿತ್ಯ ಇಂದಿಗೂ ಪ್ರಸ್ತುತವಾಗಿದೆ ಎಂದರು. ಕನಕದಾಸರು ಸಂತರಾಗಿ,ಕವಿಯಾಗಿ, ಸಾಹಿತಿಯಾಗಿ,ಸಮಾಜ ಸುಧಾಕರರಾಗಿ, ಚಳುವಳಿಗಾರರಾಗಿ ಆಕಾಲ ಘಟ್ಟದಲ್ಲಿ ಸುಧಾರಣೆ ಮಾಡಿದ್ದಾರೆ. ಸಾಹಿತ್ಯಕ್ಕೆ ಮತ್ತು ಸಂಗೀತಕ್ಕೆ ಅವರು ನೀಡಿದ ಕೊಡುಗೆ ಅಪಾರವಾದದ್ದು.ಕನಕದಾಸರ ಸಾಹಿತ್ಯವನ್ನು ಹೊರತುಪಡಿಸಿ ಕರ್ನಾಟಕದ ಭಕ್ತಿ ಸಾಹಿತ್ಯದ ಪರಂಪರೆಯನ್ನು ಪೂರ್ತಿಗೊಳಿಸಲು ಸಾಧ್ಯವಿಲ್ಲ. ಅವರು ರಚಿಸಿದ ರಾಮಧಾನ್ಯ ಚರಿತ್ರೆಯ ಮೂಲಕ ಮೇಲು–ಕೀಳು ಮಾಡಬಾರದು ಎಂಬ ನಿಲುವೇ ಅಜರಾಮರವಾದದ್ದು. ಕನಕದಾಸರ ಜಯಂತಿಯನ್ನು ಆಚರಿಸುವ ಮೂಲಕ ಅವರ ವ್ಯಕ್ತಿತ್ವವನ್ನು ಇಂದಿನ ದಿನಮಾನಗಳ ಯುವಜನತೆಗೆ ಪರಿಚಯಿಸುವುದು ಅಗತ್ಯವಿದೆ ಎಂದರು. ಕರ್ನಾಟಕದಲ್ಲಿ ಹರಿದಾಸ ಪರಂಪರೆಗೆ ಸುಮಾರು 500 ವರ್ಷಗಳ ಭವ್ಯ ಇತಿಹಾಸವಿದೆ. ಕರ್ನಾಟಕದಲ್ಲಿ 15 ಮತ್ತು 16ನೇ ಶತಮಾನಗಳಲ್ಲಿ ಜನಪ್ರಿಯವಾದ ಭಕ್ತಿ ಪಂಥದ ಮುಖ್ಯ ಹರಿದಾಸರಲ್ಲಿ ಒಬ್ಬರು ಕನಕದಾಸರು ಎಂದರು.

ಈ ಸಂದರ್ಭದಲ್ಲಿ ಅಂಬಯ್ಯ, ಶರಣಪ್ಪ, ಚಿನ್ನಯ್ಯ, ಮಹಾದೇವ, ಅನಿಲನಾಯಕ,ಸಮಾಜದ ಮುಖಂಡರು ಸೇರಿದಂತೆ ಉಪಸ್ಥಿತರಿದ್ದರು

## ವಿದ್ಯಾಜ್ಯೋತಿ ಶಾಲೆ ಕನಕದಾಸರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ನ. 8–ನಗರದ ಹೊರಹೊಲೆಯ ಏಗನೂರು ಗ್ರಾಮದ ವಿದ್ಯಾಜ್ಯೋತಿ ಎಜುಕೇಷನ್ ಟ್ರಸ್ಟ್ ಶಾಲೆಯಲ್ಲಿ ದಾಸ ಶ್ರೇಷ್ಠ ಕನಕದಾಸರ 538ನೇ ಜಯಂತಿಯನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಯಿತು. ನಂತರ ವಿದ್ಯಾಜ್ಯೋತಿ ಎಜುಕೇಷನ್ ಟ್ರಸ್ಟ್ ಶಾಲೆಯ ಸಂಸ್ಥಾಪಕ ಅಧ್ಯಕ್ಷರಾದ ಹನುಮಂತರೆಡ್ಡಿ ಅವರು ಕನಕದಾಸರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಕನಕದಾಸರು ಆದರ್ಶ ಪ್ರಿಯ ವ್ಯಕ್ತಿಯಾಗಿದ್ದು, ಇವರ ತತ್ವ ಆದರ್ಶಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದ ಸುಧಾರಣೆಗೆ ಶ್ರಮಿಸಬೇಕು ಎಂದರು. ಕನಕದಾಸರು ತಮ್ಮ ವಚನ ಸಾಹಿತ್ಯದ ಮೂಲಕ ಸಮಾಜದ ಅಂಕು ಡೊಂಕನ್ನು ತಿದ್ದಿದ ಮಹನೀಯರು.

ಮಾತಿನಿಂದ ಮಾಡಲು ಸಾಧ್ಯವಿಲ್ಲದ ಕೆಲಸವನ್ನು ಸಂಗೀತ ಮಾಡುತ್ತದೆ. ಕನಕದಾಸರು ಹಾಡಿನ ಮೂಲಕ ಸಮಾಜಕ್ಕೆ ಅನೇಕ ಸಂದೇಶಗಳನ್ನು ನೀಡಿದ ಮಹಾಪುರುಷ. ಕಳೆದ 2 ದಶಕಗಳಿಂದ ಕನಕದಾಸರ ನೆನಪನ್ನು ಮೆಲುಕು ಹಾಕುವ ಪ್ರಕ್ರಿಯೆ ನಾಡಿನ ಎಲ್ಲಾ ಕಡೆ ದಿನನಿತ್ಯ ಸಾಗುತ್ತಿದೆ. ಹಲವಾರು ಧಾರ್ಮಿಕ, ಸಾಮಾಜಿಕ ಮತ್ತು ರಾಜಕೀಯ ಕಾರಣಗಳಿಗಾಗಿ ನಾವು ಕನಕನ ನೆನಪನ್ನು ಕಟ್ಟುತ್ತಾ ಇದ್ದೇವೆ ಎಂದರು.

ಯುದ್ಧ, ಕೌರ್ಯ, ಹಿಂಸೆಗಳೇ ಜಗತ್ತಿನ ಮೂಲೆ ಮೂಲೆಗಳಲ್ಲಿ ವಿಜೃಂಭಿಸುತ್ತಿರುವ ಈ ಕಾಲಘಟ್ಟದಲ್ಲಿ ಬದುಕಿನ ಸಾರ್ಥಕತೆಯ ನಿಜವಾದ ಪರ್ಯಾಯ ಯಾವುದೆಂದರೆ ಅದು ಕನಕದಾಸರು. ಸಾಹಿತ್ಯ ಲೋಕಕ್ಕೆ ಅವರ ಕೊಡುಗೆ ಅಪಾರ. ಸಮಾಜದಲ್ಲಿ ಮೇಲು–ಕೀಳು ತಾರತಮ್ಯವನ್ನು ಅನುಭವಿಸಿಕೊಂಡು ಬಂದ ಅವರು ಮನನೊಂದು ಸಮಾಜವನ್ನು ಪರಿವರ್ತನೆಗೆ ಶ್ರಮಿಸಿದ್ದರು.ಶಾಲಾ ಮಕ್ಕಳು ಕನಕದಾಸರ ವೇಷ ಧರಸಿ ಗಮನ ಸೆಳೆದರು. ಈ ಸಂದರ್ಭದಲ್ಲಿ ಹನುಮಂತರೆಡ್ಡಿ ಧರ್ಮ ಪತ್ನಿ, ಶಾಲಾ ಶಿಕ್ಷಕರು ವಿದ್ಯಾರ್ಥಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 18ರಂದು ಸಂವಿಧಾನ ಜಾಗೃತಿ ಬೃಹತ್ ಜಾಥಾ: ಎಲ್ಲ ಪಕ್ಷಗಳಲ್ಲಿ ಮನುವಾದಿ ಮನಸ್ಸುಗಳಿವೆ ಎಂದು ಎಂ.ಆರ್. ಭೇರಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಸಂವಿಧಾನದ ಆಶಯಗಳನ್ನು ಸಾರ್ವಜನಿಕರಿಗೆ ತಲುಪಿಸಲು ನವೆಂಬರ್ 18ರಂದು ಸಂವಿಧಾನ ಜಾಗೃತಿ ಬೃಹತ್ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂವಿಧಾನ ಸಂರಕ್ಷಣಾ ಪಡೆಯ ಸಂಚಾಲಕ ಎಂ.ಆರ್. ಭೇರಿ ತಿಳಿಸಿದರು.

ಏಮ್ಸ್ ಹೋರಾಟ ಸಮಿತಿ ಧರಣಿ ವೇದಿಕೆಯಲ್ಲಿ ಶುಕ್ರವಾರ ಕರೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ನವೆಂಬರ್ 26 ಸಂವಿಧಾನ ಸಮರ್ಪಣೆಯ ದಿನವಾಗಿರುವುದರಿಂದ ಈ ತಿಂಗಳು ಸಂವಿಧಾನದ ಮೌಲ್ಯಗಳನ್ನು ಜನರಿಗೆ ತಲುಪಿಸುವ ಜವಾಬ್ದಾರಿಯಿದೆ. ಪ್ರಸ್ತುತ ಸಂವಿಧಾನ ವಿರೋಧಿ ಪ್ರವೃತ್ತಿಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜಾಗೃತಿ ಅಗತ್ಯವಾಗಿದೆಯೆಂದರು.

**ಜಾಥಾ ಮಾರ್ಗ ಮತ್ತು ವೇಳಾಪಟ್ಟಿ**

ಬೆಳಿಗ್ಗೆ 10.30ಕ್ಕೆ ಕರ್ನಾಟಕ ಸಂಘದಿಂದ ಜಾಥಾ ಪ್ರಾರಂಭವಾಗಿ ಶೆಟ್ಟಿಬಾವಿ ಚೌಕ್, ಸರಾಫ್ ಬಜಾರ್, ತೀನ್ ಕಂದೀಲ್, ಏಕ್ ಮೀನಾರ್, ತಹಸೀಲ್ದಾರ ಕಚೇರಿ, ಬಸ್ ನಿಲ್ದಾಣ ಮಾರ್ಗವಾಗಿ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಸಮಾರೋಪಗೊಳ್ಳಲಿದೆ. ನಂತರ ಬಹಿರಂಗ ಸಮಾವೇಶ ನಡೆಯಲಿದೆ. ರಮಾಬಾಯಿ ಅಂಬೇಡ್ಕರ್ ಕುರಿತ ನಾಟಕ ಈ ಸಂದರ್ಭದಲ್ಲಿ ಪ್ರದರ್ಶನಗೊಳ್ಳಲಿದೆ.

**ವಸ್ತ್ರ ಸಂಹಿತೆ ಮತ್ತು ಘೋಷಣೆಗಳು**

ಜಾಥಾದಲ್ಲಿ ಸಂವಿಧಾನ ಪೀಠಿಕೆಯ ವಾಹನ ಇರಲಿದೆ. ಪುರುಷರು ಬಿಳಿ ಅಂಗಿ, ನೀಲಿ ಪ್ಯಾಂಟ್ ಮತ್ತು ನೀಲಿ ಶಾಲು ಧರಿಸಲಿದ್ದಾರೆ. ಮಹಿಳೆಯರು ನೀಲಿ ಅಂಚಿನ ಸೀರೆ ತೊಟ್ಟು ಭಾಗವಹಿಸಲಿದ್ದಾರೆ."ಬಡಿಗೆ ಬೇಡ, ಪೆನ್ನು ಬೇಕು", "ದ್ವೇಷ ಬಿಟ್ಟು ದೇಶ ಕಟ್ಟೋಣ" ಸೇರಿದಂತೆ ಜಾಗೃತಿ ಘೋಷಣೆಗಳನ್ನು ಮೊಳಗಿಸಲಾಗುವುದು. ಧಮ್ಮ ಚಕ್ರದ ನೀಲಿ ದ್ವಜವನ್ನು ಭಾಗವಹಿಸುವವರು ಹಿಡಿದಿರುತ್ತಾರೆ.



**ಸಂಘಟನೆಗಳ ಪಾಲ್ಗೊಳ್ಳಿಕೆ**

ದಲಿತ ಪರ, ಮಹಿಳಾ ಪರ, ಮಾನವತಾ ಪರ, ಪ್ರಗತಿಪರ 30ಕ್ಕೂ ಹೆಚ್ಚು ಸಂಘಟನೆಗಳನ್ನೊಳಗೊಂಡ ಸಂವಿಧಾನ ಸಂರಕ್ಷಣಾ ಪಡೆ ಈ ಜಾಥಾವನ್ನು ಆಯೋಜಿಸಿದೆ. ಸಾವಿರಕ್ಕೂ ಹೆಚ್ಚು ಜನ ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ಭೇರಿ ಹೇಳಿದರು.ಎಲ್ಲ ಪಕ್ಷಗಳಲ್ಲೂ ಮನುವಾದಿ ಮನಸ್ಸುಗಳಿವೆ"ಮನುವಾದಿ ಮನಸ್ಸುಗಳು ಎಲ್ಲ ರಾಜಕೀಯ ಪಕ್ಷಗಳಲ್ಲಿಯೂ ಇದ್ದಾ–ರೆ. ಕಾಂಗ್ರೆಸ್ ಪಕ್ಷವೂ ಇದರ ಹೊರತಲ್ಲ. ಇಂತಹ ಮನಸ್ಸುಗಳು ಅಂಬೇಡ್ಕರ್ ಅವರ ಆಶಯಗಳನ್ನು ಮಸುಕುಗೊಳಿಸುತ್ತಿವೆ"ಎಂದು ಭೇರಿ ಟೀಕಿಸಿದರು.ಸಂವಿಧಾನ ಉಳಿದರೆ ಮಾತ್ರ ಪ್ರಜಾಪ್ರಭುತ್ವ ಉಳಿಯುತ್ತದೆ. ಹೀಗಾಗಿ ಸಂವಿಧಾನದ ರಕ್ಷಣೆಯು ಇಂದಿನ ತುರ್ತು ಅಗತ್ಯ ಎಂದು ಅವರು ಅಭಿಪ್ರಾಯಪಟ್ಟರು.

**ಉಪಸ್ಥಿತರಾದವರು**

# ದತ್ತಾತ್ರೇಯ ಸ್ವಾಮಿ ವಿಜೃಂಭಣೆಯಿಂದ ಪಲ್ಲಕ್ಕಿ ಉತ್ಸವ, ಭವ್ಯ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ನ.8–ತಾಲೂಕಿನ ಗಂಜಹಳ್ಳಿ ಗ್ರಾಮದ ಶ್ರೀ ದತ್ತಾತೆ–್ರಯ ಸ್ವಾಮಿಯವರ ಹೂವುಗಳಿಂದ ಅಲಂಕಾರಗೊಳಿಸಿದ ಪಲ್ಲಕ್ಕಿ ಉತ್ಸವದ ಭವ್ಯ ಮೆರವಣಿಗೆ ಹಾಗೂ ಶ್ರೀ ಸದ್ಗುರು ನಲನ್ನ ಸ್ವಾಮಿ 17ನೇ ವಾರ್ಷಿಕ ಆರಾಧನೆ ಮಹೋತ್ಸವ ಮಠದ ಪೀಠಾಧಿಪತಿ ಭಾಸ್ಕರ್ ಸ್ವಾಮಿ ನೇತೃತ್ವದಲ್ಲಿ ಗ್ರಾಮದಲ್ಲಿ ಭಾರೀ ವೈಭವದಿಂದ ನಡೆಸಲಾಯಿತು.ದತ್ತಾತ್ರೇಯ ಮಠದ ಪೀಠಾಧಿಪತಿ ಭಾಸ್ಕರ್ ತಾತನವರ ದಿವ್ಯಾ ಸಾನಿಧ್ಯದಲ್ಲಿ ಕಳೆದ 17 ವರ್ಷಗಳಿಂದ ಭಾರಿ ಸಡಗರ ಸಂಭ್ರಮದಿಂದ ನಡೆಯುತ್ತದೆ. ಅದೇ ರೀತಿ ಈ ವರ್ಷ ಕೂಡ ಅಪಾರ ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ಪಲ್ಲಕ್ಕಿ ಉತ್ಸವ ಸಂಭ್ರಮ ಜರುಗಿತು.

ನಂತರ ದತ್ತಾತ್ರೇಯ ಸ್ವಾಮಿಯ ಮಠದಿಂದ ಹೊರಟ ದತ್ತಾತ್ರೇಯ ಮೂರ್ತಿ ಇರುವ ಪಲ್ಲಕ್ಕಿ ಉತ್ಸವದ ಹೂವಿನ ಆಟ, ಭಜನ ಡೊಳ್ಳಿನ ಮೇಳ, ವಿವಿಧ ವಾದ್ಯ ವೈಭವಗಳೊಂದಿಗೆ ಭಕ್ತರ ಕುಣಿತ ಹಾಗೂ ಸುಮಂಗಲಿಯರ ಕಳಸಾರತಿಗಳೊಂದಿಗೆ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸುವ ಮೂಲಕ ಕೃಷ್ಣ ನದಿ ತಲುಪಿತು.ನಂತರ ನದಿಯಲ್ಲಿ ಸ್ನಾನ ಮುಗಿಸಿ ಪಲ್ಲಕ್ಕಿ ಉತ್ಸವದ ಮೆರವಣಿಗೆ ಗ್ರಾಮಕ್ಕೆ ಬರುತ್ತಿದ್ದಂತೆ ಭಕ್ತರು ಪಟಾಕಿ ಸಿಡಿಸಿ ಅದ್ದೂ–ರಿಯಾಗಿ ಬರ ಮಾಡಿಕೊಂಡರು. ಡೊಳ್ಳು ಕುಣಿತ,ಭಜನೆ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ಜೊತೆಗೆ ನೂರಾರು ಸಂಖ್ಯೆಯ ಭಕ್ತರು ಹರಕೆಗಳನ್ನು ತೀರಿಸುವ ಮೂಲಕ ನಲ್ಲನ್ನ ಸ್ವಾಮಿಯ ಕೃಪ ಆಶೀರ್ವಾದಕ್ಕೆ ಪಾತ್ರರಾದರು.ಪಲ್ಲಕಿ ಉತ್ಸವದ ಮೆರವಣಿಗೆಯ ಮಧ್ಯದಲ್ಲಿ ಭಕ್ತರು ಶ್ರದ್ಧೆ, ಭಕ್ತಿಯಿಂದ ಪಲ್ಲಕ್ಕಿಯಲ್ಲಿ ಇರುವ ಮೂರ್ತಿಗೆ ಹೂವು. ಹಣ್ಣು. ಆರತಿಗಳೊಂದಿಗೆ ಪೂಜೆ ನೆರವೇರಿಸಿ ಹರಕೆ ಮುಟ್ಟಿಸಿದರು. ಮೆರವಣಿಗೆಯಲ್ಲಿ ಡೊಳ್ಳಿನ ಮೇಳ ಕುಣಿತ ಹಾಗೂ ಸುಮಂಗಲಿಯರ ಕಳಸ, ಆರತಿ ಮೆರವಣಿಗೆಗೆ ಮೆರಗು ತಂದಿತು. ನೂರಾರು ಭಕ್ತರು ದೀಡ್ ನಮಸ್ಕಾರ ಹಾಕಿ ಹರಕೆ ಸಲ್ಲಿಸಿದರು. ರಾಜ್ಯ ಸೇರಿ ಪಲ್ಲಕ್ಕಿ ಮಹೋತ್ಸವದಲ್ಲಿ ತೆಲಂಗಾಣ ಮತ್ತು ಆಂಧ್ರ ಪ್ರದೇಶ ಸೇರಿದಂತೆ ಗಂಜಹಳ್ಳಿ ಗ್ರಾಮದ ಸುತ್ತಮುತ್ತಲಿನ ಗ್ರಾಮಸ್ಥರು ಅಪಾರ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡಿದ್ದರು.ಪ್ರತಿ ವರ್ಷದಂತೆ ಗ್ರಾಮದ ಜನರು ದತ್ತಾತ್ರೇಯ ಸ್ವಾಮಿಯ ಮಠದಿಂದ ಕೃಷ್ಣ ನದಿಯ ವರೆಗೆ ಪಲ್ಲಕ್ಕಿ ಜೊತೆಗೆ ಪಾದಯಾತ್ರೆ ನಡೆಸಿ ಮರಳಿ ಮಠದ ವರೆಗೆ ಭವ್ಯ ಮೆರವಣಿಗೆ ನಡೆಸಲಾಯಿತು. ಇಂದು ಸಂಜೆ ಮಠದಲ್ಲಿ ಶ್ರೀ ದತ್ತಾತ್ರೇಯ ಸ್ವಾಮಿಗೆ ವಿಶೇಷ ಪೂಜೆ ಮತ್ತು ಮಠದ ಪೀಠಾಧಿಪತಿ ಭಾಸ್ಕರ್ ಸ್ವಾಮಿ ನೇತೃತ್ವದಲ್ಲಿ ರಾತ್ರಿ ಅಪಾರ ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ಭಜನೆ ಕಾರ್ಯಕ್ರಮ ನಡೆಸಲಾಗುತ್ತದೆ. ದತ್ತಾತ್ರೇಯ ಸ್ವಾಮಿ ಪಲ್ಲಕ್ಕಿ ಹಾಗೂ 17 ನೇ ವಾರ್ಷಿಕ ಆರಾಧನೆ ಮಹೋತ್ಸವ ಕಾರ್ಯಕ್ರಮದಲ್ಲಿ ಅನ್ನ ಸಂತರ್ಪಣೆ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ಊರಿನ ಗ್ರಾಮಸ್ಥರು, ತೆಲಂಗಾಣ, ಆಂಧ್ರಪ್ರದೇಶ, ಗಂಜಹಳ್ಳಿ ಗ್ರಾಮದ ಸುತ್ತಮುತ್ತಲಿನ ಗ್ರಾಮಸ್ಥರು ಸೇರಿದಂತೆ ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡಿದ್ದರು.

## ಪ್ರಕಾಶ ಘಾಳೆ ರೈತರ ಬೇಡಿಕೆಗೆ ಸರ್ಕಾರ ಸ್ಪಂದನೆ

ಬೀದರ್: ಕಬ್ಬಿಗೆ ಯೋಗ್ಯ ಬೆಲೆ ನಿಗದಿ ಹಾಗೂ ಅತಿವೃಷ್ಟಿ ಸಂತ್ರಸ್ತರಿಗೆ ಸಕಾಲಕ್ಕೆ ಪರಿಹಾರ ಕಲ್ಪಿಸುವ ಮೂಲಕ ರಾಜ್ಯ ಸರ್ಕಾರ ರೈತರ ಬೇಡಿಕೆಗೆ ಸ್ಪಂದಿಸಿದೆ ಎಂದು ಜಿಲ್ಲೆಯವರೇ ಆದ ಕಾಂಗ್ರೆಸ್ ಕಿಸಾನ್ ವಿಭಾಗದ ರಾಷ್ಟ್ರೀಯ ಸಂಯೋಜಕ ಪ್ರಕಾಶ ಘಾಳೆ ಹೇಳಿದ್ದಾರೆ.

ಪ್ರತಿ ಟನ್ ಕಬ್ಬಿಗೆ ಸರ್ಕಾರದ ರೂ. 50 ಪ್ರೋತ್ಸಾಹ ಧನ ಹಾಗೂ ಕಾರ್ಖಾನೆಯ ಹೆಚ್ಚುವರಿ ರೂ. 50 ಸೇರಿದಂತೆ ಸರ್ಕಾರ ರೂ. 3,400 ಬೆಲೆ ನಿಗದಿಪಡಿಸಿದೆ ಎಂದು ತಿಳಿಸಿದ್ದಾರೆ.

ನೆರೆಯ ರಾಜ್ಯ ಮಹಾರಾಷ್ಟ್ರಕ್ಕೆ ಹೋಲಿಸಿದರೆ ಈ ಬೆಲೆ ಪ್ರತಿ ಟನ್‌ಗೆ ರೂ. 400 ರಿಂದ ರೂ. 600 ಅಧಿಕವಾಗಿದೆ. ಕಾಂಗ್ರೆಸ್ ರೈತರ ಹಿತ ರಕ್ಷಣೆ ಮಾಡುತ್ತಿದ್ದರೆ, ಬಿಜೆಪಿ ಅಧಿಕಾರದಲ್ಲಿ ಇರುವ ರಾಜ್ಯಗಳಲ್ಲಿ ರೈತರ ಮೇಲೆ ಅನ್ಯಾಯ ಆಗುತ್ತಲೇ ಇದೆ ಎಂದು ದೂರಿದ್ದಾರೆ.

ಕಬ್ಬು ಬೆಲೆ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನುಡಿದಂತೆ ನಡೆದುಕೊಂಡಿದ್ದಾರೆ. ರೈತ ಪರ ಕಾಳಜಿ ತೋರಿದ್ದಾರೆ ಎಂದು ಪ್ರತಿಕ್ರಿಯಿಸಿದ್ದಾರೆ.

ರೈತರ ಬೇಡಿಕೆ ಹಾಗೂ ಸಂಕಷ್ಟಕ್ಕೆ ಸ್ಪಂದಿಸಿದ್ದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದ್ದಾರೆ.

## ಪ್ರವಚನ ಕಾರ್ಯಕ್ರಮದಲ್ಲಿ ಹಾವಗಿಲಿಂಗೇಶ್ವರ ಶ್ರೀ ಹೇಳಿಕೆ ಭಕ್ತರ ಇಷ್ಟಾರ್ಥ ಈಡೇರಿಸುವ ಸಿದ್ಧೇಶ್ವರ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಹೊನ್ನಿಕೇರಿ ಸಿದ್ಧೇಶ್ವರ ಭಕ್ತಿಯಿಂದ ಪೂಜಿಸುವವರ ಎಲ್ಲ ಇಷ್ಟಾರ್ಥಗಳನ್ನು ಈಡೇರಿಸುತ್ತಾನೆ ಎಂದು ಹೈದರಾಬಾದ್–ಹಲಬರ್ಗಾ–ಶಿವಣಿ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯ ನುಡಿದರು. ತಾಲ್ಲೂಕಿನ ಹೊನ್ನಿಕೇರಿ ಗ್ರಾಮದಲ್ಲಿ ಸಿದ್ಧೇಶ್ವರ ಮಂದಿರ ಗೋಪುರದ ಕಳಸಾರೋಹಣ ಹಾಗೂ ಲಕ್ಷದೀಪೋತ್ಸವ ನಿಮಿತ್ತ ಹಮ್ಮಿಕೊಳ್ಳಲಾದ ಜೀವನ ದರ್ಶನ ಪ್ರವಚನವನ್ನು ಶುಕ್ರವಾರ ಉದ್ಘಾಟಿಸಿ ಅವರು ಮಾತನಾಡಿದರು.

ಅಹಂಕಾರ ತೊರೆದು, ಶುದ್ಧ ಭಾವದಿಂದ ತನ್ನ ಸನ್ನಿಧಿಗೆ ಬರುವವರ ಮೇಲೆ ಸಿದ್ಧೇಶ್ವರನ ಒಲುಮೆ ಆಗುತ್ತದೆ ಎಂದು ತಿಳಿಸಿದರು.

ಸಿದ್ಧೇಶ್ವರ ಲಿಂಗ ಉದ್ಭವ ಲಿಂಗವಾಗಿದೆ. ಹೊನ್ನಿಕೇರಿ ಸಿದ್ಧೇಶ್ವರರಿಗೆ ಕರ್ನಾಟಕ, ಮಹಾರಾಷ್ಟ್ರ, ತೆಲಂಗಾಣ, ಆಂಧ್ರಪ್ರದೇಶ ಸೇರಿ ವಿವಿಧೆಡೆ ಲಕ್ಷಾಂತರ ಭಕ್ತರು ಇದ್ದಾರೆ ಎಂದು ಹೇಳಿದರು.

ಗಂಗಾಧರ ಸ್ವಾಮಿ ಬಾಳೂರ, ಶಿವಾನಂದ ಸ್ವಾಮಿ ಬಾಳೂರ, ನಾಗಯ್ಯ ಸ್ವಾಮಿ, ಸಂಗಮೇಶ ಪಾಟೀಲ, ಸಂತೋಷ್ ಭಟ್, ಪ್ರೇಮಸಾಗರ್ ಪಾಟೀಲ, ರೇವಣಸಿದ್ದಯ್ಯ ಸ್ವಾಮಿ, ಬಾಬುರಾವ್ ಮುತ್ತ್ಯಾ, ಬಾಳು ಪಾಟೀಲ ಮತ್ತಿತರರು ಇದ್ದರು.

ಜೀವನ ದರ್ಶನ ಪ್ರವಚನ ನ. 11 ರ ವರೆಗೆ ನಡೆಯಲಿದೆ.

ರಂಭಾಪುರಿ ಶ್ರೀ ಸಾನಿಧ್ಯದಲ್ಲಿ ಕಳಸಾರೋಹಣ ಸಮಾರಂಭ ಹೊನ್ನಿಕೇರಿ ಸಿದ್ಧೇಶ್ವರ ದೇಗುಲದ ನೂತನ ಗೋಪುರ ಕಳಸಾರೋಹಣ ಸಮಾರಂಭ ರಂಭಾಪುರಿ ಜಗದ್ಗುರು ವೀರಸೋಮೇಶ್ವರ ಶಿವಾಚಾರ್ಯ ಭಗತ್ಪಾದರ ದಿವ್ಯ ಸಾನಿಧ್ಯದಲ್ಲಿ ನಡೆಯಲಿದೆ ಎಂದು ಹಾವಗಿಲಿಂಗೇಶ್ವರ ಶಿವಾಚಾರ್ಯ ತಿಳಿಸಿದರು.

12 ರಂದು ಬೆಳಿಗ್ಗೆ 10.30ಕ್ಕೆ ಮಹಾದ್ವಾರದಿಂದ ಸಿದ್ಧೇಶ್ವರ ಮಂದಿರ ವರೆಗೆ ಕುಂಭ ಕಳಸ, ಕಲಾ ತಂಡಗಳೊಂದಿಗೆ ರಂಭಾಪುರಿ ಶ್ರೀಗಳ ಅದ್ದೂರಿ ಮೆರವಣಿಗೆ ನಡೆಯಲಿದೆ. ಮಧ್ಯಾಹ್ನ 1.30ಕ್ಕೆ ಕಳಸಾರೋಹಣ, ಮಧ್ಯಾಹ್ನ 2.30ಕ್ಕೆ ಧರ್ಮಸಭೆ, ನಂತರ ಮಹಾ ಪ್ರಸಾದ, ಸಂಜೆ ಲಕ್ಷ ದೀಪೋತ್ಸವ ಜರುಗಲಿದೆ ಎಂದು ಹೇಳಿದರು.

## ಚಂದ್ರಂಪಳ್ಳಿ ತೋಟಗಾರಿಕೆ ಕ್ಷೇತ್ರದಲ್ಲಿನ ಸೀಬೆ ಫಸಲು: ಇ–ಹರಾಜು ಮೂಲಕ ವಿಲೇವಾರಿ

ಕಲಬುರಗಿ,ನ.08.(ಕರ್ನಾಟಕ ವಾರ್ತೆ)–2024–25ನೇ ಸಾಲಿನ ಕಲಬುರಗಿ ಜಿಲ್ಲೆಯ ಚಂದ್ರಂಪಳ್ಳಿ ತೋಟಗಾರಿಕೆ ಕ್ಷೇತ್ರದಲ್ಲಿ ಸೀಬೆ ಫಸಲು https://kppp.karnataka.gov.inಇ–ಹರಾಜು ಮೂಲಕ ವಿಲೇವಾರಿ ಮಾಡಲಾಗುತ್ತಿದೆ ಎಂದು ಚಂದ್ರಪಳ್ಳಿ (ರಾಜ್ಯ ವಲಯ) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

ಈ ಹರಾಜಿಗೆ ಸಾರ್ವಜನಿಕರು ಮತ್ತು ಹಣ್ಣಿನ ವ್ಯಾಪಾರಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 2025ರ ನವೆಂಬರ್ 12 ರಂದು ಬೆಳಿಗ್ಗೆ 10 ಗಂಟೆಯವರೆಗೆ ಇರುತ್ತದೆ. ಲೈವ್ ಹರಾಜು ನವೆಂಬರ್ 13ರ ಬೆಳಿಗ್ಗೆ 11 ರಿಂದ ಸಂಜೆ 5 ಗಂಟೆಯುರೆಗೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಚಂದ್ರಂಪಳ್ಳಿ (ರಾವ) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಮೊಬೈಲ್ ಸಂಖ್ಯೆ 6362567048 ಗೆ ಸಂಪರ್ಕಿಸಲು ಕೋರಲಾಗಿದೆ.

## ಶ್ರೀ ಸೂಗುರೇಶ್ವರ ಜಾತ್ರೋತ್ಸವ ಪೂರ್ವಭಾವಿ ಸಭೆ

ರಾಯಚೂರು, ನವೆಂಬರ್ 07

ರಾಯಚೂರು ಗ್ರಾಮೀಣ ಕ್ಷೇತ್ರದ ದೇವಸೂಗುರ ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಮಹರ್ಷಿ ವಾಲ್ಮೀಕಿ ಅಭಿವೃಧಿ ನಿಗಮದ ಅಧ್ಯಕ್ಷರೂ ಆಗಿರುವ ಶಾಸಕರಾದ ಬಸನಗೌಡ ದದ್ದಲ್ ಅವರು ಬುಧವಾರ ಉದ್ಘಾಟಿಸಿದರು.

ಸಿಎಸ್ಆರ್ ಅನುದಾನದಡಿ 2ನೇ ಮುಖ್ಯ ರಸ್ತೆಯಿಂದ ಶ್ರೀ ಸೂಗುರೇಶ್ವರ ದೇವಸ್ಥಾನದವರೆಗೆ ನಿರ್ಮಿಸಲಾದ ಸಿಸಿ ರಸ್ತೆ, ವಿದ್ಯುತ್ ದೀಪಗಳ ಅಳವಡಿಕೆ ಸೇರಿದಂತೆ ಹಲವಾರು ಮೂಲಸೌಕರ್ಯ ಕಾಮಗಾರಿಗಳು ಉದ್ಘಾಟಿಸಲ್ಪಟ್ಟವು. ಜೊತೆಗೆ ಕೆಕೆಆರ್‌ಡಿಬಿ ಮ್ಯಾಕ್ರೋ ಅನುದಾನದಡಿ ನಿರ್ಮಿತ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ನಾಲ್ಕು ಹೆಚ್ಚುವರಿ ತರಗತಿ ಕೊಠಡಿಗಳನ್ನು ಶಾಸಕರು ಉದ್ಘಾಟಿಸಿದರು.




ದೇವಸೂಗುರ ಗ್ರಾಮದಲ್ಲಿ ನಾನಾ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟಿಸಿದ ಶಾಸಕರಾದ ಬಸನಗೌಡ ದದ್ದಲ್

ಪೂರ್ವಭಾವಿ ಸಭೆ ಗ್ರಾಮಕ್ಕೆ ಭೇಟಿ ನೀಡಿದ ಶಾಸಕರು ಮೊದಲಿಗೆ ಸೂಕ್ಷೇತ್ರ ಸೂಗುರೇಶ್ವರ ಸ್ವಾಮಿಯ ದರ್ಶನ ಪಡೆದು ಆಶೀರ್ವಾದ ಪಡೆದರು. ಬಳಿಕ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ ನಡೆಸಿ ವಿವಿಧ ಸಿದ್ಧತಾ ಕಾರ್ಯಗಳ ಮೇಲೆ ಗ್ರಾಮಸ್ಥರು, ಅಧಿಕಾರಿಗಳು ಹಾಗೂ ಸಿಬ್ಬಂದಿಯೊಂದಿಗೆ ಚರ್ಚಿಸಿದರು. ಭಾಗಗಳು ಹಾಗೂ ನೆರೆಯ ರಾಜ್ಯಗಳಿಂದ ಭಕ್ತರು ಆಗಮಿಸುವ ಹಿನ್ನೆಲೆಯಲ್ಲಿ ಕುಡಿಯುವ ನೀರು, ವಾಸ್ತವ್ಯ, ಪ್ರಸಾದ ವ್ಯವಸ್ಥೆ ಸೇರಿದಂತೆ ಎಲ್ಲ ಮೂಲಭೂತ ಸೌಕರ್ಯಗಳನ್ನು ಸಮರ್ಪಕವಾಗಿ ಒದಗಿಸುವಂತೆ ಸೂಚಿಸಿ, ರಥೋತ್ಸವವನ್ನು ಉನ್ನತ ಮಟ್ಟದಲ್ಲಿ ನಡೆಸುವ ಕುರಿತು ಮಾರ್ಗದರ್ಶನ ನೀಡಿದರು.

ಸಭೆಯಲ್ಲಿ ಗ್ರಾಮ ಹಿರಿಯರು, ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕನಕದಾಸರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ ಬೀದರ, ನವೆಂಬರ್ 08 (ಕರ್ನಾಟಕ ವಾರ್ತೆ) : ಶನಿವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಭಕ್ತ ಶ್ರೇಷ್ಠ ಕನಕದಾಸರ ಭಾವಚಿತ್ರಕ್ಕೆ ಪುಷ್ಪ ನಮನ ಮಾಡಿ ಪೂಜೆ ಸಲ್ಲಿಸಿ ಜಯಂತಿಯನ್ನು ಆಚರಿಸಲಾಯಿತು. ನಂತರ ಬೊಮಗೊಂಡೇಶ್ವರ ವೃತ್ತ ಬಳಿ ಕನಕದಾಸರ ಭಾವಚಿತ್ರ ಹೊತ್ತ ರಥ ಮೆರವಣಿಗೆ ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್, ಶಾಸಕ ಶೈಲೇಂದ್ರ ಬೆಲ್ದಾಳೆ, ಮಾಜಿ ಸಚಿವ ಬಂಡೆಪ್ಪ ಖಾಶಂಪೂರ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಚಾಲನೆ ನೀಡಿದರು. ನಂತರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಸಿಮಿನಾಗಣ್ಣ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡರು.



ಬೀದರ್: ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತದ ನೂತನ ನಿರ್ದೇಶಕರಾಗಿ ನೇಮಕಗೊಂಡ ರಾಜಕುಮಾರ ತರಿ ಅವರನ್ನು ಸಂಸದ ಸಾಗರ್ ಖಂಡ್ರೆ ಶುಕ್ರವಾರ ಸತ್ಕರಿಸಿದರು. ಶಾಲು ಹೊದಿಸಿ, ಹೂಮಾಲೆ ಹಾಕಿ ಗೌರವಿಸಿದರು. ಕಾಂಗ್ರೆಸ್ ಪಕ್ಷದ ಮುಖಂಡರು ಇದ್ದರು.

# ಪ್ರತಿಯೊಂದು ಪದಕ್ಕೂ ಒಂದು ಮೌಲ್ಯವಿದೆ: ಶಾಸಕ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ
ಬಳ್ಳಾರಿ,ನ.08(ಕರ್ನಾಟಕವಾರ್ತೆ):

ಭಕ್ತಶ್ರೇಷ್ಠ ಕನಕದಾಸರ ಕೀರ್ತನೆಗಳಲ್ಲಿ ಪ್ರತಿಯೊಂದು ಪದಕ್ಕೂಜೀವನಾಂಶದಮೌಲ್ಯವಿದೆ. ಪ್ರತಿಯೊಬ್ಬರೂ ಅರಿತುಕೊಳ್ಳಬೇಕು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಶನಿವಾರ ಆಯೋಸಿದ್ದ ಭಕ್ತಶ್ರೇಷ್ಠ ಶ್ರೀ ಕನಕದಾಸರ ಜಯಂತಿ ಕಾರ್ಯಕ್ರಮದ ಉದ್ಘಾಟಿಸಿ ಅವರು ಮಾತನಾಡಿದರು. ಹಾಲುಮತ ಸಮಾಜದವರು ಹಾಲಿನಂತೆ ಶುಭ್ರತೆವುಳ್ಳ, ಮೃದು ಸ್ವಭಾವ ಹಾಗೂ ಕನಕ ದಾಸರರಂತೆ ಪವಿತ್ರ ಮನಸ್ಸು ಹೊಂದಿದವರು. ಅದೇರೀತಿಯಾಗಿ ಸಂಗೊಳ್ಳಿ ರಾಯಣ್ಣನವರ ಧೈರ್ಯ, ಶೌರ್ಯ ಪ್ರತಿಯೊಬ್ಬರಿಗೂ ಮಾದರಿಯಾಗಿದೆ. ನಗರದಲ್ಲಿ ರಾಯಣ್ಣನವರ ಪುತ್ಥಳಿ ಕೆಲವೇ ದಿನಗಳಲ್ಲಿ ಅನಾವರಣಗೊಳ್ಳಲಿದೆ. ನಗರದಲ್ಲಿ ರಸ್ತೆ, ಕುಡಿಯುವ ನೀರು ಸೇರಿದಂತೆ ಹಲವಾರು ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಬಳ್ಳಾರಿ ನಗರ ಅಭಿವೃದ್ಧಿಯತ್ತ ಸಾಗಲಿದೆ ಎಂದರು.

ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರು ಮಾತನಾಡಿ ಕನಕದಾಸರು ಭಕ್ತಶ್ರೇಷ್ಠರು ಸಾಮಾಜಿಕ ಚಿಂತನೆಗೆ ಒಳ್ಳೆಯ ಸಂದೇಶ ಮೌಲ್ಯಗಳನ್ನು ನೀಡಿದವರು. ಕುಲ, ಗೋತ್ರ, ಜಾತಿ ಧರ್ಮ ಎನ್ನದೇ ಸಮಾನತೆಯನ್ನು ಸಾರಿದವರು. ಯುವಕರು ದಾಸರ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಕುರುಬ ಸಂಘದ ಅಧ್ಯಕ್ಷ ಪಿ.ಎಲ್ ಗಾದಿಲಿಂಗನ ಗೌಡ ಮಾತನಾಡಿ ಇಂದು ಕನಕದಾಸರ 538 ನೇ ಜಯಂತಿ. ಕನಕದಾಸರು ವ್ಯಕ್ತಿಯಲ್ಲ ಶೋಷಿತರ ದೊಡ್ಡ ಧ್ವನಿಯಾಗುವ ಮೂಲಕ ಮೂಢನಂಬಿಕೆ ವಿರುದ್ಧ ಹೋರಾಡಿ ಸಮಾನತೆಯನ್ನು ಸಾರಿದವರು. 16 ನೇ ಶತಮಾನದಲ್ಲಿ ಅವರ ಕೀರ್ತನೆಗಳಿಂದ ಸಮಾಜ ಸುಧಾರಣೆಯನ್ನು ಮಾಡಿದವರು ಎಂದು ಹೇಳಿದರು.

ವೀರಶೈವಪದವಿಮಹಾವಿದ್ಯಾಲಯದ ಸಹಾಯಕಪ್ರಾಧ್ಯಾಪಕಿ ಡಾ.ನೀಲಮ್ಮ.ಕೆ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ದಾಸಶ್ರೇಷ್ಠ ಕನಕದಾಸ ಎಂದೂ ಕರೆಯಲ್ಪಡುವ ಇವರು, ಭಾರತದ ಕರ್ನಾಟಕದ ಹರಿದಾಸ ಸಂತ ಮತ್ತು ದ್ವೈತ ವೇದಾಂತದ ತತ್ವಜ್ಞಾನಿಯಾಗಿದ್ದರು ಎಂದು ತಿಳಿಸಿದರು.

ಕನಕದಾಸರು ಕ್ರಿ.ಶ. 1509 ರಲ್ಲಿ ಹಾವೇರಿ ಜಿಲ್ಲೆಯ ಶಿಗ್ಗಾಂವಿ ತಾಲೂಕಿನ ಬಾಡ ಗ್ರಾಮದಲ್ಲಿ ಬೀರಪ್ಪ ಮತ್ತು ಬಚ್ಚಮ್ಮ ದಂಪತಿಗಳ ಮಗನಾಗಿ ಜನಿಸಿದರು. ಹರಿದಾಸ ಸಂತ, ದಾರ್ಶನಿಕ ಮತ್ತು ಕವಿಯಾದ ಕನಕದಾಸ ಮೂಲ ಹೆಸರು ತಿಮ್ಮಪ್ಪ ನಾಯಕ. ಇವರು ಯುದ್ಧದಲ್ಲಿ ಗಾಯಗೊಂಡ ನಂತರ ಸೈನಿಕ ವೃತ್ತಿಯನ್ನು ತ್ಯಜಿಸಿ ಶ್ರೀಕೃಷ್ಣನ ಭಕ್ತರಾದರು. ನಂತರ 'ಕನಕದಾಸರು' ಎಂಬ ಹೆಸರನ್ನು ಪಡೆದು, ತಮ್ಮ ಕೀರ್ತನೆಗಳ ಮೂಲಕ ಸಿರಿ ಮತ್ತು ಸಂಪತ್ತು ಶ್ರೇಷ್ಠವಲ್ಲ ಎಂದು ಒತ್ತಿ ಹೇಳಿದರು ಎಂದರು.

ಇದೇ ವೇಳೆ ಗಣ್ಯರು ಭಕ್ತ ಕನಕದಾಸರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಭಕ್ತ ಕನಕದಾಸರ ಜಯಂತಿ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಕವಿತಾ ಗಂಗೂರು ತಂಡದ ದಾಸರ ಪದಗಳು ಕೇಳುಗರಿಗೆ ಇಂಪು ನೀಡಿತು. ಈ ವೇಳೆ ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯಕಾರ್ಯನಿರ್ವಾಹಕಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಮಹಾನಗರ ಪಾಲಿಕೆಯ ಆಯುಕ್ತ ಮಂಜುನಾಥ ಪಿ.ಎಸ್., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕನಿರ್ದೇಶಕ ಬಿ.ನಾಗರಾಜ, ಹಿಂದುಳಿದವರ್ಗಗಳ ಕಲ್ಯಾಣಾಧಿಕಾರಿ ಜಲಾಲಪ್ಪ, ಡಿಡಿಪಿಐ ಉಮಾದೇವಿ ಸೇರಿದಂತೆ ಮಹಾನಗರ ಪಾಲಿಕೆಯ ಸದಸ್ಯರು, ಸಮಾಜದ ಮುಖಂಡರು, ಸಾರ್ವಜನಿಕರು ಹಾಗು ಇತರರು ಉಪಸ್ಥಿತರಿದ್ದರು.

### ನ.26, 27 ರಂದು ಜಿಲ್ಲಾಮಟ್ಟದ ಕಲಾ ಪ್ರತಿಭೋತ್ಸವ ಕಾರ್ಯಕ್ರಮ

# ಬಾಲ ಪ್ರತಿಭೆ, ಕಿಶೋರ ಪ್ರತಿಭೆ, ಯುವ ಪ್ರತಿಭೆ ಹಾಗೂ ಸಮೂಹ ನಾಟಕ ಸ್ಪರ್ಧೆಗಳು

ಬಳ್ಳಾರಿ,ನ.08(ಕರ್ನಾಟಕ ವಾರ್ತೆ):

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ರಾಜ್ಯದ ಮಕ್ಕಳ, ಯುವಕರ ಕಲಾ ಪ್ರತಿಭೆಯನ್ನು ಗುರುತಿಸಿ ಅವರಿಗೆ ಪ್ರೋತ್ಸಾಹ ನೀಡುವ ಹಾಗೂ ಅವರಲ್ಲಿನ ಕಲಾ ಪ್ರತಿಭೆಯನ್ನು ವೃದ್ಧಿಗೊಳಿಸುವ ಉದ್ದೇಶದಿಂದ 2025-26ನೇ ಸಾಲಿನಲ್ಲಿ ಜಿಲ್ಲಾ, ವಲಯ ಹಾಗೂ ರಾಜ್ಯ ಮಟ್ಟದಲ್ಲಿ ಬಾಲ ಪ್ರತಿಭೆ, ಕಿಶೋರ ಪ್ರತಿಭೆ, ಯುವ ಪ್ರತಿಭೆ ಹಾಗೂ ಸಮೂಹ ನಾಟಕ ಸ್ಪರ್ಧೆಗಳನ್ನು ಏರ್ಪಡಿಸಿದೆ.

ಜಿಲ್ಲಾ ಮಟ್ಟದ ಪ್ರತಿ ವಿಭಾಗಗಳಲ್ಲಿ ಪ್ರತಿ ಪ್ರಕಾರಗಳಲ್ಲಿ ನಡೆಸುವ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನಗಳಿಸಿದವರನ್ನು ವಲಯ ಮಟ್ಟಕ್ಕೆ ಕಳುಹಿಸಲಾಗುವುದು. ವಲಯ ಮಟ್ಟದಲ್ಲಿ ಪ್ರಥಮ, ದ್ವಿತೀಯ ಸ್ಥಾನಗಳಿಸಿದವರನ್ನು ರಾಜ್ಯ ಮಟ್ಟಕ್ಕೆ ಕಳುಹಿಸಿಕೊಡಲಾಗುವುದು.

*ವಿವಿಧ ಸ್ಪರ್ಧೆಗಳು:*

ನ.26 ರಂದು ಬೆಳಿಗ್ಗೆ 10 ಗಂಟೆಗೆ ಬಾಲ ಮತ್ತು ಕಿಶೋರ ಪ್ರತಿಭೆಗಳಿಗೆ ವಿವಿಧ ಸ್ಥಳಗಳಲ್ಲಿ ಸ್ಪರ್ಧೆ ನಡೆಯಲಿದೆ.

ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಶಾಸ್ತ್ರೀಯ ನೃತ್ಯ(10 ನಿಮಿಷ), ಸುಗಮ ಸಂಗೀತ (7 ನಿಮಿಷ), ಜಾನಪದ ಗೀತೆಗಳು(7 ನಿಮಿಷ).

ನಗರದ ಸಾಂಸ್ಕೃತಿಕ ಸಮುಚ್ಛಯ ಆವರಣದ ನಾಡೋಜ ಸುಭದ್ರಮ್ಮ ಮನ್ಸೂರ್ ಬಯಲು ರಂಗಮಂದಿರದಲ್ಲಿ ಚಿತ್ರಕಲಾ ಸ್ಪರ್ಧೆ (ಸ್ವಕಲ್ಪಿತ)-120 ನಿಮಿಷ.

ನಗರದ ಸಾಂಸ್ಕೃತಿಕ ಸಮುಚ್ಛಯದ ಹೊಂಗಿರಣ ಸಭಾಂಗಣದಲ್ಲಿ ಹಿಂದೂಸ್ಥಾನಿ/ಕರ್ನಾಟಕ ಶಾಸ್ತ್ರೀಯ ವಾದ್ಯ(7 ನಿಮಿಷ), ಹಿಂದೂಸ್ಥಾನಿ/ಕರ್ನಾಟಕ ಶಾಸ್ತ್ರೀಯ ಸಂಗೀತ(7 ನಿಮಿಷ) ಸ್ಪರ್ಧೆಗಳು ನಡೆಯಲಿವೆ. ನ.27ರಂದು ಬೆಳಿಗ್ಗೆ 10 ಗಂಟೆಗೆ ಯುವಪ್ರತಿಭೆ ಮತ್ತು ಸಮೂಹ ಸ್ಪರ್ಧೆಗಳಿಗೆ ವಿವಿಧ ಸ್ಥಳಗಳಲ್ಲಿ ಸ್ಪರ್ಧೆ ನಡೆಯಲಿದೆ.

# ಇಂದು ಕನ್ನಡ ಸೇವಾ ರತ್ನ ಪ್ರಶಸ್ತಿ ಪ್ರದಾನ



ಬೀದರ:ಕನ್ನಡ ಸೇವಾ ರತ್ನ ಪ್ರಶಸ್ತಿಯನ್ನು ಬೀದರ ಶ್ರೀ ಕೇತಕಿ ಶೈಕ್ಷಣಿಕ ಸಾಮಾಜಿಕ ಮತ್ತು ಸಾಂಸ್ಕೃತಿಕ ಸಂಸ್ಥೆ (ರಿ) ಹಾಗೂ ಬೀದರ ಹಣ್ಮುಪಾಜಿ ಗೆಳೆಯರ ಬಳಗ ವತಿಯಿಂದ ಸಾಮಾಜಿಕ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಅರವಿಂದ ಜೋಗಿರೆ, ಶಿಕ್ಷಣ ಕ್ಷೇತ್ರದಲ್ಲಿ ಹುಡಗಿ ಗ್ರಾಮದ ಬಸವತೀರ್ಥ ವಿದ್ಯಾಪೀಠ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಸೇವೆ ಸಲ್ಲಿಸುತ್ತಿರುವ ಮೋಹನ್ ಸಿಂಗ್ ರಜಪೂತ್, ಸಮಾಜ ಸೇವೆ ಸಲ್ಲಿಸುತ್ತಿರುವ ಪ್ರಶಾಂತರೆಡ್ಡಿ ಜವಳಗಿ ಮನ್ನಾಎಖೇಳ್ಳಿ, ಶಿಕ್ಷಣ ಕ್ಷೇತ್ರದಲ್ಲಿ ಶ್ರೀಮತಿ ಬಾಯಿರೆಡ್ಡಿ ಬಿ.ನಿಂಗರೆಡ್ಡಿ ಇವರುಗಳನ್ನು ಕನ್ನಡ ರಾಜ್ಯೋತ್ಸವದ ನಿಮಿತ್ತ ಸಾಂಸ್ಕೃತಿಕ ಕಾರ್ಯಕ್ರಮಗಳು ಇಂದು 10-11-2025 ರಂದು ಬೆಳಿಗ್ಗೆ 11 ಗಂಟೆಗೆ ಬೀದರನ ಡಾ.ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ನಡೆಯಲಿದ್ದು, ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಸನ್ಮಾನಿಸಿ ಪ್ರಶಸ್ತಿ ಪ್ರದಾನವನ್ನು ಮಾಡಲಿದ್ದಾರೆ ಎಂದು ಬೀದರ ಹಣ್ಮುಪಾಜಿ ಗೆಳೆಯರ ಬಳಗದವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### "ಕಲಾ ಪ್ರತಿಭೋತ್ಸವ" ಕಾರ್ಯಕ್ರಮದ ಅಂಗವಾಗಿ

# ವಿವಿಧ ಸ್ಪರ್ಧೆಗಳ ಆಯೋಜನೆ: ಅರ್ಜಿ ಆಹ್ವಾನ

ಕಲಬುರಗಿ,ನ.08.(ಕರ್ನಾಟಕವಾರ್ತೆ)- ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಕ್ಕಳು ಮತ್ತು ಯುವಜನರಲ್ಲಿರುವ ಕಲಾ ಪ್ರತಿಭೆಯನ್ನು ಗುರುತಿಸಿ ಅವರಿಗೆ ಉತ್ತೇಜನ ನೀಡುವ ಮತ್ತು ಅವರು ತಮ್ಮ ಕಲಾ ನೈಪುಣ್ಯವನ್ನು ವೃದ್ಧಿಗೊಳಿಸುವಂತೆ ಪ್ರೋತ್ಸಾಹಿಸಲು ಕಲಾ ಪ್ರತಿಭೋತ್ಸವ-2025-26 ಕಾರ್ಯಕ್ರಮ (ಬಾಲಪ್ರತಿಭೆ, ಕಿಶೋರಪ್ರತಿಭೆ ಹಾಗೂ ಯುವಪ್ರತಿಭೆ ಸ್ಪರ್ಧೆ) ವನ್ನು ಹಮ್ಮಿಕೊಳ್ಳಲಾಗಿದ್ದು, ಇದಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಸ್ಪರ್ಧೆಗಳ ವಿವರ ಇಂತಿದೆ: ಬಾಲಪ್ರತಿಭೆ/ ಕಿಶೋರ ಪ್ರತಿಭೆ: ಏಕ ವ್ಯಕ್ತಿ ಸ್ಪರ್ಧೆಯ ಕಲಾ ಪ್ರಕಾರಗಳ ವಿವರ ಇಂತಿದೆ: ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಚಿತ್ರಕಲೆ, ಜಾನಪದ ಗೀತೆ, ಕರ್ನಾಟಕ/ಹಿಂದೂಸ್ತಾನಿ ವಾದ್ಯ ಸಂಗೀತ ಹಾಗೂ ಕರ್ನಾಟಕ/ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ. ಯುವ ಪ್ರತಿಭೆ ಸ್ಪರ್ಧೆಯ ಏಕವ್ಯಕ್ತಿಯ ಕಲಾ ಪ್ರಕಾರಗಳ ವಿವರ ಇಂತಿದೆ: ನನ್ನ ಮೆಚ್ಚಿನ ಸಾಹಿತಿ (ಆಶು ಭಾಷಣ), ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಕರ್ನಾಟಕ/ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಚಿತ್ರಕಲೆ, ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ. ಸಮೂಹ ಸ್ಪರ್ಧೆಗಳು: (ಯುವ ಪ್ರತಿಭೆ ವಿಭಾಗ): ನಾಟಕ.

ಬಾಲಪ್ರತಿಭೆ ಸ್ಪರ್ಧೆಗೆ ವಯೋಮಿತಿ 8 ರಿಂದ 14 ವರ್ಷದೊಳಗಿರಬೇಕು. ಕಿಶೋರ ಪ್ರತಿಭೆ ಸ್ಪರ್ಧೆಗೆ ವಯೋಮಿತಿ 14 ರಿಂದ 18 ವರ್ಷದೊಳಗಿರಬೇಕು. ಯುವಪ್ರತಿಭೆ ಸ್ಪರ್ಧೆಗೆ ವಯೋಮಿತಿ 18 ರಿಂದ 30 ವರ್ಷದೊಳಗಿರಬೇಕು. ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಿಗಳು ವಯಸ್ಸಿನ ದೃಢೀಕರಣಕ್ಕಾಗಿ ದಾಖಲೆಗಳನ್ನು ತಾವು ವ್ಯಾಸಂಗ ಮಾಡುತ್ತಿರುವ ವಿದ್ಯಾಸಂಸ್ಥೆಯಿಂದ ಪಡೆದು ಅರ್ಜಿಯ ಜೊತೆಗೆ ಲಗತ್ತಿಸಬೇಕು. ಜಿಲ್ಲಾಮಟ್ಟದ ಸ್ಪರ್ಧೆ ನಡೆಯುವ ದಿನಾಂಕವನ್ನು ನಂತರ ತಿಳಿಸಲಾಗುತ್ತದೆ. ಜಿಲ್ಲಾಮಟ್ಟದಲ್ಲಿ ಭಾಗವಹಿಸುವ ಎಲ್ಲಾ ಸ್ಪರ್ಧಿಗಳಿಗೂ ಪ್ರಮಾಣಪತ್ರ ನೀಡಲಾಗುತ್ತದೆ

ಜಿಲ್ಲಾಮಟ್ಟದಲ್ಲಿ ಪ್ರಥಮ, ದ್ವಿತೀಯ ಸ್ಥಾನ ಪಡೆದವರನ್ನು ವಲಯ ಮಟ್ಟಕ್ಕೆ ಕಳುಹಿಸಿಕೊಡಲಾಗುತ್ತದೆ. ವಲಯ ಮಟ್ಟದಿಂದ ರಾಜ್ಯ ಮಟ್ಟಕ್ಕೆ ಆಯ್ಕೆ ಮಾಡಲಾಗುತ್ತದೆ. (ಜಿಲ್ಲಾ ಮತ್ತು ವಲಯ ಮಟ್ಟದಲ್ಲಿ ಯಾವುದೇ ನಗದು ಪುರಸ್ಕಾರ ಇರುವುದಿಲ್ಲ, ವಲಯ ಮತ್ತು ರಾಜ್ಯಮಟ್ಟದಲ್ಲಿ ಭಾಗವಹಿಸುವವರಿಗೆ ಪ್ರಯಾಣ ವೆಚ್ಚವನ್ನು ನೀಡಲಾಗುತ್ತದೆ).

ನಿಗದಿತ ಅರ್ಜಿ ನಮೂನೆ ಇರುವುದಿಲ್ಲ. ಮೇಲ್ಕಂಡ ಸ್ಪರ್ಧೆಗಳಲ್ಲಿ ಭಾಗವಹಿಸುವವರು ಬಿಳಿ ಹಾಳೆಯಲ್ಲಿ ಸ್ವ-ವಿವರಗಳನ್ನು ಭರ್ತಿ ಮಾಡಿ 2025ರ ನವೆಂಬರ್ 20ರ ಸಂಜೆ 5 ಗಂಟೆಯೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಡಾ.ಸಿದ್ದಯ್ಯ ಪುರಾಣಿಕ ಸುವರ್ಣ ಸಾಂಸ್ಕೃತಿಕ ಸಮುಚ್ಛಯ, ಸೇಡಂ-ಶಹಾಬಾದ ವರ್ತುಲ ರಸ್ತೆ, ಕಲಬುರಗಿ ವಿಳಾಸಕ್ಕೆ ಖುದ್ದಾಗಿ ಅಥವಾ ಅಂಚೆಯ ಮೂಲಕ ಕಳುಹಿಸಬೇಕು.

ವಿವಿಧ ಸ್ಪರ್ಧೆಗಳಿಗೆ ನಿಗದಿಪಡಿಸಿದ ಸಮಯ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕನಿರ್ದೇಶಕರ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472-227734ಗೆ ಸಂಪರ್ಕಿಸಲು ಕೋರಲಾಗಿದೆ.

# ರೈತರ ಬೇಡಿಕೆಗೆ ಸರ್ಕಾರ ಸ್ಪಂದನೆ



ಬೀದರ್: ಕಬ್ಬಿಗೆ ಯೋಗ್ಯ ಬೆಲೆ ನಿಗದಿ ಹಾಗೂ ಅತಿವೃಷ್ಟಿ ಸಂತ್ರಸ್ತರಿಗೆ ಸಕಾಲಕ್ಕೆ ಪರಿಹಾರ ಕಲ್ಪಿಸುವ ಮೂಲಕ ರಾಜ್ಯ ಸರ್ಕಾರ ರೈತರ ಬೇಡಿಕೆಗೆ ಸ್ಪಂದಿಸಿದೆ ಎಂದು ಜಿಲ್ಲೆಯವರೇ ಆದ ಕಾಂಗ್ರೆಸ್ ಕಿಸಾನ್ ವಿಭಾಗದ ರಾಷ್ಟ್ರೀಯ ಸಂಯೋಜಕ ಪ್ರಕಾಶ ಘಾಳೆ ಹೇಳಿದ್ದಾರೆ.ಪ್ರತಿ ಟನ್ ಕಬ್ಬಿಗೆ ಸರ್ಕಾರದ ರೂ. 50 ಪ್ರೋತ್ಸಾಹ ಧನ ಹಾಗೂ ಕಾರ್ಖಾನೆಯ ಹೆಚ್ಚುವರಿ ರೂ. 50 ಸೇರಿದಂತೆ ಸರ್ಕಾರ ರೂ. 3,400 ಬೆಲೆ ನಿಗದಿಪಡಿಸಿದೆ ಎಂದು ತಿಳಿಸಿದ್ದಾರೆ.ನೆರೆಯ ರಾಜ್ಯ ಮಹಾರಾಷ್ಟ್ರಕ್ಕೆ ಹೋಲಿಸಿದರೆ ಈ ಬೆಲೆ ಪ್ರತಿ ಟ[illegible]ಗೆ ರೂ. 400 ರಿಂದ ರೂ. 600 ಅಧಿಕವಾಗಿದೆ. ಕಾಂಗ್ರೆಸ್ ರೈತರ ಹಿತ ರಕ್ಷಣೆ ಮಾಡುತ್ತಿದ್ದರೆ, ಬಿಜೆಪಿ ಅಧಿಕಾರದಲ್ಲಿ ಇರುವ ರಾಜ್ಯಗಳಲ್ಲಿ ರೈತರ ಮೇಲೆ ಅನ್ಯಾಯ ಆಗುತ್ತಲೇ ಇದೆ ಎಂದು ದೂರಿದ್ದಾರೆ.

ಕಬ್ಬು ಬೆಲೆ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನುಡಿದಂತೆ ನಡೆದುಕೊಂಡಿದ್ದಾರೆ. ರೈತ ಪರ ಕಾಳಜಿ ತೋರಿದ್ದಾರೆ ಎಂದು ಪ್ರತಿಕ್ರಿಯಿಸಿದ್ದಾರೆ.ಅತಿವೃಷ್ಟಿಯಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿರುವ ಬೀದರ್ ಜಿಲ್ಲೆಯ ರೈತರ ನೆರವಿಗೂ ರಾಜ್ಯ ಸರ್ಕಾರ ಸರಿಯಾದ ಸಮಯಕ್ಕೆ ಧಾವಿಸಿದೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ವಿಶೇಷ ಮುತುವರ್ಜಿ ವಹಿಸಿ ಬೆಳೆ ಹಾನಿಗೊಳಗಾದ ರೈತರು, ಮನೆ ಕಳೆದುಕೊಂಡ ಸಂತ್ರಸ್ತರ ಖಾತೆಗೆ ಶೀಘ್ರದಲ್ಲೇ ರೂ. 300 ಕೋಟಿ ಪರಿಹಾರ ಜಮೆ ಮಾಡಿಸಿದ್ದಾರೆ. ಜನ ಪರ ಕಾರ್ಯದಿಂದ ಜಿಲ್ಲೆಯ ಜನರ ಮೆಚ್ಚುಗೆಗೆ ಪಾತ್ರವಾಗಿದ್ದಾರೆ ಎಂದು ತಿಳಿಸಿದ್ದಾರೆ.ರೈತರ ಬೇಡಿಕೆ ಹಾಗೂ ಸಂಕಷ್ಟಕ್ಕೆ ಸ್ಪಂದಿಸಿದ್ದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದ್ದಾರೆ.

### ವೀರಶೈವ ಧರ್ಮದ ತತ್ವ ತ್ರಯಗಳ ಪರಿಪಾಲನೆಯಿಂದ

# ಸುಖ ಶಾಂತಿ ಪ್ರಾಪ್ತಿ: ಜಗದ್ಗುರುಗಳು



ಮಲ್ಲಮ್ಮ ನುಡಿ ವಾರ್ತೆ
ಹರಿಹರ-ನವಂಬರ್-8.

ಭಾರತೀಯ ಆಧ್ಯಾತ್ಮ ಸಂಪತ್ತು ಅದ್ಭುತ. ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಆಧ್ಯಾತ್ಮದ ಅರಿವು ಸಾಧನೆ ಮುಖ್ಯ. ವೀರಶೈವ ಧರ್ಮದ ತತ್ವತ್ರಯಗಳ ಪರಿಪಾಲನೆಯಿಂದ ಸುಖ ಶಾಂತಿ ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ನಗರದ ಸಿದ್ಧೇಶ್ವರ ಪ್ಯಾಲೇಸ್ ಕಲ್ಯಾಣ ಮಂಟಪದಲ್ಲಿ ಶ್ರೀ ಮಹಾತಪಸ್ವಿ ಫೌಂಡೇಶನ್(ರಿ) ಸಂಯೋಜಿಸಿದ ಪರಮ ತಪಸ್ವಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ ತಪಸ್ಸು ಸಾಧನೆಯ ಶತಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಪರಿಪಕ್ವ ಸಮಾಜ ನಿರ್ಮಾಣ ಕಾರ್ಯವೇ ನಿಜವಾದ ಧರ್ಮವೆಂದರಿತು ಬದುಕಿನ ಹಿರಿಮೆ ಮತ್ತು ರಹಸ್ಯ ಬೋಧಿಸಿ ಸನ್ಮಾರ್ಗಕ್ಕೆ ಕರೆತಂದ ಯುಗಪುರುಷರು ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳವರು. ಅಂತರಂಗ ಬಹಿರಂಗ ಶುದ್ಧಿಯಿಂದ ಬದುಕಿಗೆ ಶ್ರೇಯಸ್ಸು ದೊರಕುವುದೆಂದು ನಿರಂತರ ಶ್ರಮಿಸಿದರು. ಶಿವಾಗಮಗಳ ಧರ್ಮ ಸಾಹಿತ್ಯವನ್ನು ಜನರ ಮನೆ ಮನಗಳಿಗೆ ತಲುಪಿಸಲು ಗಟ್ಟಿ ಹೆಜ್ಜೆಯನ್ನಿಟ್ಟವರು. ಜೀವನದ ಜಂಜಡಗಳಲ್ಲಿ ಸಿಲುಕಿರುವ ಮನುಷ್ಯನಿಗೆ ಆದರ್ಶ ಸಂಸ್ಕಾರ ಮತ್ತು ಸದ್ವಿಚಾರ ಬೋಧಿಸಿ ಅವರಲ್ಲಿ ಸ್ಫೂರ್ತಿ ಮತ್ತು ಚೈತನ್ಯ ಶಕ್ತಿಯನ್ನು ಹೆಚ್ಚಿಸಿದ ಪರಮ ವಿರಾಗಿ ತಪಸ್ವಿಗಳು. ಮನುಷ್ಯನಲ್ಲಿ ದೈವೀ ಗುಣ ಅಸುರೀ ಗುಣ ಎರಡು ಇವೆ. ಸಂಸಾರ ಸಾಗರದಿಂದ ಪಾರು ಮಾಡಿ ಸುಖ ಸಾಗರದತ್ತ ಕರೆದುಕೊಂಡು ಹೋಗುವ ಗುಣಗಳು ದೈವೀ ಗುಣಗಳು. ದು:ಖದ ಕಡಲಿನಲ್ಲಿ ಮುಳುಗಿಸಿ ಬಿಡುವ ಗುಣಗಳು ಅಸುರೀ ಗುಣಗಳಾಗಿವೆ.

ಸಮಾರಂಭ ಉದ್ಘಾಟಿಸಿದ ಶಾಸಕ ಬಿ.ಪಿ.ಹರೀಶ ಮಾತನಾಡಿ ಮನುಷ್ಯನು ಮಾನವತೆಯಿಂದ ದೈವತ್ವಕ್ಕೆ ಏರುವುದು ಅಷ್ಟು ಸುಲಭವಲ್ಲ. ಇದಕ್ಕೆಲ್ಲ ಶ್ರಮ ಪ್ರಯತ್ನ ಇರಬೇಕಾಗುತ್ತದೆ. ಆಧ್ಯಾತ್ಮ ಲೋಕದಲ್ಲಿ ಅನೇಕ ಆಧ್ಯಾತ್ಮಿಕ ವಿಭೂತಿ ಪುರುಷರನ್ನು ಇತಿಹಾಸದಲ್ಲಿ ಕಾಣುತ್ತೇವೆ.

ಶ್ರೀ ರಂಭಾಪುರಿ ಜಗದ್ಗುರುಗಳು ಪ್ರದಾನ ಮಾಡಿ ಶುಭ ಹಾರೈಸಿದರು. ಹಲವಾರು ಗಣ್ಯರು ಮತ್ತು ದಾನಿಗಳು ಪಾಲ್ಗೊಂಡ ಈ ಸಮಾರಂಭದ ಅಧ್ಯಕ್ಷತೆಯನ್ನು ಮಹಾತಪಸ್ವಿ ಫೌಂಡೇಶನ್ ಉಪಾಧ್ಯಕ್ಷರಾದ ಪ್ರೊ.ಸಿ.ವಿ.ಪಾಟೀಲ ವಹಿಸಿದ್ದರು. ಡಾ॥ಹಾ.ಮಾ.ನಾಗಾರ್ಜುನ ಪ್ರಾಸ್ತಾವಿಕ ನುಡಿ ಸಲ್ಲಿಸಿದರು. ಮಹಾತಪಸ್ವಿ ಗುರುಕುಲ ಸಾಧಕರಿಂದ ವೇದಘೋಷ, ಕುಮಾರಿ ಸೃಷ್ಠಿ ಶೆಲ್ಲಿಕೇರಿ ಮತ್ತು ಪರಮೇಶ್ವರ ಕತ್ತಿಗೆ ಸಂಗಡಿಗರಿಂದ ಭಕ್ತಿಗೀತೆ ಜರುಗಿತು. ಹುಬ್ಬಳ್ಳಿಯ ಕುಮಾರಿ ಆರಾಧನಾ ತಿರ್ಲಾಪುರ ಅವರಿಂದ ಭರತ ನಾಟ್ಯ ಜರುಗಿತು.

# ರಾಷ್ಟ್ರೀಯ ಪರ್ಪಲ್ ಫೆಸ್ಟ್ ರಾಯಭಾರಿಯನ್ನಾಗಿ ಆಯ್ಕೆ ಮಾಡಲು ಅರ್ಜಿ ಆಹ್ವಾನ

ಕಲಬುರಗಿ,ನ.08. (ಕರ್ನಾಟಕ ವಾರ್ತೆ)-ಕಲಬುರಗಿ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದಿರುವ ಮತ್ತು ಶ್ರಮಿಸುತ್ತಿರುವ ವಿಕಲಚೇತನ ವ್ಯಕ್ತಿಗಳನ್ನು ರಾಷ್ಟ್ರೀಯ ಪರ್ಪಲ್ ಫೆಸ್ಟ್[illegible]ಕರ್ನಾಟಕ 2025ರ ಪರ್ಪಲ್ ಫೆಸ್ಟ್ ರಾಯಭಾರಿಗಳನ್ನಾಗಿ ಆಯ್ಕೆ ಮಾಡಲು ನಾಮನಿರ್ದೇಶನ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ವಿಕಲಚೇತನ ವ್ಯಕ್ತಿಗಳಿಗೆ ಸಮಾನ ಅವಕಾಶ ಕಲ್ಪಿಸುವುದರ ಮೂಲಕ ಅವರನ್ನು ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ತಮ್ಮ ಜಿಲ್ಲೆಯ ಹಲವಾರು ವಿಕಲಚೇತನ ವ್ಯಕ್ತಿಗಳು ಶ್ರಮಿಸುತ್ತಿರುತ್ತಾರೆ ಅಥವಾ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುತ್ತಾರೆ. ಇಂತಹ ವ್ಯಕ್ತಿಗಳನ್ನು ಈ ಕಾರ್ಯಕ್ರಮದ ರಾಯಭಾರಿಗಳನ್ನಾಗಿ ಆಯ್ಕೆ ಮಾಡಲು ಚಿಂತಿಸಲಾಗಿದೆ. ರಾಜ್ಯ ಆಯುಕ್ತಾಲಯವು ದಿನಾಂಕ:05.12.2025 ರಿಂದ 07.12.2025ರವರೆಗೆ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ರಾಷ್ಟ್ರಮಟ್ಟದ ಪರ್ಪಲ್ ಫೆಸ್ಟ್ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಜಿಲ್ಲೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದಿರುವ ವಿಕಲಚೇತನ ವ್ಯಕ್ತಿಗಳು ನಿಗದಿತ ಅರ್ಜಿ ನಮೂನೆಯನ್ನು ಕಲಬುರಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಚೇರಿಯಿಂದ ಪಡೆದು ಭರ್ತಿ ಮಾಡಿ 2025ರ ನವೆಂಬರ್ 14 ರೊಳಗಾಗಿ ಕಲಬುರಗಿ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ನಿಗದಿತ ಅರ್ಜಿ ನಮೂನೆ ಮತ್ತು ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472-235222ಗೆ ಸಂಪರ್ಕಿಸಲು ಕೋರಲಾಗಿದೆ.

# ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ
ಬಳ್ಳಾರಿ,ನ.07(ಕರ್ನಾಟಕ ವಾರ್ತೆ):

ಕರ್ನಾಟಕ ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿಗೆ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಅರ್ಹ ಕ್ರಿಶ್ಚಿಯನ್ ಸಮುದಾಯದಿಂದ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

*ವಿವಿಧ ಯೋಜನೆಗಳು:*

ಶ್ರಮಶಕ್ತಿ ಸಾಲದ ಯೋಜನೆ: ಈ ಯೋಜನೆಯಡಿ ರೂ.50 ಸಾವಿರಗಳೊಳಗೆ ಶೇ.4 ರಷ್ಟು ಬಡ್ಡಿ ದರದಲ್ಲಿ ಶೇ.50 ಸಾಲ ಹಾಗೂ ಶೇ.50 ಸಹಾಯಧನ ನೀಡಲಾಗುವುದು.

ಸ್ವಾವಲಂಬಿ ಸಾರಥಿ ಯೋಜನೆ: ಈ ಯೋಜನೆಯಡಿ ಟ್ಯಾಕ್ಸಿ, ಗೂಡ್ಸ್ ವಾಹನ, ಪ್ಯಾಸೆಂಜರ್ ಆಟೋರಿಕ್ಷಾ ಖರೀದಿಸಲು ಫಲಾನುಭವಿಗಳಿಗೆ ಬ್ಯಾಂಕ್, ಫೈನಾನ್ಸ್, ಸೊಸೈಟಿಯಿಂದ ಸಾಲ ಮಂಜೂರಾತಿಯಾಗಿದ್ದಲ್ಲಿ ನಿಗಮದಿಂದ ವಾಹನದ ಮೌಲ್ಯದ ಶೇ.50 ರಷ್ಟು ಸಹಾಯಧನ, ಗರಿಷ್ಠ ರೂ.03 ಲಕ್ಷ ನೀಡಲಾಗುವುದು.

ವಿದೇಶ ವ್ಯಾಸಂಗಕ್ಕೆ ಸಾಲ ಯೋಜನೆ: ಅಲ್ಪಸಂಖ್ಯಾತರ ವರ್ಗದ ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ವ್ಯಾಸಂಗ ಮಾಡಲು ಮಾನ್ಯತೆ ಪಡೆದಿರುವ ಯಾವುದೇ ವಿದೇಶ ವಿಶ್ವವಿದ್ಯಾಲಯದಿಂದ ಪದವಿ, ಸ್ನಾತ-ಕೋತ್ತರ ಪದವಿ, ವಿದ್ಯಾಭ್ಯಾಸ ಪಡೆಯಲು ರೂ.20 ಲಕ್ಷಗಳವರೆಗೆ ಸಾಲವನ್ನು ನಿಗಮಕ್ಕೆ ಆಸ್ತಿಯ (ಕಟ್ಟಡ/ಜಮೀನು) ಅಡಮಾನದ ಮೇಲೆ ಮಾತ್ರ ಒದಗಿಸಲಾಗುವುದು.

ವೃತ್ತಿ ಪ್ರೋತ್ಸಾಹ ಯೋಜನೆ: ಅಲ್ಪಸಂಖ್ಯಾತರ ಸಮುದಾಯದ ಜನರಿಗೆ, ಹಣ್ಣು, ಹಂಪಲು, ಕೋಳಿ ಮತ್ತು ಮೀನು ಮಾರಾಟ, ಎಳನೀರು, ಕಬ್ಬಿನ ಹಾಲು, ತಂಪು ಪಾನೀಯ ಮಾರಾಟ, ಬೇಕರಿ, ಲ್ಯಾಂಡರಿ, ಡ್ರೈ-ಕ್ಲೀನಿಂಗ್, ಆಟಿಕೆ ಗೊಂಬೆ ತಯಾರಿಕೆ ಇತ್ಯಾದಿ ಚಟುವಟಿಕೆಗಳನ್ನು ಪ್ರಾರಂಭಿಸಲು ಅಥವಾ ಅಭಿವೃದ್ಧಿ ಪಡಿಸಲು ನಿಗಮದಿಂದ ಶೇ.50ರಷ್ಟು ಸಹಾಯಧನದೊಂದಿಗೆ ರೂ.1 ಲಕ್ಷ ಸಾಲ ನೀಡಲಾಗುವುದು.

ಅಲ್ಪಸಂಖ್ಯಾತರ ಸಮುದಾಯದ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಸಹಾಯಧನ ಯೋಜನೆ: ಅಲ್ಪಸಂಖ್ಯಾತರ ಸಮುದಾಯದ ಸ್ವ-ಸಹಾಯ ಗುಂಪುಗಳಿಗೆ ವಿವಿಧ ರೀತಿಯ ಸ್ವಯಂ ಉದ್ಯೋಗ ಚಟುವಟಿಕೆಯಲ್ಲಿ ತೊಡಗಿಸಿ ಅವರನ್ನು ಆರ್ಥಿಕ ಸ್ವಾವಲಂಬಿಯನ್ನಾಗಿ ಮಾಡುವ ಸಲುವಾಗಿ ರಾಷ್ಟ್ರೀಕೃತ, ಶೆಡ್ಯೂಲ್ ಬ್ಯಾಂಕ್, ಆರ್‌ಬಿಐ ನಿಂದ ಮಾನ್ಯತೆ ಪಡೆದ ವಿವಿಧ ಆರ್ಥಿಕ ಸಂಸ್ಥೆಗಳಿಂದ ಪಡೆಯುವ ಸಾಲಕ್ಕೆ ಘಟಕ ವೆಚ್ಚದ ಶೇ.50 ಅಥವಾ ಗರಿಷ್ಠ ರೂ.2 ಲಕ್ಷ ಸಹಾಯಧನವನ್ನು ನಿಗಮದಿಂದ ಒದಗಿಸಲಾಗುವುದು. ಸಹಾಯಧನವು ಬ್ಯಾಕ್ ಎಂಡ್ ಸಬ್ಸಿಡಿಯಾಗಿದ್ದು, ಸ್ವ-ಸಹಾಯ ಸಂಘಗಳ ಆರ್ಥಿಕ ಬ್ಯಾಂಕ್ ಗಳಿಂದ ಪಡೆದ ಸಾಲದ ಮರುಪಾವತಿಗೆ ಹೊಂದಾಣಿಕೆ ಮಾಡಲಾಗುವುದು.

ಅರಿವು ಯೋಜನೆ: ಈ ಯೋಜನೆಯಡಿ ವೃತ್ತಿಪರ ಕೋರ್ಸ್ ಮಾಡಬಯಸುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವ್ಯಾಸಂಗ ಪೂರ್ಣಗೊಳಿಸುವವರೆಗೆ ಪ್ರತಿ ವರ್ಷ ರೂ.50 ಸಾವಿರದಿಂದ ರೂ.5 ಲಕ್ಷದವರೆಗೆ ಸಾಲ ವ್ಯಾಸಂಗ ಪೂರ್ಣಗೊಳಿಸಿದ 6 ತಿಂಗಳ ನಂತರ ಶೇ.2ರ ಸೇವಾ ಶುಲ್ಕದೊಂದಿಗೆ ಸಾಲ ಮರುಪಾವತಿ ಮಾಡಲು ಅವಕಾಶ.

ವ್ಯಾಪಾರ/ಉದ್ದಿಮೆ ನೇರಸಾಲ ಯೋಜನೆ: ಅಲ್ಪಸಂಖ್ಯಾತ ವರ್ಗದ ಜನರಿಗೆ ವ್ಯಾಪಾರ, ಉದ್ದಿಮೆ ಪ್ರಾರಂಭಿಸಲು ಅಥವಾ ಅಭಿವೃದ್ಧಿಪಡಿಸಿಕೊಳ್ಳುವ ಸಲುವಾಗಿ ಸಾಲ ನೀಡುವ ಉದ್ದೇಶದಿಂದ ಈ ಯೋಜನೆ ಜಾರಿಗೆ ತರಲಾಗಿದ್ದು, ಈ ಯೋಜನೆಯಡಿ ವ್ಯಾಪಾರ, ಆರ್ಥಿಕ, ಸೇವಾಕ್ಷೇತ್ರ, ಕೃಷಿ ಆಧಾರಿತ ಚಟುವಟಿಕೆ ಕೈಗೊಳ್ಳಲು ರೂ.5 ಲಕ್ಷದಿಂದ ರೂ.20 ಲಕ್ಷಗಳವರೆಗೆ ಸಾಲ ಸೌಲಭ್ಯ ನೀಡಲಾಗುವುದು. ಗಂಗಾಕಲ್ಯಾಣ ಯೋಜನೆ: ಗ್ರಾಮೀಣ ಪ್ರದೇಶದಲ್ಲಿ ವಾಸಿಸುತ್ತಿರುವ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ ಸಣ್ಣ ಹಾಗೂ ಅತೀ ಸಣ್ಣ ರೈತರಿಗೆ ಕೊಳವೆಬಾವಿ ಕೊರೆಯಲು, ಪಂಪು ಅಳವಡಿಕೆ ಹಾಗೂ ನೀರಾವರಿ ವಿದ್ಯುದ್ಧೀಕರಣಕ್ಕೆ ಸಂಪೂರ್ಣ ಸಹಾಯಧನ ಒದಗಿಸಲಾಗುವುದು.

ಶ್ರಮಶಕ್ತಿ (ವಿಶೇಷ ಮಹಿಳಾ) ಯೋಜನೆ: ಈ ಯೋಜನೆಯಡಿ ಸಮುದಾಯದ ವಿಧವೆ, ವಿಚ್ಛೇದಿತೆ, ಅವಿವಾಹಿತ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ವಿವಿಧ ಚಟುವಟಿಕೆಗಳನ್ನು ಕೈಗೊಳ್ಳಲು ರೂ.50 ಸಾವಿರಗಳೊಳಗೆ ಶೇ.4 ರ ಬಡ್ಡಿ ದರದಲ್ಲಿ ಶೇ.50 ಸಾಲ ಹಾಗೂ ಶೇ.50 ಸಹಾಯಧನ ನೀಡಲಾಗುವುದು. ತರಬೇತಿ ಯೋಜನೆ: ಸಮುದಾಯದ ನಿರುದ್ಯೋಗಿ ಯುವಕ-ಯುವತಿಯರಿಗೆ ಸ್ವ-ಉದ್ಯೋಗ/ ಕಚೇರಿ, ಕಂಪನಿ, ಉದ್ದಿಮೆಗಳಲ್ಲಿ ಉದ್ಯೋಗ ದೊರಕಿಸುವ ಸಲುವಾಗಿ ಭಾರಿ ವಾಹನ ಚಾಲನೆ, ಶಾರ್ಟ್ ಹ್ಯಾಂಡ್, ಸೆಕ್ಯುರಿಟಿ ಸರ್ವಿಸ್, ಬ್ಯೂಟಿ ಪಾರ್ಲರ್ (ಪುರುಷರಿಗೆ ಮತ್ತು ಮಹಿಳೆಯರಿಗೆ) ಕೋರ್ಸ್ಗಳಿಗೆ ನಿಗಮದ ವತಿಯಿಂದ ತರಬೇತಿ ನೀಡಲಾಗುವುದು. ಚರ್ಚ್ಗಳ ದುರಸ್ಥಿ/ನವೀಕರಣ/ ಜೀರ್ಣೋದ್ಧಾರ/ಮೇಲ್ದರ್ಜೆಗಾಗಿ ಸಹಾಯಧನ: 10 ವರ್ಷಗಳ ಮೇಲ್ಪಟ್ಟ ಚರ್ಚ್ಗಳ ದುರಸ್ಥಿ, ನವೀಕರಣ, ಜೀರ್ಣೋದ್ಧಾರ, ಮೇಲ್ದರ್ಜೆಗಾಗಿ ಕಾಮಗಾರಿಯ ಅಂದಾಜು ವೆಚ್ಚದ ಶೇ.50 ರಷ್ಟು ಅಥವಾ ಗರಿಷ್ಟ ರೂ.50 ಲಕ್ಷಗಳು ಯಾವುದು ಕಡಿಮೆಯೋ ಅಷ್ಟು ಅನುದಾನವನ್ನು ಒದಗಿಸಲು ಅವಕಾಶ ಕಲ್ಪಿಸಲಾಗಿದೆ. ಸ್ಮಶಾನಗಳಿಗೆ ಆವರಣ ಗೋಡೆ ನಿರ್ಮಾಣ ಮತ್ತು ಸ್ಮಶಾನಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಸಹಾಯಧನ: ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯಡಿ ಕ್ರಿಶ್ಚಿಯನ್ ಸಮುದಾಯದ ಸ್ಮಶಾನಗಳಿಗೆ ಆವರಣಗೋಡೆ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯಗಳ ಕಲ್ಪನೆಗಾಗಿ ಸಹಾಯಧನವನ್ನು ನೀಡಲಾಗುತ್ತದೆ. ಈ ಯೋಜನೆಯ ಉದ್ದೇಶವು ಸ್ಮಶಾನಗಳಿಗೆ ಸಮರ್ಪಕ ರಕ್ಷಣಾ ವ್ಯವಸ್ಥೆ, ನಿರ್ವಹಣೆ ಮತ್ತು ಮೂಲಸೌಕರ್ಯಗಳನ್ನು ಒದಗಿಸುವ ಮೂಲಕ ಸಮುದಾಯದ ದೀರ್ಘಕಾಲದ ಅಗತ್ಯಗಳನ್ನು ಪೂರೈಸುವುದಾಗಿದೆ.

*ಅರ್ಹತೆ:*

ಅರ್ಜಿದಾರರು ಜಿಲ್ಲೆಯ ಕನಿಷ್ಠ 15 ವರ್ಷದಿಂದ ಖಾಯಂ ನಿವಾಸಿಯಾಗಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ಆದಾಯ ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ರೂ.6,00,000 ಲಕ್ಷ ಮೀರಬಾರದು. ಕನಿಷ್ಠ 18 ವರ್ಷ ಮತ್ತು ಗರಿಷ್ಠ 55 ವರ್ಷಗಳ ವಯಸ್ಸು ಹೊಂದಿರಬೇಕು. ಮಹಿಳೆಯರಿಗೆ ಶೇ.33 ರಷ್ಟು ಮೀಸಲಾತಿ ಹಾಗೂ ಶೇ.03 ರಷ್ಟು ಅಂಗವಿಕಲರಿಗೆ ಮೀಸಲಾತಿ ಇದೆ.

ಅರ್ಜಿದಾರರು ಆನ್‌ಲೈನ್‌ನಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಐಎಫ್‌ಎಸ್‌ಸಿ ಕೋಡ್ ಇರುವ ಬ್ಯಾಂಕ್ ಖಾತೆ ಪುಸ್ತಕದ ಪ್ರತಿ, ಯೋಜನಾ ವರದಿ ಹಾಗೂ ಅರ್ಜಿದಾರರ ಹಾಗೂ ಜಾಮೀನುದಾರರ ಭಾವಚಿತ್ರಗಳು ಅಪ್ಲೋಡ್ ಮಾಡಬೇಕು.

ಈ ಹಿಂದೆ ನಿಗಮದ ಸೌಲಭ್ಯವನ್ನು ಪಡೆದವರು ಮತ್ತೆ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. ಅರ್ಜಿ ಸಲ್ಲಿಸಲು ಆನ್‌ಲೈನ್ ವೆಬ್‌ಸೈಟ್‌ಃಣಣಠಿ:// ಇಭಿಭಿಜಭಿಂಟಿಟುಟಿಜ.ಇಚಿಡಿಟಿಚಿಣಚಿಞಚಿ.ರಠಡಿ.ಟಿ/ ಗೆ ಭೇಟಿ ನೀಡಿ ಸಲ್ಲಿಸಬಹುದು. ನವೆಂಬರ್ 30 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಮೌಲಾನ ಆಜಾದ್ ಭವನದ ಕರ್ನಾಟಕ ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿ ನಿಗಮ (ನಿ) ದ ಜಿಲ್ಲಾ ವ್ಯವಸ್ಥಾಪಕರ ಕಚೇರಿ ಅಥವಾ ದೂ.08392-294370 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಗಲಕೋಟೆ ಜಿಲ್ಲಾ ಕಾನಿಪ ಸಂಘಕ್ಕೆ ಅವಿರೋಧ ಆಯ್ಕೆ ಮಹೇಶ ಅಂಗಡಿ ಅಧ್ಯಕ್ಷ, ಜಗದೀಶ ಪ್ರಧಾನ ಕಾರ್ಯದರ್ಶಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.9–ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬಾಗಲಕೋಟೆ ಜಿಲ್ಲಾ ಘಟಕದ 2025–2028ರ ಅವಧಿಯ ಪದಾಧಿಕಾರಿಗಳ ಆಯ್ಕೆಗೆ ನಡೆದ ಚುನಾವಣೆಯಲ್ಲಿ ಎಲ್ಲ 25 ಸ್ಥಾನಗಳಿಗೂ ಅವಿರೋಧ ಆಯ್ಕೆ ನಡೆದಿದೆ.

ಪದಾಧಿಕಾರಿಗಳ ಆಯ್ಕೆಗೆ ನ.9 ಚುನಾವಣೆ ನಡೆಯಬೇಕಿತ್ತಾದರೂ ಎಲ್ಲ 25 ಸ್ಥಾನಗಳಿಗೂ ಒಬ್ಬೊಬ್ಬರೇ ಕಣದಲ್ಲಿ ಉಳಿದಿದ್ದರಿಂದಾಗಿ ಅವಿರೋಧ ಆಯ್ಕೆಯನ್ನು ಘೋಷಿಸಲಾಗಿದೆ.

ಜಿಲ್ಲಾ ಅಧ್ಯಕ್ಷ ಸ್ಥಾನಕ್ಕೆ ಮಹೇಶ ಅಂಗಡಿ, ಉಪಾಧ್ಯಕ್ಷರ ಮೂರು ಸ್ಥಾನಗಳಿಗೆ ರವಿ ಹಳ್ಳೂರ, ಮಲ್ಲಿಕಾರ್ಜುನ ದರಗಾದ ಮತ್ತು ಸಂತೋಷ ಕಾಂಬಳೆ, ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ಜಗದೀಶ ಗಾಣಿಗೇರ, ಮೂರು ಕಾರ್ಯದರ್ಶಿ ಸ್ಥಾನಗಳಿಗೆ ವಿವೇಕಾನಂದ ಗರಸಂಗಿ, ಮಲ್ಲಿಕಾರ್ಜುನ ತುಂಗಳ ಹಾಗೂ ಹೆಚ್.ಎಸ್.ಮುದಕವಿ ಮತ್ತು ಖಜಾಂಚಿಯಾಗಿ ಸಂತೋಷ ದೇಶಪಾಂಡೆ ಆಯ್ಕೆಯಾಗಿದ್ದಾರೆ.

ರಾಜ್ಯ ಸಂಘದ ಕಾರ್ಯಕಾರಿ ಸಮಿತಿಯ ಒಂದು ಸ್ಥಾನಕ್ಕೆ ಈಶ್ವರ ಶೆಟ್ಟರ ಅವಿರೋಧವಾಗಿ ಆಯ್ಕೆಯಾಗಿದ್ದರೆ, ಜಿಲ್ಲಾ ಸಂಘದ ಕಾರ್ಯಕಾರಿ ಸಮಿತಿಯ ಸದಸ್ಯರುಗಳಾಗಿ ಚಂದ್ರಶೇಖರ ಮೋರೆ, ಎಂ.ಎನ್.ನದಾಫ, ಭೀಮು ಜಮಖಂಡಿ, ಗೋಪಾಲರಾವ್ ಪಾಟೀಲ, ಸಂಗಮೇಶ ಹೂಗಾರ, ಮಂಜುನಾಥ ತಳವಾರ, ಶ್ರೀನಿವಾಸ ಬಬಲಾದಿ, ಶಬ್ಬೀರಬಾಶಾ ಬಿಜಾಪೂರ, ತಿಪ್ಪಣ್ಣ ಚಲವಾದಿ, ಬಸವರಾಜ ಹವಾಲ್ದಾರ, ಅಶೋಕ ಶೆಟ್ಟರ, ಕೃಷ್ಣ ಹಾದಿಮನಿ, ಆನಂದ ಗಾವರವಾಡ, ಅಭಯ ಮನಗೂಳಿ ಹಾಗೂ ವಿರೇಶ ನಾಲತವಾಡ ಆಯ್ಕೆಯಾಗಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಕಾಶ ಬಾಳಕ್ಕನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಯ್ಕೆಯಾದ ಎಲ್ಲ ಪದಾಧಿಕಾರಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

# ಹುನಗುಂದ ತಾಲೂಕು–8,737 ಹೆಕ್ಟರ್ ಪ್ರದೇಶದ ಬೆಳೆ ಹಾನಿ 28 ಸಾವಿರ ರೈತರಿಗೆ ಪರಿಹಾರ–ತಹಸೀಲ್ದಾರ ಹಿರೇಮಠ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.9–ಮುಂಗಾರು ಹಂಗಾಮಿನ ಬಿತ್ತನೆಯ ಪೂರ್ವ ಮತ್ತು ನಂತರ ತಾಲೂಕಿನಾದ್ಯಂತ ಬಿಟ್ಟುಬಿಡದೇ ಸುರಿದ ಮಳೆಯಿಂದ ಜಿಲ್ಲೆಯ ಹುನಗುಂದ ತಾಲೂಕಿನಲ್ಲಿ 8,737 ಹೆಕ್ಟರ್ ಪ್ರದೇಶದಲ್ಲಿನ ವಿವಿಧ ಬೆಳೆಗಳು ಹಾನಿಗೊಳಗಾಗಿದ್ದು, ಅಂದಾಜು 28 ಸಾವಿರ ರೈತರಿಗೆ ಪರಿಹಾರ ದೊರೆಯಲಿದೆ. ಬೆಳೆ ಹಾನಿ ಸಮೀಕ್ಷೆ ಪೂರ್ಣಗೊಳಿಸಿ ಸರ್ಕಾರಕ್ಕೆ ವರದಿ ಕಳಿಸಲಾಗಿದೆ ಎಂದು ಹುನಗುಂದ ತಹಶೀಲ್ದಾರ ಪ್ರದೀಪಕುಮಾರ ಹಿರೇಮಠ ಹೇಳಿದರು.

ಸುದ್ದಿಗಾರರಿಗೆ ಬೆಳೆ ಹಾನಿ ಸಮೀಕ್ಷೆ ಕುರಿತು ಮಾಹಿತಿ ನೀಡಿದ ಅವರು, ಮುಂಗಾರು ಪೂರ್ವ ಮತ್ತು ಮುಂಗಾರು ಹಂಗಾಮಿನಲ್ಲಿ ಈ ಬಾರಿ ವಾಡಿಕೆ ಹಾಗೂ ನಿರೀಕ್ಷೆಗಿಂತಲೂ ಹೆಚ್ಚು ಮಳೆ ಸುರಿದು ಬಹುತೇಕ ಮುಂಗಾರು ಹಂಗಾಮಿನಲ್ಲಿ ಬೆಳೆಗಳು ಹೆಚ್ಚಿನ ಪ್ರಮಾಣದಲ್ಲಿ ಹಾನಿ ಸಂಭವಿಸಿದೆ. ಪ್ರಮುಖವಾಗಿ ಕೃಷಿ ಬೆಳೆಗಳು 4,266 ಹೆಕ್ಟರ್ ಹಾಗೂ ತೋಟಗಾರಿಕೆ ಬೆಳೆ 4,471 ಹೆಕ್ಟರ್ ಪ್ರದೇಶದಲ್ಲಿ ಹಾನಿಯಾಗಿದ್ದು, ಅವುಗಳಲ್ಲಿ ಹುನಗುಂದ ಹೋಬಳಿ ವ್ಯಾಪ್ತಿಯಲ್ಲಿ ಹೆಸರು ಮತ್ತು ಈರುಳ್ಳಿ ಬೆಳೆಗಳು ಶೇ 100ರಷ್ಟು ಹಾನಿಯಾಗಿದ್ದು, ಅದೇ ರೀತಿ ಅಮೀನಗಡ ಹೋಬಳಿ ವ್ಯಾಪ್ತಿಯಲ್ಲಿ ಮೆಕ್ಕೆಜೋಳ ಬೆಳೆ ಅಂದಾಜು ಶೇ 30 ರಿಂದ 40ರಷ್ಟು ಬೆಳೆ ನಷ್ಟ ಸಂಭವಿಸಿದೆ.ಮೆಣಸಿನಕಾಯಿ ಅಂ–ದಾಜು ಶೇ 40ರಷ್ಟು ನಷ್ಟವಾಗಿದೆ ಎಂದು ಹೇಳಿದರು.


ಈ ಬಾರಿ ತಾಲೂಕಿನಾದ್ಯಂತ ಹೆಚ್ಚಿನ ಕ್ಷೇತ್ರದಲ್ಲಿ ಬಿತ್ತನೆಯಾಗಿದ್ದ ತೊಗರಿ ಬೆಳೆಯು ಕಡಿಮೆ ಪ್ರಮಾಣದಲ್ಲಿ ಅಂದಾಜು ಶೇ.20ರಷ್ಟು ಬೆಳೆ ಹಾನಿಯಾಗಿದೆ. ಮುಂಗಾರು ಹಂಗಾಮಿನಲ್ಲಿ ಸತತ ಮಳೆಯಿಂದ ಹಾನಿಗೊಳಗಾದ ಬೆಳೆ ಹಾನಿಯ ಸಮೀಕ್ಷೆ ಕಾರ್ಯ ಬಹುತೇಕ ಪೂರ್ಣಗೊಂಡಿದ್ದು. ಉಳಿದುಕೊಂಡಿರುವ ರೈತರ ಬೆಳೆ ಹಾನಿ ಸಮೀಕ್ಷೆ ಕಾರ್ಯವನ್ನು ಶೀಘ್ರ ಪೂರ್ಣಗೊಳಿಸಲಾಗುತ್ತಿದೆ ಎಂದು ಪ್ರದೀಪಕುಮಾರ ಹಿರೇಮಠ ತಿಳಿಸಿದರು.

# ಬಿಜೆಪಿಯಿಂದ ಭಕ್ತ ಕನಕದಾಸ ಮೇದಾರ ಕೇತಯ್ಯ ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.9–ಕನ್ನಡ ಸಾಂಸ್ಕೃತಿಕ ಲೋಕದ ಮಹೋನ್ನತ ವ್ಯಕ್ತಿಗಳಲ್ಲಿ ಒಬ್ಬರಾದ ಕನದಾಸರು ತಮ್ಮ ಕೃತಿಗಳ ಮೂಲಕ ಕಟ್ಟಿಕೊಟ್ಟ ಜ್ಞಾನ ಎಲ್ಲ ಕಾಲಕ್ಕೂ ಪ್ರಸ್ತುತ. ಮೇದಾರ ಕೇತಯ್ಯ ಕಾಯಕಜೀವಿಯಾಗಿದ್ದರು ಎಂದು ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಹೇಳಿದರು. ನಗರದ ಶಿವಾನಂದ ಜೀನ್‌ನಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದಿಂದ ಹಮ್ಮಿಕೊಂಡ ಭಕ್ತ ಕನಕದಾಸರು ಹಾಗೂ ಮೇದಾರ ಕೇತಯ್ಯನವರ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪಾಂಜಲಿ ಸಲ್ಲಿಸಿ ಅವರು ಮಾತನಾಡಿದರು.

ಭಾರತದ ಭಕ್ತಿಸಾಹಿತ್ಯ ಪರಂಪರೆಯಲ್ಲಿ ಕನಕದಾಸರದು ಪ್ರಮುಖ ಸ್ಥಾನ, ಪುರಂದರದಾಸರಂತೆ ಕನಕದಾಸರೂ ಮಹಾಜ್ಞಾನಿಗಳು. ಅವರು ಬರೀ ಕವಿಯಷ್ಟೇ ಆಗಿರಲಿಲ್ಲ, ಸಮಾಜ ಸುಧಾರಕ, ದಾರ್ಶನಿಕ ಹಾಗೂ ಮಾನವತೆಯ ಸಾಕಾರವಾಗಿದ್ದರು, ಅವರ ಕೃತಿಗಳು ಭಕ್ತಿಯ ಪರಮೋನ್ನತ ಸ್ಥಿತಿಯನ್ನು ತೋರಿಸುವುದರ ಜೊತೆಗೆ ಅದರ ಸಾಮಾಜಿಕ ಸಮಾನತೆ, ಮಾನವೀಯ ಮೌಲ್ಯಗಳು ಮತ್ತು ದೈವಭಕ್ತಿಯ ಸಾರ್ಥಕತೆ–ಯ ಸಂದೇಶವನ್ನು ಸಾರಿದ್ದವು



ಎಂದ ಚರಂತಿಮಠ, ಮೇದಾರ ಕೇತಯ್ಯ ಶರಣರು ಬಸವಯುಗದ ಧೃವತಾರೆಯಾಗಿದ್ದರು, ಕಾಯಕವನ್ನು ಪ್ರಾಣಕ್ಕಿಂತ ಹೆಚ್ಚಾಗಿ ಪ್ರೀತಿಸಿದ ಕಾಯಕಜೀವಿಯಾಗಿದ್ದರು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವೆ, ಜಿಲ್ಲಾ ಉಪಾಧ್ಯಕ್ಷೆ ಭಾಗೀರತಿ ಪಾಟೀಲ, ಜ್ಯೋತಿ ಭಜಂತ್ರಿ, ಲಕ್ಷ್ಮೀನಾರಾಯಣ ಕಾಸಟ, ಡಾ.ಎಂ.ಎಸ್.ದಡ್ಡೆನ್ನವರ, ಗುಂಡುರಾವ ಶಿಂದೆ, ಶಿವಾನಂದ ಟವಳಿ, ಬಸವರಾಜ ಯಂಕಂಚಿ, ವೀರಣ್ಣ ಹಳೆಗೌಡರ, ಮೇದಾರ ಸಮಾಜದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಜೈನಾಪುರ, ಅಯ್ಯಪ್ಪ ಮೇದಾರ, ಚನ್ನಬಸು ಬುಡ್ಡರ, ಮಹಾದೇವ ಬುಡ್ಡರ, ಬೀಮಪ್ಪ ಬುಡ್ಡರ, ದ್ಯಾವಪ್ಪ ರಾಕುಂಪಿ, ಸರಸ್ವತಿ ಕುರಬರ, ಶಾಂತಾ ಹನಮಕ್ಕನವರ, ಜ್ಯೋತಿ ಭಜಂತ್ರಿ, ಶಶಿಕಲಾ ಮಜ್ಜಗಿ, ನಗರ ಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ ಸೇರಿದಂತೆ ಭಾಗವಹಿಸಿದ್ದರು.

# ಮಹಾತ್ಮರ ಸಂದೇಶಗಳು ಬದುಕಿಗೆ ದಾರಿದೀಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.9–ಕನಕದಾಸರಂತಹ ಹಲವು ಮಹಾತ್ಮರ ಬದುಕು–ಬರಹ, ಸಂದೇಶ ಹಾಗೂ ಸಾಧನೆ ಮನುಕುಲಕ್ಕೆ ದಾರಿದೀಪ. ಉತ್ತಮ ಜೀವನವನ್ನು ಕಟ್ಟಿಕೊಳ್ಳಲು ಸಹಕಾರಿ ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಐಕ್ಯೂಎಸಿ ಹಾಗೂ ಕನ್ನಡ ವಿಭಾಗ ಶನಿವಾರ ಆಯೋಜಿಸಿದ್ದ ಕನಕದಾಸರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದಾಸ ಸಾಹಿತ್ಯ ಮತ್ತು ಕರ್ನಾಟಕ ಸಂಗೀತ ಕ್ಷೇತ್ರಕ್ಕೆ ಕನಕದಾಸರ ಕೊಡುಗೆ ಅನನ್ಯ. ಅವರ ಕೀರ್ತನೆಗಳು ಎಲ್ಲ ಕಾಲಕ್ಕೂ ಪ್ರಸ್ತುತವಾಗಿವೆ. ತಮ್ಮ ಕೀರ್ತನೆಗಳ ಮೂಲಕ ಸಮಾಜದಲ್ಲಿ ಅರಿವನ್ನು ಮೂಡಿಸಿದರು. ಅವರು ರಚಿಸಿದ ಕೀರ್ತನೆಗಳ ಸಾರವನ್ನು ಅರಿತು, ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಉತ್ತಮ ಬದುಕನ್ನು ಸಾಗಿಸಬಹುದು ಎಂದು ನರಗುಂದ ಹೇಳಿದರು.

ಉಪನ್ಯಾಸಕಿ ಗೀತಾ ಕಿಲಬನೂರ, ಕನಕದಾಸರ ಕೀರ್ತನೆಗಳಲ್ಲಿನ ಮಾನವೀಯ ಮೌಲ್ಯ, ಸಾಮಾಜಿಕ ಕಳಕಳಿ, ಜಾತಿ ಪದ್ಧತಿ, ಸಾಮಾಜಿಕ ಮೌಢ್ಯ ಮುಂತಾದವುಗಳ ಕುರಿತು ಮಾತನಾಡಿದರು.

ವಿದ್ಯಾರ್ಥಿಗಳಾದ ಸಾರಿಯಾ ಜಲಗೇರಿ, ಪ್ರಶಾಂತ ಭಜಂತ್ರಿ, ನಿಂಗಪ್ಪ ಕೆಂಗರ, ಮಂಜುಳಾ ಗೌಡರ, ಸ್ನೇಹಾ ಅರಬಿ ಮತ್ತು ಉಪನ್ಯಾಸಕಿ ಕೀರ್ತಿದಾಸರ, ಕನಕದಾಸರ ಬದುಕು–ಬರಹ ಕುರಿತು ಮಾತನಾಡಿದರು ಹಾಗೂ ಅವರ ಪದಗಳನ್ನು ಹಾಡಿ ಕಾರ್ಯಕ್ರಮಕ್ಕೆ ಮೆರಗು ತಂದರು.

ಅಕ್ಷತಾ ಬೋಕಿ ಪ್ರಾರ್ಥಿಸಿದರು. ಮಂಜುಳಾ ಗೌಡರ ಸ್ವಾಗತಿಸಿದರು. ಗಾಯತ್ರಿ ಮಡಿವಾಳರ ನಿರೂಪಿಸಿದರು. ಪ್ರಧಾನ ಕಾರ್ಯದರ್ಶಿ ದಿಲ್‌ಶಾದ ನದಾಫ ವಂದಿಸಿದರು.

ಉಪನ್ಯಾಸಕ ಕೆ.ಜಿ.ಲವಾಣಿ, ಐಕ್ಯೂಎಸಿ ಸಂಯೋಜಕ ಪ್ರೊ.ಎಸ್.ಎಸ್.ಹಂಗರಗಿ, ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿ ಇದ್ದರು.

# ಕನಕದಾಸ ಜಯಂತಿ–'ಕನಕಸಿರಿ' ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.9–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜಿಲ್ಲಾಡಳಿತ ಭವನದಲ್ಲಿರುವ ಆಡಿಟೋ–ರಿಯಂ ಹಾಲ್‌ನಲ್ಲಿ ಶನಿವಾರ ಕನಕದಾಸರ ಜಯಂತಿ ಸರಳವಾಗಿ ಆಚರಿಸಲಾಯಿತು. ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಅನಿಲಕುಮಾರ ದಡ್ಡಿ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿ.ಪಂ ಮುಖ್ಯಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ ಸೇರಿದಂತೆ ಇತರರು ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪ ಅರ್ಪಿಸಿದರು. ಈ ವೇಳೆಯಲ್ಲಿ ಡಾ.ನೀಲಪ್ಪ ಮೈಲಾರಪ್ಪ ಅಂಬಲಿಯವರ ಅವರಿಗೆ 'ಕನಕಸಿರಿ' ಪ್ರಶಸ್ತಿ ಪ್ರದಾನ ಮಾಡಲಾಯಿತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ಜಿಲ್ಲಾ ಶಿಕ್ಷಣಾಧಿಕಾರಿ ಎಸ್.ಜಿ.ಮಿರ್ಜಿ, ಸಮುದಾಯದ ಮುಖಂಡರಾದ ಡಿ.ಬಿ.ಸಿದ್ದಾಪೂರ, ಎಚ್.ಬಿ.ಗೊರವರ, ಮಳಿಯಪ್ಪ ಗುಳಬಾಳ, ಧರ್ಮಣ್ಣ ಸುನಗದ, ಸೋಮು ಕೈರವಾಡಗಿ, ಆತ್ಮಾನಂದ ಜಾಲಿಹಾಳ, ಸಿದ್ದು ಪೂಜಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕನಕದಾಸರು ಸಮಾನತೆಯ ಹರಿಕಾರರು: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಿ):ಕನಕದಾಸರು ಜಾತಿ ವ್ಯವಸ್ಥೆ, ಸಾಮಾಜಿಕ ತಾರತಮ್ಯ, ಮೂಢನಂಬಿಕೆಯಂತಹ ಸಾಮಾಜಿಕ ಪಿಡುಗುಗಳ ಬಗ್ಗೆ ಜನಸಾಮಾನ್ಯರಿಗೆ ಅರ್ಥವಾಗುವ ರೀತಿಯಲ್ಲಿ ಜಾಗೃತಿ ಮೂಡಿಸಿ ಸಾಮಾಜಿಕ ಕ್ರಾಂತಿ ಮಾಡಿದ ಸಮಾನತೆಯ ಹರಿಹಾಕರರು ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಘಮಸುಬಾಯಿ ತಾಂಡಾ ಬೋಂತಿಯ ಗೃಹ ಕಚೇರಿಯಲ್ಲಿ ನ.8ರಂದು ಭಕ್ತ ಕನಕದಾಸರ ಭಾವಚಿತ್ರಕ್ಕೆ ಪೂಜೆ, ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಕನಕ ಎಂಬುದು ಅಗಾಧಶಕ್ತಿ, ಅದಮ್ಯ ಚೇತನ. ಅವರು ಭಗವಂತನಿಗೆ ಹತ್ತಿರವಾಗಿದ್ದವರು. ಭಕ್ತಿಯ ಶಕ್ತಿಯನ್ನು ತೋರಿಸಿಕೊಟ್ಟವರು. ಸಮಾಜದ ಹಲವು ದೋಷ ಲೋಪಗಳನ್ನು ನಿವಾರಿಸಿ ಮಾನವೀಯತೆಯ ದಾರಿ ತೋರಿಸಿದ ಮಹಾನ್ ದಾರ್ಶನಿಕರು.

ಅವರನ್ನು ಒಂದು ಜಾತಿಗೆ ಸೀಮಿತವಾಗಿಸದೇ ಅವರ ತತ್ವಾದರ್ಶಗಳನ್ನು ಎಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು. ಮೋಹನತರಂಗಿಣಿ, ನಳಚರಿತ್ರೆ, ಹರಿಭಕ್ತಿಸಾರ, ರಾಮಧಾನ್ಯ ಚರಿತ್ರೆಯಂತಹ ಮೇರು ಕೃತಿಗಳನ್ನು ನೀಡಿದ ಅವರು ಕೀರ್ತನೆ, ನಾಟಕಗಳ ಮೂಲಕ ಸಾಹಿತ್ಯ ಕ್ಷೇತ್ರಕ್ಕೆ ಅವಿಸ್ಮರಣೀಯ ಕೊಡುಗೆ ನೀಡಿದ್ದಾರೆ.

ಅವರ ಚಿಂತನೆಗಳು ಎಲ್ಲ ಕಾಲಕ್ಕೂ ಅನ್ವಯಿಸುತ್ತವೆ. ಅವುಗಳನ್ನು ಅನುಸರಿಸಿದಲ್ಲಿ ಸಮಾಜ ಸುವ್ಯವಸ್ಥೆಯಿಂದ ಇರಲು ಸಾಧ್ಯ ಎಂದರು. ಈ ಸಂದರ್ಭದಲ್ಲಿ ಮುಖಂಡರಾದ ಪ್ರವೀಣ ಕಾರಬಾರಿ, ಸಚಿನ ರಾಠೋಡ, ಭರತ ಕದಮ್, ಗುರುನಾಥ ರಾಜಗೀರಾ, ಗುಂಡಪ್ಪ ನಿಡೋದೆ, ಸಂದೀಪ ಜಾಧವ, ಓಂಕಾರ ಮೇತ್ರೆ, ಸುಭಾಷ ಲಕ್ಷ್ಮೀನಗರ, ಬಾಲಾಜಿ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಉತ್ತಮ ಆರೋಗ್ಯಕ್ಕೆ ಸರಿಯಾದ ಆಹಾರ ಕ್ರಮ ಮದ್ದು–ಡಾ.ದಿಲೀಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.9–ಫಾಸ್ಟ್‌ಫುಡ್ ಸಂಸ್ಕೃತಿಯಿಂದ ಮಕ್ಕಳಲ್ಲಿ ಅಪೌಷ್ಠಿಕತೆ ಉಂಟಾಗುತ್ತಿದ್ದು ಅನಾರೋಗ್ಯಕ್ಕೆ ಕಾರಣವಾಗುತ್ತದೆ. ಉತ್ತಮ ಆರೋಗ್ಯಕ್ಕೆ ಸರಿಯಾದ ಆಹಾರ ಕ್ರಮ ಮದ್ದಾಗಿದೆ ಎಂದು ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ದಿಲೀಪ ನಾಟೇಕಾರ ಹೇಳಿದರು.

ಬ.ವಿ.ವ ಸಂಘದ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನಗಳ ಮಹಾವಿದ್ಯಾಲಯದ ಸಮುದಾಯ ಆರೋಗ್ಯ ಶುಶ್ರೂಷಾ ವಿಭಾಗದ ವತಿಯಿಂದ ರಾಷ್ಟ್ರೀಯ ಪೌಷ್ಠಿಕ ಆಹಾರ ಸಪ್ತಾಹದ ಅಂಗವಾಗಿ ನಡೆದ ಪೌಷ್ಠಿಕ ಆಹಾರ ತಯಾರಿಕಾ ಪ್ರದರ್ಶನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಇಂದಿನ ಒತ್ತಡದ ದೈನಂದಿನ ಬದುಕಿನಲ್ಲಿ ಹೆಚ್ಚಿನ ಜನರು ಸರಿಯಾದ ಆಹಾರ ಕ್ರಮವನ್ನು ಪಾಲಿಸದೇ ಅನೇಕ ತರಹದ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಈ ತರಹದ ಪ್ರದರ್ಶನಗಳು ಮಕ್ಕಳಲ್ಲಿ ಸರಿಯಾದ ಆಹಾರ ಕ್ರಮದ ಅರಿವು ಮೂಡಿಸಲು ಸಹಕಾರಿಯಾಗಿದ್ದು ಉತ್ತಮ ಆರೋಗ್ಯಕ್ಕೆ ಸರಿಯಾದ ಆಹಾರ ಕ್ರಮವೇ ಮದ್ದು ಎಂದರು.

ಎಲ್ಲ ವಯಸ್ಸಿನವರಲ್ಲಿ ಅಪೌಷ್ಠಿಕತೆ ಹೊಡೆದೋಡಿಸಲು ಉತ್ತಮ ಆಹಾರ ಪದ್ಧತಿ ಬಹು ಮುಖ್ಯ. ಸ್ವಚ್ಛ ಮತ್ತು ಸುರಕ್ಷಿತ ಆಹಾರ ಸೇವನೆ ಅತೀ ಅವಶ್ಯಕ, ಅಲ್ಲದೇ ಆಹಾರದಲ್ಲಿ ಅತಿಯಾದ ಉಪ್ಪು, ಸಕ್ಕರೆ ಮತ್ತು ಅಡುಗೆ ಎಣ್ಣೆ ಬಳಸುವುದನ್ನು ನಿಯಂತ್ರಿಸುವುದು ತುಂಬಾ ಅವಶ್ಯಕ ಎಂದು ಅವರು ವಿವರಿಸಿದರು.

ಕಾರ್ಯಕ್ರಮದಲ್ಲಿ 20 ಕ್ಕೂ ಹೆಚ್ಚು ಗುಂಪುಗಳಾಗಿ ವಿಂಗಡಿಸಿ, ರಕ್ತದೊತ್ತಡ ನಿಯಂತ್ರಣ, ಸಕ್ಕರೆ ಖಾಯಿಲೆ, ಕಿಡ್ನಿ ಸಮಸ್ಯೆ ನಿವಾರಿಸುವ ಆಹಾರ ಪದ್ಧತಿ ಹಾಗೂ ಸಮತೋಲನ ಆಹಾರ, ಪ್ರೋಟಿನ್, ಕಾರ್ಬೋಹೈಡ್ರೇಟ್, ಮಿನರಲ್ಸ್ ಮತ್ತು ಜೀವಸತ್ವಯುಕ್ತ ಆಹಾರಗಳ ಬಗೆಗೆ ಪ್ರದರ್ಶನ ಅಲ್ಲದೇ ಅಡುಗೆ ಪದ್ಧತಿಯ ಕುರಿತು ಕೂಡ ಸವಿಸ್ತಾರವಾಗಿ ವಿವರಿಸಲಾಯಿತು. ಬ.ವಿ.ವ. ಸಂಘದ ಬಿ.ವಿ.ವಿ.ಎಸ್ ನರ್ಸಿಂಗ್ ವಿಜ್ಞಾನಗಳ ಮಹಾವಿದ್ಯಾಲಯದ ಪ್ರಾಚಾರ್ಯೆ ಪ್ರೊ. ಜಯಶ್ರೀ ಇಟ್ಟಿ ಹಾಗೂ ಶಾರದಾಂಬೆ ನರ್ಸಿಂಗ್ ವಿಜ್ಞಾನಗಳ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಪ್ರವೀಣ ಪಾಟೀಲ ಅತಿಥಿಗಳಾಗಿದ್ದರು. ಮಹಾವಿದ್ಯಾಲಯದ ಸಮುದಾಯ ಆರೋಗ್ಯ ಶುಶ್ರೂಷಾ ವಿಭಾಗದ ಮುಖ್ಯಸ್ಥೆ ಡಾ. ಶಿಲ್ಪಾ ಎನ್. ಕೂಗಲಿ ಹಾಗೂ ವಿಭಾಗದ ಸಹಾಯಕ ಪ್ರಾಧ್ಯಾಪಕ ರೇಣುಕರಾಜ ನಾಗಮ್ಮನವರ, ಉಪನ್ಯಾಸಕರಾದ ಜಗದೀಶ ಹಿರೇಮಠ ಹಾಗೂ ಲಕ್ಷ್ಮಿ ಪಾಟೀಲ ಇದ್ದರು.

# ಕನಕದಾಸರ ಚಿಂತನೆಗಳು ಸರ್ವಕಾಲಕ್ಕೂ ಪ್ರಸ್ತುತ: ಗಾಳಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.9–ಭಕ್ತ ಕನಕದಾಸರ ಕಾವ್ಯಭಾಷೆ ಅತ್ಯಂತ ಸರಳವಾಗಿದ್ದು, ಸಾಮಾಜಿಕ ಸಮಾನತೆ ಮತ್ತು ಮಾನವ ಕಳಕಳಿ ಹೊಂದಿರುವುದರಿಂದ ಅವರ ಚಿಂತನೆಗಳು ಸರ್ವಕಾಲಕ್ಕೂ ಪ್ರಸ್ತುತವಾಗಿವೆ ಎಂದು ಡಾ. ಅರುಣಕುಮಾರ ಗಾಳಿ ಹೇಳಿದರು. ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಭಕ್ತ ಕನಕದಾಸರ ಜಯಂತಿ ಪ್ರಯುಕ್ತ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಪ್ರಸಕ್ತ ಕಾಲಘಟ್ಟದಲ್ಲಿ ಜಾತಿ, ಧರ್ಮ, ಮತ–ಪಂಥಗಳ ಸಂಕುಚಿತ ಮನೋಭಾವನೆಗಳಿಂದಾಗಿ ಜಡತ್ವ ತುಂಬಿರುವ ಇಂದಿನ ಸಮಾಜಕ್ಕೆ ಕನಕದಾಸರ ವಿಚಾರಧಾರೆಗಳು ರಾಮಬಾಣವಾಗಬಲ್ಲವು ಎಂದರು.

ಕನಕದಾಸರ ಕೀರ್ತನೆಗಳು, ಸಂಗೀತ, ನಾದಮಾಧುರ್ಯ, ವ್ಯಕ್ತಿಯ ಜೀವನದಲ್ಲಿ ಹೊಸ ಮನ್ವಂತರವನ್ನು ಹುಟ್ಟು ಹಾಕುವ ಚೈತನ್ಯವನ್ನು ಹೊಂದಿದ್ದು, ಅವರ ಆದರ್ಶಗಳನ್ನು ಪಾಲಿಸುತ್ತಾ ಅವರ ಹಾಕಿಕೊಟ್ಟಿರುವ ಪಥದಲ್ಲಿ ಮುನ್ನಡೆಯಬೇಕು. ಅವರು ತೋರಿಸಿದ ಭಕ್ತಿಯ ಮಾರ್ಗದಲ್ಲಿ ನಾವು ನಡೆದು ಧನ್ಯರಾಗೋಣ ಎಂದು ಗಾಳಿ ಹೇಳಿದರು.

ಜಯಂತಿ ಅಂಗವಾಗಿ ಕಾಲೇಜಿನ ಎನ್.ಎಸ್.ಎಸ್ ಘಟಕದ ಸ್ವಯಂ ಸೇವಕರು ಕಾಲೇಜಿನ ಆವರಣದಲ್ಲಿ ಸ್ವಚ್ಛತಾ ಕಾರ್ಯವನ್ನು ಮಾಡಿದರು. ಡಾ.ಸುಮನ್ ಮುಚಖಂಡಿ ಪ್ರಾರ್ಥನೆ ಹಾಡಿದರು, ಪ್ರೊ.ಪರಸಪ್ಪ ತಳವಾರ ಕನಕದಾಸರ ಕೀರ್ತನೆ ಹಾಡಿದರು. ಪ್ರೊ.ಸಂಪತ್ತ ಲಮಾಣಿ ಸ್ವಾಗತಿಸಿದರು, ಡಾ.ಚಂದ್ರಶೇಖರ ಕಾಳನ್ನವರ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕರು, ಬೋಧ–ಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಮಕ್ಕಳನ್ನು ಪ್ರಜ್ಞಾವಂತರನ್ನಾಗಿ ಮಾಡಬೇಕಿದೆ–ಸಾವಕಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.9–ಇಂದಿನ ಮಕ್ಕಳಿಗೆ ಕೇವಲ ಗುಣಮಟ್ಟದ ಶಿಕ್ಷಣ ಕೊಡಿಸಿದರೆ ಸಾಲದು, ಮಾನವೀಯ ಮೌಲ್ಯಗಳನ್ನು, ಸಂಬಂಧಗಳನ್ನು ತಿಳಿಸಿ ಕೊಡಬೇಕಿದೆ. ಶಿಕ್ಷಕರು ವಿದ್ಯೆ, ಬುದ್ಧಿಯ ಜೊತೆಗೆ ಅವರನ್ನು ಪ್ರಜ್ಞಾವಂತರನ್ನಾಗಿ ಮಾಡಬೇಕಿದೆ ಎಂದು ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ.ಎಂ. ಸಾವಕಾರ ಹೇಳಿದರು.

ಜಿಲ್ಲೆಯ ಬೀಳಗಿ ತಾಲೂಕಿನ ಜಾನಮಟ್ಟಿ ಗ್ರಾಮದಲ್ಲಿ ಶಾಲಾ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಪಂಚಾಯತ ಬಾಗಲಕೋಟೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಬೀಳಗಿ, ಸಮೂಹ ಸಂಪನ್ಮೂಲ ಕೇಂದ್ರ ಕುಂದರಗಿ, ಸರಕಾರಿ ಮಾದರಿ ಪ್ರಾಥಮಿಕ ಶಾಲೆ ಜಾನಮಟ್ಟಿ ಸಂಯುಕ್ತ ಆಶ್ರಯದಲ್ಲಿ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಲೋತ್ಸವವೆಂದರೆ ಕಲೆಗಳ ಉತ್ಸವ, ಇದು ವಿದ್ಯಾರ್ಥಿಗಳಲ್ಲಿ ಕಲಾ ಪ್ರತಿಭೆಯನ್ನು ಪ್ರೋತ್ಸಾಹಿಸಲು, ಗುರುತಿಸಲು ಮತ್ತು ಪ್ರದರ್ಶಿಸಲು ಆಯೋಜಿಸಲಾಗುವ ಒಂದು ಸರ್ಕಾರದ ಕಾರ್ಯಕ್ರಮವಾಗಿದೆ. ವಿದ್ಯಾರ್ಥಿಗಳಲ್ಲಿರುವ ಕಲಾ ಪ್ರತಿಭೆಯನ್ನು ಉತ್ತೇಜಿಸುವುದು ಮತ್ತು ಪೋಷಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದ ಅವರು, ಆಧುನಿಕರಣದ ಭರಾಟೆಯಲ್ಲಿ ಪಾಲಕರು ತಮ್ಮ ಮಕ್ಕಳಿಗೆ ಮೊಬೈಲ್ ಸಂಸ್ಕೃತಿಯನ್ನು ಕಲಿಸುತ್ತಿರುವುದು ಅತ್ಯಂತ ಕಳವಳಕಾರಿ ಸಂಗತಿ ಎಂದರು. ಸಮೂಹ ಸಂಪನ್ಮೂಲ ವ್ಯಕ್ತಿ ಮಹೇಶ ತೋಟದ ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಪ್ರದರ್ಶನಕ್ಕೊಡ್ಡುವ ಸ್ಪರ್ಧೆ ಇದಾಗಿದೆ. ಕಲಿಕೆಯಂದರೆ ಕೇವಲ ಓದು ಬರಹವಲ್ಲ. ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಂದ ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಅತ್ಯಾವಶ್ಯಕವಾಗಿವೆ. ವಿದ್ಯಾರ್ಥಿಗಳು ತಮ್ಮ ಕಲಾ ಪ್ರತಿಭೆಯನ್ನು ಪ್ರದರ್ಶಿಸಲು ಮತ್ತು ಕೌಶಲ್ಯಗಳನ್ನು ವಿಸ್ತರಿಸಲು ಇದು ಅವಕಾಶ ನೀಡುತ್ತದೆ ಎಂದರು.

ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಎಸ್.ವಿ.ಪಾಟೀಲ ಮಾತನಾಡಿ, ಇದು ವಿದ್ಯಾರ್ಥಿಗಳಲ್ಲಿ ದೇಶದ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯ ಬಗ್ಗೆ ಮೆಚ್ಚುಗೆಯನ್ನು ಬೆಳೆಸುತ್ತದೆ ಎಂದರು. 19 ಶಾಲೆಗಳ 426 ವಿದ್ಯಾರ್ಥಿಗಳು ಭಾಗವಹಿಸಿದ್ದರು. 26 ಶಿಕ್ಷಕರು ನಿರ್ಣಾಯಕರಾಗಿ ಕಾರ್ಯನಿರ್ವಹಿಸಿದರು.

ಎಸ್‌ಡಿಎಂಸಿ ಅಧ್ಯಕ್ಷ ಲಕ್ಷ್ಮಣ ಹಂಚಿನಾಳ ಅಧ್ಯಕ್ಷತೆ ವಹಿಸಿದ್ದರು. ಎಂ.ಎಂ.ಹನಮರ, ರಂಗಪ್ಪ ಕವಳ್ಳಿ, ಎಸ್.ಎಚ್.ಬಾರಾಗಣಿ, ಎಲ್.ಡಿ.ಹಳ್ಳಿ, ಬಿ.ಎಸ್.ನಿರಾಕಾರಿ, ರುಕ್ಮೀಣಿ ಡಬರಿ, ಬಸು ಸಂಶಿ, ತಿಪ್ಪಣ್ಣ ಸನ್ನಿ, ಸುರೇಶ ಬರಗಾಲ, ಸಿದ್ದಪ್ಪ ಬೆಣ್ಣೂರ, ಸುನಂದಾ ಚಿಗರಿ, ಎಸ್.ಎಂ.ಕಡ್ಲಿಮಟ್ಟಿ ಮತ್ತಿತರಿದ್ದರು. ಗೋಪಾಲ ಮಾಡಬಾಳ ನಿರೂಪಿಸಿದರು. ನವೀನ ಬಸರಿಕಟ್ಟಿ ಸ್ವಾಗತಿಸಿದರು. ಪಿ.ವೈ.ಬಂದಕೇರಿ ವಂದಿಸಿದರು.

# ಜನ ಸಮೂಹದಿಂದ ಮೊತ್ತ ಸಂಗ್ರಹ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜಿಲ್ಲೆಯ ಶಹಾಪೂರ ನಗರದಲ್ಲಿ. ಜನ ಸಂಮೋಹದಿಂದ ಸಂಗ್ರಹವಾದ ಮೊತ್ತ. 10578 ರೂಪಾಯಿಗಳು. ರಾಜ್ಯ ಸಮಿತಿಗೆ ಕಳಿಸಲು ತೀರ್ಮಾನಿಸಲಾಯಿತು.

ಅಕಖ (ಒ) ಪಕ್ಷದ 105 ನೇ ವರ್ಷದ ದಿನಾಚರಣೆ ಅಂಗವಾಗಿ ಜನ ಸಮೂಹದಲ್ಲಿ ಪ್ರಚಾರ ನಡೆಸುವ ಮುಖಾಂತರ. ಶೋಷಣೆ ರೈತ ಸಮಾಜಕ್ಕಾಗಿ. ಭ್ರಷ್ಟಾಚಾರ ಮುಕ್ತಕ್ಕಾಗಿ. ರೈತ ಕಾರ್ಮಿಕರ ಅಭಿವೃದ್ಧಿಗಾಗಿ. ಜನ ಸಮೂಹದಿಂದ ನಿಧಿ ಸಂಗ್ರ ಮಾಡುವ ಮುಖಾಂತರ. ಡಿಸೆಂಬರ್ 21ರಂದು ಬೃಹತ್ ಆದ ಹೋರಾಟಕ್ಕೆ ಬೆಂಗಳೂರಿನ ಫ್ರೀಡಂ ಪಾರ್ಕಿಗೆ ಕರೆ ನೀಡಲಾಗಿದೆ. ಎಲ್ಲರೂ ಸಹಾಯ ಸಹಕಾರ ನೀಡಿ ಎಲ್ಲರೂ ಸಹಕಾರ ನೀಡಿ ಭಾಗವಹಿಸಬೇಕೆಂದು ಸಿಪಿಐ ಎಂ ಪಕ್ಷ ಯಾದಗಿರಿ ಜಿಲ್ಲಾ ಸಮಿತಿ. ವಿನಂತಿಸಿತು. ಸಿಪಿಐ ಪಕ್ಷದ ಜಿಲ್ಲಾ ಕಾರ್ಯದರ್ಶಿ ಚೆನ್ನಪ್ಪ ಆನೆಗುಂದಿ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಎ□ಮ್ ಸಾಗರ್. ಭೀಮರಾಯ ಪೂಜಾರಿ.

ಸಿಪಿಐಎಂ ಪಕ್ಷದ. ರಂಗಮ್ಮ ಕಟ್ಟಿಮನಿ ಗುಲಾಂ ಸಾಬ್ ನಾಗನಟಗಿ. ಅಮಲಯ ಬೇವಿನಕಟ್ಟಿ ದೇವು ಹೊತಪೇಟೆ. ಚಂದ್ರು ಕಾಡಿನಗೇರಿ ನಿಂಗಪ್ಪ ಕುರಕುಂದಿ ಶಿವಕುಮಾರ್ ಐಕುರ್. ಇತರರು ಇದ್ದರು.

